ಸಂಪುಟ: 13 Volume | ಸಂಚಿಕೆ: 287 Issue | ಪುಟಗಳು 08 Pages | ಶುಕ್ರವಾರ 02 ಜನವರಿ 2026 | ₹6 | PRGINO.120927 (RNINO: KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಖಾಲಿ ಜೇಬು, ಹಸಿದ ಹೊಟ್ಟೆ, ಒಡೆದ ಹೃದಯ ಈ ಮೂರು ಜೀವನದಲ್ಲಿ ಅತ್ಯುತ್ತಮ ಪಾಠವನ್ನು ಕಲಿಸುತ್ತದೆ.

–ಸುಭಾಷಿತ

ಗ್ರಾಮಗಳ ಸ್ವಚ್ಛತೆ ಆದ್ಯತೆಯಾಗಲಿ: ಶಿವಪೂರೆ 6

ರಸ್ತೆ ಸುರಕ್ಷತಾ ಮಾಸಾಚರಣೆ 7

ಕರ್ನಾಟಕ ಮಾಹಿತಿ ಹಕ್ಕು ಆಯೋಗಕ್ಕೆ ಭೇಟಿ 8



ಹೊಸ ವರ್ಷದ ಪ್ರಯುಕ್ತ ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳ ಜೊತೆಗೆ ಪೊಲೀಸ್ ಇಲಾಖೆಯ ಐಜಿಪಿ ಮತ್ತು ಮೇಲ್ಮಟ್ಟದ ಅಧಿಕಾರಿಗಳು ಹಾಗೂ ಅರಣ್ಯ ಇಲಾಖೆಯ ಸಿಸಿಎಫ್ ಜಾಗೂ ಮೇಲ್ಮಟ್ಟದ ಅಧಿಕಾರಿಗಳು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ವಿಧಾನಸೌಧದ ಕಚೇರಿಯಲ್ಲಿ ಭೇಟಿಯಾಗಿ ಹೊಸ ವರ್ಷದ ಶುಭಾಶಯ ಕೋರಿದರು. ಮುಖ್ಯಮಂತ್ರಿಗಳು ಸರ್ಕಾರದ ಎಲ್ಲಾ ಹಿರಿಯ ಅಧಿಕಾರಿಗಳ ಜೊತೆಗೆ ಹೊಸ ವರ್ಷದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡು ಬಳಿಕ ಮಾತನಾಡಿದರು.

## ಪಿಎಸ್ಐಗೆ ಶ್ರೀಗಳ ಕಪಾಳಮೋಕ್ಷ

**ವಿಜಯಪುರ:** ಇಲ್ಲಿ ಖಾಸಗಿ ಸಹಭಾಗಿತ್ವದಲ್ಲಿ ನಿರ್ಮಾಣವಾಗುತ್ತಿರುವ ಮೆಡಿಕಲ್ ಕಾಲೇಜಿಗೆ ವಿರೋಧಿಸಿ, ನಾಲ್ಕೈದು ದಿನಗಳಿಂದ ನಡೆಯುತ್ತಿರುವ ಪ್ರತಿಭಟನೆ ತೀವ್ರ ಸ್ವರೂಪ ಪಡೆದುಕೊಂಡಿದೆ. ಇಲ್ಲಿ ನಡೆದ ಪ್ರತಿಭಟನೆಯಲ್ಲಿ ಸ್ವಾಮೀಜಿಗಳು ಪಾಲ್ಗೊಂಡಿದ್ದಾರೆ. ಇದೇ ವೇಳೆ ಪ್ರತಿಭಟನಾಕಾರರು ಸಚಿವ ಎಂ.ಬಿ.ಪಾಟೀಲ್ ನಿವಾಸಕ್ಕೆ ಮುತ್ತಿಗೆ ಹಾಕಲು ಯತ್ನಿಸಿದ್ದಾರೆ. ಪ್ರತಿಭಟನನಿರತರನ್ನು ಸೊಲ್ಲಾಪುರ ರಸ್ತೆಯಲ್ಲಿ ಪೊಲೀಸರು ತಡೆದರು.ಈ ವೇಳೆ ಪ್ರತಿಭಟನಾಕಾರರು, ಪೊಲೀಸರ ನಡುವೆ ನೂಕಾಟ ತಳ್ಳಾಟ ನಡೆದು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದ ಸಂಗನಬಸವ ಸ್ವಾಮೀಜಿ ಸಿಟ್ಟಿಗೆದ್ದು ಏಕಾಏಕಿ ಪಿಎಸ್ ಐ ಲಮಾಣಿ ಮತ್ತು ಪೊಲೀಸ್ ಸಿಬ್ಬಂದಿಗೆ ಕಪಾಳಮೋಕ್ಷ ಮಾಡಿದ್ದಾರೆ. ಈ ಘಟನೆ ನಂತರ ಸ್ಥಳದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿದೆ. ನಂತರ ಶ್ರೀಗಳನ್ನು ವಶಕ್ಕೆ ಪಡೆಯಲಾಗಿದೆ.

## ಕೆಎಸ್ಆರ್‌ಟಿಸಿ ಆಪ್ ಲೋಕಾರ್ಪಣೆ

**ಬೆಂಗಳೂರು:** ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ ಅವರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಸಾರಿಗೆ ಮಿತ್ರ HRMS ಮೊಬೈಲ್ ಆಪ್ (ಆವೃತ್ತಿ 2.0.0) ಅನ್ನು ಲೋಕಾರ್ಪಣೆಗೊಳಿಸಿದ್ದಾರೆ. ಈ ಮೊಬೈಲ್ ಆಪ್ ಅನ್ನು ಡಿಜಿಟಲ್ ಪರಿವರ್ತನೆ, ಪಾರದರ್ಶಕತೆ, ಕಾರ್ಯಕ್ಷಮತೆ ವೃದ್ಧಿಗೊಳಿಸಲು ಮತ್ತು ನೌಕರರ ಕಲ್ಯಾಣದ ಮೇಲೆ ಬಲವಾದ ಗಮನವನ್ನು ಕೇಂದ್ರೀಕರಿಸಿ ಹೊಸ ವರ್ಷದ ಸಾರ್ಥಕ ಆರಂಭವಾಗಿ ಇದನ್ನು ಬಿಡುಗಡೆಗೊಳಿಸಲಾಗಿದೆ.

**ಸಾರಿಗೆ ಮಿತ್ರ HRMS ಮೊಬೈಲ್ ಆಪ್‌ನ ಪ್ರಮುಖ ವೈಶಿಷ್ಟ್ಯಗಳೇನು?**

- ಜಿಯೋಫೆನ್ಸಿಂಗ್ ಆಧಾರಿತ ಹಾಜರಾತಿ ವ್ಯವಸ್ಥೆ, ಹಾಜರಾತಿ ವೀಕ್ಷಣೆ
- ವೈಯಕ್ತಿಕ ವಿವರಗಳು, ಸೇವಾ ದಾಖಲಾತಿ (ಸರ್ವಿಸ್ ರಿಜಿಸ್ಟರ್) ವಿವರ, ಕುಟುಂಬ ಸದಸ್ಯರ ಮಾಹಿತಿ, ನಾಮಿನಿ ವಿವರಗಳ ವೀಕ್ಷಣೆ
- ಆಂತರಿಕ ಸಂವಹನ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಿ, ನಿಗಮದ ವಿವಿಧ ವಿಭಾಗಗಳಿಂದ ಹೊರಡಿಸಲಾಗುವ ಸುತ್ತೋಲೆ ವಿವರಗಳ ಲಭ್ಯತೆ



## ಬೆಂಗಳೂರು ಗ್ಯಾಸ್ ಚೇಂಬರ್ ಆಗಲಿದೆ

**ಬೆಂಗಳೂರು:** ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ ವಾಯುಮಾಲಿನ್ಯ ಅತಿಯಾಗಿದೆ. ಬೆಂಗಳೂರಿಗೂ ಈ ಸ್ಥಿತಿ ಬಾರದಂತೆ ಎಲ್ಲ ಅಗತ್ಯ ಮುಂಜಾಗರೂಕತಾ ಕ್ರಮಗಳನ್ನು ಕೈಗೊಳ್ಳುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ. ವಿವಿಧ ಯೋಜನೆಗಳ ಅನುಷ್ಠಾನದಿಂದ ಪರಿಸರದ ಮೇಲಾಗುವ ಪರಿಣಾಮಗಳ ಕುರಿತಂತೆ ಪರಾಮರ್ಶಿಸಲು ನೇಮಕಗೊಂಡಿರುವ ರಾಜ್ಯ ತಜ್ಞರ ನಿಷ್ಕರ್ಷ ಸಮಿತಿಯ ಅಧ್ಯಕ್ಷ, ಸದಸ್ಯರು ಹಾಗೂ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಧಾನ ಕಾರ್ಯದರ್ಶಿಗಳ ಜೊತೆ ಮಾತನಾಡಿ, ನೂತನ ವರ್ಷದಲ್ಲಿ ಪ್ರಕೃತಿ, ಪರಿಸರ ಸಂರಕ್ಷಣೆಗೆ ಸಂಕಲ್ಪ ಮಾಡಿ ಎಂದಿದ್ದಾರೆ.

# ಹೈ ತಾಳ ವಿರೋಧಿ ಮೇಳ

## ಕೋಗಿಲು ಬಡಾವಣೆ ಮನೆಗಳ ಧ್ವಂಸ ಪ್ರಕರಣ | ಬಿಜೆಪಿ, ಜೆಡಿಎಸ್ ಹೋರಾಟದ ಎಚ್ಚರಿಕೆ

- ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಯಲಹಂಕದ ಕೋಗಿಲು ಬಡಾವಣೆಯಲ್ಲಿ ಮನೆಗಳ ಧ್ವಂಸ ಪ್ರಕರಣ ರಾಜಕೀಯ ತಿರುವು ಪಡೆದಿದೆ. ಹೈಕಮಾಂಡ್ ನಿರ್ದೇಶನಕ್ಕೆ ಸಕಾರ ಮಣೆಹಾಕುತ್ತಿದೆ ಎನ್ನುವ ವಿಷಯ ಚರ್ಚೆಗೆ ಗ್ರಾಸವೊದಗಿಸಿದೆ.

ಬಂಡೆಹೊಸೂರಿನ ಬೈಯಪ್ಪನಹಳ್ಳಿಯಲ್ಲಿರೋ ಅಪಾರ್ಟ್‌ಮೆಂಟ್‌ನಲ್ಲಿ ನಿರಾಶ್ರಿತರಿಗೆ ಮನೆ ನೀಡಲು ನಿರ್ಧರಿಸಲಾಗಿದೆ ಎಂದು ತಿಳಿದು ಬಂದಿದೆ.

**ಜನರಿಂದ ಆಕ್ರೋಶ:** ಕೋಗಿಲು ನಿವಾಸಿಗಳಿಗೆ ಸೂರು ಸರ್ಕಾರ ಕಲ್ಪಿಸಿಕೊಡುತ್ತಿದ್ದು, ಮನೆ ಕಳೆದುಕೊಂಡು ದಶಕಗಳೇ ಉರುಳಿದರೂ ರಾಜ್ಯದ ಅನೇಕ ಕಡೆಗಳಲ್ಲಿ ಅರ್ಹ ಸಂತ್ರಸ್ತರತ್ತ ಸರ್ಕಾರ ಗಮನ ಹರಿಸಿಲ್ಲ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಪ್ರತಿಪಕ್ಷಗಳ ಆರೋಪ:** ಬಿಜೆಪಿ ಮತ್ತು ಜೆಡಿಎಸ್, ಇದರ ವಿರುದ್ಧ ದೊಡ್ಡ ಅಭಿಯಾನವನ್ನು ನಡೆಸಲು ಪ್ಲ್ಯಾನ್ ರೂಪಿಸಿಕೊಂಡಿದೆ. ಕಾಂಗ್ರೆಸ್ ಹೈಕಮಾಂಡ್ ಅನ್ನು ಮೆಚ್ಚಿಸಲು ಸಿಎಂ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮುಂದಾಗಿದ್ದಾರೆ ಎಂದು ಬಿಜೆಪಿ ಆರೋಪಿಸಿದೆ.



### ಇವರಿಗೆ ಇಲ್ಲದ್ದು ಅವರಿಗೇಕೆ..?

ಶಿವಮೊಗ್ಗ ಜಿಲ್ಲೆಯಲ್ಲಿ ಲಿಂಗನಮಕ್ಕಿ ಜಲಾಶಯಕ್ಕಾಗಿ ಭೂಮಿ ಕಳೆದ ಕೊಂಡವರಿಗೆ 65 ವರ್ಷದಿಂದ ಹಕ್ಕುಪತ್ರ ನೀಡಿಲ್ಲ. ಬೆಳಗಾವಿ ನೆರೆ ಸಂತ್ರಸ್ತರ ಗೋಳನ್ನೂ ಹೇಳುವವರಿಲ್ಲ. 500 ಕುಟುಂಬಗಳು ಬೀದಿಗೆ ಬಿದ್ದಿವೆ. ಆದರೆ ಕೋಗಿಲು ನಿವಾಸಿಗಳಿಗೆ ಇಷ್ಟು ಬೇಗನೆ ಫ್ಲ್ಯಾಟ್ ಗಳ ಹಂಚಿಕೆ ಮಾಡುತ್ತಿರುವುದೇಕೆ ಎಂದು ಪ್ರತಿಪಕ್ಷಗಳು ಪ್ರಶ್ನೆ ಮಾಡುತ್ತಿವೆ.

### 5ರಂದು ಬೃಹತ್ ಹೋರಾಟಕ್ಕೆ ನಿರ್ಧಾರ

ಕೋಗಿಲು ಅಕ್ರಮ ಮನೆ– ಗುಡಿಸಲುಗಳ ತೆರವು ಪ್ರಕರಣದಲ್ಲಿ ವಾಸಸ್ಥಳ ಕಳಕೊಂಡವರಿಗೆ ಮನೆ ನೀಡಲು ಮುಂದಾದ ಸರಕಾರದ ಕ್ರಮದ ವಿರುದ್ಧ ಇದೇ 5ರಂದು ಬಿಜೆಪಿ ವತಿಯಿಂದ ಫ್ರೀಡಂ ಪಾರ್ಕಿನಲ್ಲಿ ದೊಡ್ಡ ಪ್ರಮಾಣದ ಹೋರಾಟ ನಡೆಸಲಿದ್ದೇವೆ ಎಂದು ಶಾಸಕ ಎಸ್.ಆರ್.ವಿಶ್ವನಾಥ್ ತಿಳಿಸಿದ್ದಾರೆ.

### ಹೈ ಮೆಚ್ಚಿಸಲು, ಕುರ್ಚಿ ಉಳಿಸಿಕೊಳ್ಳಲು..!

ಮುಖ್ಯಮಂತ್ರಿ ಕುರ್ಚಿ ಪಡೆಯುವವರ, ಉಳಿಸಿಕೊಳ್ಳುವವರ ನಡುವಿನ ಜಗ್ಗಾಟದಲ್ಲಿ, ನಿಯಮಗಳೂ ಲೆಕ್ಕಕ್ಕಿಲ್ಲ, ರಾಜ್ಯದ ಹಿತವೂ ಬಲಿ. ಕರ್ನಾಟಕದ ಕಾಂಗ್ರೆಸ್ ಸರ್ಕಾರದ ಈ ಕೇರಳ ಹಿತಾಸಕ್ತಿ ರಕ್ಷಣೆ ಗ್ಯಾರಂಟಿ ವಿರುದ್ಧ ಪಕ್ಷ ಬೀದಿಗಿಳಿದು ಹೋರಾಡಲಿದೆ ಎಂದು ರಾಜ್ಯ ಬಿಜೆಪಿ ಘಟಕದ ಅಧ್ಯಕ್ಷ ಬಿವೈ ವಿಜಯೇಂದ್ರ ಗುಡುಗಿದ್ದಾರೆ.

### ಕೇರಳ ನನ್ನ ನಡುವೆ ಉತ್ತಮ ಬಾಂಧವ್ಯ: ಡಿಸಿಎಂ

ಕೇರಳದ ಜನ, ನನ್ನ ನಡುವೆ ಉತ್ತಮ ಬಾಂಧವ್ಯವಿದೆ. ಕೇರಳ ಚುನಾವಣೆ ಪ್ರಚಾರಕ್ಕೆ ನಾನು ಹೋಗುತ್ತೇನೆ. ಅಲ್ಲಿ ನಮ್ಮ ಸರ್ಕಾರ ಬರಲಿದೆ. ಹೀಗಾಗಿ ಬಿಜೆಪಿಯವರು ಗೊಂದಲ ಸೃಷ್ಟಿಸುತ್ತಿದ್ದಾರೆ. ಅವರು ಈ ರೀತಿ ಹುಳಿ ಹಿಂಡುವುದು ಬೇಡ. ನಮ್ಮ ಪಕ್ಷದ ನಾಯಕರು ನಮಗೆ ಸಲಹೆ ನೀಡಿದ್ದು, ನಾವು ಅದನ್ನು ಸ್ವೀಕರಿಸುತ್ತೇವೆ ಎಂದು ಡಿಕೆಶಿವಕುಮಾರ್ ಹೇಳಿದ್ದಾರೆ.



ಗುದಗೆ ಆಸ್ಪತ್ರೆಯ ಖ್ಯಾತ ತಜ್ಞ ವೈದ್ಯರಾದ ಡಾ.ನಿತೀನ್ ಗುದಗೆ ಸರ್ ಅವರನ್ನು ಇಂದು ಮಲ್ಲಮ್ಮ ನುಡಿ ಪತ್ರಿಕೆ ನೀಡಲಾಯಿತು.

## 8ಕೋಟಿ ಬೆಲೆಯ 160 ಕಿ.ಗ್ರಾಂ.ಖಾಟ್ ಜಪ್ತಿ

**ಬೆಂಗಳೂರು:** ಬೆಂಗಳೂರಿನಿಂದ ಕಾರ್ಯನಿರ್ವಹಿಸುತ್ತಿದ್ದ ಪ್ರಮುಖ ಖಾಟ್ ಎಲೆಗಳ ಅಕ್ರಮ ಸಾಗಣೆ ಅಂತಾರಾಷ್ಟ್ರೀಯ ಜಾಲವನ್ನು ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ (ಎನ್ಸಿಬಿ) ಭೇದಿಸಿದೆ. ಈ ಕಾರ್ಯಾಚರಣೆಯಲ್ಲಿ 8 ಕೋಟಿ ರೂ. ಮೌಲ್ಯದ 160 ಕಿಲೋಗ್ರಾಂ ತೂಕದ ಖಾಟ್ ಎಲೆಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿದುಬಂದಿದೆ. 2018ರಲ್ಲಿ ಎನ್ಡಿಪಿಎಸ್ ಕಾಯ್ದೆಯಡಿ ಖಾಟ್ ಅನ್ನು ಮಾದಕ ವಸ್ತು ಪಟ್ಟಿಗೆ ಸೇರಿಸಲಾಗಿತ್ತು. ಆ ಬಳಿಕ ಇಷ್ಟು ದೊಡ್ಡ ಪ್ರಮಾಣದಲ್ಲಿ ಖಾಟ್ ಎಲೆಗಳನ್ನು ವಶಪಡಿಸಿಕೊಂಡಿರೋದು ರಾಜ್ಯದಲ್ಲಿ ಇದೇ ಮೊದಲು ಎಂದು ಎನ್ಸಿಬಿ ತಿಳಿಸಿದೆ.

## ಪೊಲೀಸ್ ಇಲಾಖೆಗೆ ಮೇಜರ್ ಸರ್ಜರಿ

**ಬೆಂಗಳೂರು:** ರಾಜ್ಯ ಸರ್ಕಾರ ಕರ್ನಾಟಕ ಪೊಲೀಸ್ ಇಲಾಖೆಗೆ ಮೇಜರ್ ಸರ್ಜರಿ ಮಾಡಿದೆ. ಒಟ್ಟು 68 ಮಂದಿ ಐಪಿಎಸ್ ಅಧಿಕಾರಿಗಳ ವರ್ಗಾವಣೆ ಮತ್ತು ಮುಂಬಡ್ತಿಗೆ ಆದೇಶಿಸಿದೆ.

ಆರ್ಥಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ವಿ.ರಶ್ಮಿ ಮಹೇಶ್, ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಾಟೇರಿಯಾ, ವಾಣಿಜ್ಯ ಇಲಾಖೆಯ ಜಂಟಿ ಕಾರ್ಯದರ್ಶಿ ದೀಪಕ್ ಜೈನ್, ಆರ್ಥಿಕ ಇಲಾಖೆಯ ಜಂಟಿ ಕಾರ್ಯದರ್ಶಿ ಡಾ. ಏಕ್ರೂಪ್ ಕೌರ್, ಬಿಎಂಆರ್ಸಿಎಲ್ನ ವ್ಯವಸ್ಥಾಪಕ ನಿರ್ದೇಶಕ ರವಿಶಂಕರ್ ಜೆ. ಸೇರಿದಂತೆ 68 ಮಂದಿ ಅಧಿಕಾರಿಗಳಿಗೆ ಮುಂಭಡ್ತಿ ನೀಡಲಾಗಿದೆ.

ಐವರು ಪೊಲೀಸ್ ಉಪ ಆಯುಕ್ತರಾದ (ಡಿಸಿಪಿಗಳು) ಎನ್ ಯತೀಶ್ (ಪಶ್ಚಿಮ), ವಿಕ್ರಮ್ ಅಮಟೆ (ಪೂರ್ವ), ಸೈದುಲು ಅದಾವತ್ (ವೈಟ್ಫೀಲ್ಡ್), ಮೊಹಮ್ಮದ್ ಸುಜೀತಾ (ಆಗ್ನೇಯ) ಮತ್ತು ಮಿಥುನ್ ಕುಮಾರ್ (ಈಶಾನ್ಯ) ಅವರು ಬೆಂಗಳೂರಿಗೆ ವರ್ಗಾವಣೆಗೊಂಡಿದ್ದಾರೆ.

## ಜೈಲಲ್ಲಿ ಐಷಾರಾಮಿ ಜೀವನ ಝಲಕ್

**ಕಲಬುರಗಿ:** ನಗರ ಹೊರ ವಲಯದ ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಕೈದಿಗಳ ಐಷಾರಾಮಿ ಜೀವನ ಚರ್ಚೆಗೆ ಗ್ರಾವೊದಗಿಸಿದೆ.

ಜೈಲಿನಲ್ಲಿನಡೆಯುವ ಐಷಾರಾಮಿ ಜೀವನದ ಮತ್ತೊಂದು ವಿಡಿಯೋ ಬುಧವಾರ ವೈರಲ್ ಆಗಿದೆ. ಜೈಲು ಎನ್ನುವ ಶಿಕ್ಷೆ ಅನುಭವಿಸುವ ಸ್ಥಳದಲ್ಲಿ ಕ್ಲಬ್‌ಗಳನ್ನು ಮೀರಿಸುವಂತೆ ಕೈದಿಗಳು ಬಿಂದಾಸ್ ಲೈಫ್ ನಡೆಸುತ್ತಿರುವ ದೃಶ್ಯ ವಿಡಿಯೊದಲ್ಲಿದೆ. ಕೈದಿಗಳು ಬ್ರ್ಯಾಂಡೆಡ್ ಮದ್ಯ ಸೇವಿಸುತ್ತಾ, ಸಿಗರೇಟ್ ಸೇದುತ್ತಾ, ಗುಂಪು ಗುಂಪಾಗಿ ಜೂಜಾಟದಲ್ಲಿ ತೊಡಗಿರುವುದು ಗೋಚರಿಸುತ್ತಿದೆ. ಜೈಲಿನ ಸಿಬ್ಬಂದಿ ಕಣ್ಗಾವಲಿನಲ್ಲಿ ಇರುವ ಕೈದಿಗಳು ಗುಂಪಾಗಿ ಕ್ಲಬ್‌ಗಳಲ್ಲಿ ನಡೆಯುವಂತೆ ಇಸ್ಪೀಟ್ ಆಡುವುದು, ಸಿಗರೇಟು ಸೇದುವುದು, ಮದ್ಯ ಸೇವನೆ ಹೇಗೆ ಸಾಧ್ಯ ಎನ್ನುವ ಟೀಕೆಗೆ ಕಾರಣವಾಗಿದೆ. ಜೈಲಿನಲ್ಲಿಎಲ್ಲವೂ ಪೂರೈಕೆ ಸುಲಭ ಸದ್ಯ ಬಂದಿರುವ ವಿಡಿಯೋಗಳನ್ನು ನೋಡಿದರೆ, ಜೈಲಿನಲ್ಲಿಏನು ಬೇಕಾದರೆ ತರಿಕೊಳ್ಳುವುದು ಅತೀ ಸುಲಭ ಎಂಬುದು ಕಂಡು ಬರುತ್ತಿದೆ.

## ಪಟ್ಟಿ ಕೆಲಸಕ್ಕೆ ಶಿಕ್ಷಕರು ಬೇಡ

- ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಮತದಾರರ ಪಟ್ಟಿ ಮ್ಯಾಪಿಂಗ್ ಮಾಡುವ ಕೆಲಸಕ್ಕೆ ಪ್ರೌಢಶಾಲಾ ಶಿಕ್ಷಕರ ಬದಲಿಗೆ ಅಧಿಕಾರಿಗಳನ್ನೇ ನಿಯೋಜಿಸಬೇಕು ಎಂದು ವಿಧಾನ ಪರಿಷತ್ ಮಾಜಿ ಸದಸ್ಯರು ಹಾಗೂ ಜೆಡಿಎಸ್ ನಗರ ಘಟಕದ ಅಧ್ಯಕ್ಷ ಹೆಚ್.ಎಂ. ರಮೇಶ್ ಗೌಡ ಅವರು ರಾಜ್ಯ ಸರಕಾರಕ್ಕೆ ಒತ್ತಾಯ ಮಾಡಿದ್ದಾರೆ. ಈ ಬಗ್ಗೆ ಅವರು ಶಾಲಾ ಶಿಕ್ಷಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ರಶ್ಮಿ ಮಹೇಶ್ ಮತ್ತು ಶಾಲಾ ಶಿಕ್ಷಣ ಇಲಾಖೆಯ ಆಯುಕ್ತ ವಿಕಾಸ್ ಕಿಶೋರ್ ಸುರಳ್ಕರ್ ಅವರನ್ನು ಪ್ರತ್ಯೇಕವಾಗಿ ಭೇಟಿ ಮಾಡಿ ಮನವಿ ಸಲ್ಲಿಸಿದ್ದಾರೆ. ಪ್ರಸಕ್ತ ಸಾಲಿನ ಶೈಕ್ಷಣಿಕ ವರ್ಷದ ಎಸ್ಎಸ್ಎಲ್ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಮಾನ್ಯತೆ ನವೀಕರಣದ ಪ್ರತಿಯನ್ನು ಕಡ್ಡಾಯಗೊಳಿಸದೆ ಎಲ್ಲಾ ವಿದ್ಯಾರ್ಥಿಗಳಿಗೆ ಅದೇ ಶಾಲೆಯಲ್ಲಿ ಪರೀಕ್ಷೆಗೆ ಹಾಜರಾಗಲು ಕ್ರಮ ವಹಿಸಬೇಕು ಹಾಗೂ ಮಕ್ಕಳ ಪರೀಕ್ಷೆಗಳು ಸಮೀಪಿಸುತ್ತಿರುವುದರಿಂದ 2002ರ ಮತದಾರರ ಪಟ್ಟಿಗೆ 2025ರ ಮತದಾರರ ಪಟ್ಟಿಯನ್ನು ಮ್ಯಾಪಿಂಗ್ ಮಾಡುವ ಕಾರ್ಯಗಳಿಂದ ಪ್ರೌಢಶಾಲಾ ಶಿಕ್ಷಕರನ್ನು ಕೈಬಿಟ್ಟು ಬೇರೆ ಇಲಾಖೆಯ ಅಧಿಕಾರಿಗಳಿಂದ ಈ ಕಾರ್ಯವನ್ನು ಮಾಡಿಸಬೇಕೆಂದು ಕೋರಿ ಮನವಿ ಪತ್ರಗಳನ್ನು ನೀಡಿದ್ದಾರೆ.

## ಅರಣ್ಯ ಇಲಾಖೆ ದೇಶಕ್ಕೆ ಮಾದರಿ

- ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಅಧಿಕಾರಿಗಳ ಮಾರ್ಗದರ್ಶನದಲ್ಲಿ ಮುಂಚೂಣಿ ಸಿಬ್ಬಂದಿ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದು, ಕರ್ನಾಟಕ ಅರಣ್ಯ ಇಲಾಖೆ ದೇಶಕ್ಕೇ ಮಾದರಿಯಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಇಲಾಖೆಯ ಉನ್ನತಾಧಿಕಾರಿಗಳ ಜೊತೆ ಔಪಚಾರಿಕ ಸಭೆ ನಡೆಸಿದ ಅವರು, ಕೊಡಗಿನಲ್ಲಿ ಇಂದು ಆನೆ ದಾಳಿಗೆ ವ್ಯಕ್ತಿಯೊಬ್ಬರು ಮೃತಪಟ್ಟಿರುವುದು ಅತ್ಯಂತ ನೋವಿನ ಸಂಗತಿ. ಮಾನವ–ವನ್ಯಜೀವಿ ಸಂಘರ್ಷ ದೊಡ್ಡ ಸವಾಲಾಗಿದ್ದು, ಇದಕ್ಕೆ ಶಾಶ್ವತ ಪರಿಹಾರ ಒದಗಿಸಲು ತಜ್ಞರ ಸಲಹೆ ಪಡೆದು ಎಲ್ಲರೂ ಪ್ರಾಮಾಣಿಕವಾಗಿ, ಶ್ರದ್ಧೆಯಿಂದ ಕಾರ್ಯನಿರ್ವಹಿಸಬೇಕು ಎಂದಿದ್ದಾರೆ.

ಅಮೂಲ್ಯವಾದ ಮಾನವ ಜೀವಕ್ಕೂ ತೊಂದರೆ ಆಗದಂತೆ ಹಾಗೂ ವನ್ಯಜೀವಿಗಳಿಗೂ ಹಾನಿ ಆಗದಂತೆ ಮತ್ತು ವನ್ಯಜೀವಿಗಳಿಂದ ರೈತರು ಕಷ್ಟಪಟ್ಟು ಬೆಳೆದ ಬೆಳೆ ಹಾನಿ ಆಗದಂತೆ ಅಧಿಕಾರಿಗಳು ಕಾರ್ಯಯೋಜನೆ ರೂಪಿಸಬೇಕು ಎಂದು ಸೂಚಿಸಿದ್ದಾರೆ. ಸಚಿವರಾದ ಬಳಿಕ ಅರಣ್ಯ ಒತ್ತುವರಿ ತೆರವಿಗೆ ಹಾಗೂ ಪ್ರಕೃತಿ ಪರಿಸರ ಸಂರಕ್ಷಣೆಗೆ ಒತ್ತು ನೀಡಿದ್ದು, ನಿಮ್ಮೆಲ್ಲರ ಸಹಕಾರದಿಂದ ಕೋಟ್ಯಂತರ ರೂಪಾಯಿ ಬೆಲೆಬಾಳುವ ಅರಣ್ಯ ಒತ್ತುವರಿ ತೆರವುಗೊಳಿಸಲಾಗಿದೆ. ವೃಕ್ಷ ಸಂರಕ್ಷಣೆ, ಸಂವರ್ಧನೆ ಆಗುತ್ತಿದೆ ಎಂದು ಸಂತೃಪ್ತಿ ವ್ಯಕ್ತಪಡಿಸಿದ್ದಾರೆ.



### ಸಿಎಂ ಅವರಿಂದ ಪೂರ್ಣ ಬೆಂಬಲ

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇಲಾಖೆಯ ವತಿಯಿಂದ ಕೈಗೊಳ್ಳುವ ಪ್ರತಿಯೊಂದು ಕಠಿಣ ನಿರ್ಧಾರಕ್ಕೂ ಸಂಪೂರ್ಣ ಬೆಂಬಲ ನೀಡಿದ್ದಾರೆ. ಒತ್ತುವರಿ ತೆರವಿನ ವೇಳೆ ಪೊಲೀಸ್ ಸಹಕಾರ ನೀಡುವಂತೆ ಆದೇಶ ನೀಡಿದ್ದಾರೆ. ಜೊತೆಗೆ ಹೆಚ್ಚುವರಿ ಅನುದಾನವನ್ನೂ ಬಿಡುಗಡೆ ಮಾಡಿದ್ದಾರೆ ಎಂದು ಕೃತಜ್ಞತೆ ಅರ್ಪಿಸಿದ್ದಾರೆ.

## ಸ್ಥಳೀಯ ಸಂಸ್ಥೆಗಳ ಚುನಾವಣೆ ಶೀಘ್ರ

- ಮಲ್ಲಮ್ಮ ನುಡಿ ವಾರ್ತೆಬೆಂಗಳೂರು

ಜಿಬಿಎ ಪಾಲಿಕೆಗಳು ಸೇರಿದಂತೆ ಎಲ್ಲಾ ಸ್ಥಳೀಯ ಸಂಸ್ಥೆ ಚುನಾವಣೆಗಳನ್ನು ಈ ವರ್ಷವೇ ನಡೆಸಲಾಗುವುದು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಹೆಬ್ಬಾಳ ಮೇಲ್ಸೇತುವೆ ಬಳಿ ನೂತನ ಮೇಲ್ಸೇತುವೆ ಉದ್ಘಾಟಿಸಿದ ಬಳಿಕ ಮಾತನಾಡಿ, 2026ರ ವರ್ಷ ಶುಭ ಲಗ್ನದಲ್ಲಿ ಆರಂಭವಾಗಿದೆ. 2025ರ ವರ್ಷದಲ್ಲಿ ನಾವು ಉತ್ತಮ ಆಡಳಿತ ನೀಡಿದ್ದೇವೆ. ಬಂಡವಾಳ ಹೂಡಿಕೆದಾರರ ಸಮಾವೇಶ, ಟೆಕ್ ಸಮ್ಮೇಳನದಿಂದ ನಾವು ಕರ್ನಾಟಕವನ್ನು ಮುನ್ನಡೆಸಿದ್ದೇವೆ. ಕೊಟ್ಟ ಮಾತು ಉಳಿಸಿಕೊಂಡಿದ್ದೇವೆ ಎಂದಿದ್ದಾರೆ.

ನೀರಾವರಿ ಇಲಾಖೆಯಲ್ಲಿ ಐತಿಹಾಸಿಕ ತೀರ್ಮಾನ ಮಾಡಿದ್ದೇವೆ. ಯುಕೆಪಿ, ತುಂಗಾಭದ್ರ ಯೋಜನೆಯಲ್ಲಿ ನಾವು ಕೈಗೊಂಡ ತೀರ್ಮಾನ, ಮೇಕೆದಾಟು ಯೋಜನೆಯಲ್ಲಿ ನ್ಯಾಯಾಲಯದ ತೀರ್ಮಾನ ಇತಿಹಾಸದ ಪುಟ ಸೇರಿವೆ. ಜನರು ನಮ್ಮ ಮೇಲೆ ಇಟ್ಟಿರುವ ವಿಶ್ವಾಸ ನಮ್ಮ ಆತ್ಮವಿಶ್ವಾಸ ಹೆಚ್ಚಿಸಿದೆ. ಅವರ ನಂಬಿಕೆ ಉಳಿಸಿಕೊಳ್ಳಲು, ನಮ್ಮ ಸರ್ಕಾರ ಕೆಲಸ ಮಾಡುತ್ತಿದೆ ಎಂದು ಹೇಳಿದ್ದಾರೆ.



## ಕೇರಳ ಜನರ ಮೆಚ್ಚಿಸಲು ಮುಖ್ಯಮಂತ್ರಿ, ಡಿಸಿಎಂ ಅವರು ರಾಜ್ಯಕ್ಕೆ ಅನ್ಯಾಯ ಮಾಡುತ್ತಿದ್ದಾರೆ: ಆರ್. ಅಶೋಕ್

# ಕಮಲನಗರನಲ್ಲಿ ನಾಂದೇಡ

## ಬೆಂಗಳೂರು ರೈಲು ನಿಲ್ದಾಣಕ್ಕೆ ಹರ್ಷ



ಮಲ್ಲಮ್ಮನುಡಿವಾರ್ತೆ ಕಮಲನಗರ:

ಕಮಲನಗರನಲ್ಲಿ ನಾಂದೇಡ–ಬೆಂಗಳೂರು ರೈಲು ನಿಲ್ದಾಣಕ್ಕೆ ಹರ್ಷ, ಕಳೆದ ನಾಲ್ಕು ತಿಂಗಳಿಂದ ಈ ರೈಲು ನಿಲ್ಲದ್ದೆ ಪ್ರಯಾಣಿಕರ ಸಂಚಾರ–ಕ್ಕೆ ತೀವ್ರ ತೊಂದರೆ ಆಗುತಿತ್ತು. ಹೋರಾಟಗಾರಿಗೆ ಹೋರಾಟಕ್ಕೆ ಜಯ ಸಿಕ್ಕಿದೆ ಎಂದು ಸಿಹಿ ಹಂಚಿ ಹರ್ಷ ವ್ಯಕ್ತಪಡಿಸಿದರು.ವಿವಿಧ ಸಂಘಟನೆಗಳ ಮನವಿ ಸ್ವೀಕರಿಸಿ ಆದಷ್ಟು ಬೇಗ ರೈಲುಗಳ ನಿಲುಗಡೆಗೆ ಮೇಲಾಧಿಕಾರಿಗಳಿಗೆ ಮನವಿ ಮಾಡುತ್ತೇನೆ ಎಂದು ಭರವಸೆ ಹುಸಿ ಮಾಡದ್ದೆ ನಮ್ಮ ಮನವಿಗೆ ಸ್ಪಂದಿಸಿದ ಅಧಿಕಾರಿಗಳಿಗೆ ಕೃತಜ್ಞ ತಿಳಿಸಿದರು. ಹಾಗೂ ರೈಲು ಚಾಲಕರಿಗೆ ಮತ್ತು ಸಿಬ್ಬಂದಿಗಳಿಗೆ ಸನ್ಮಾನ ಮಾಡಿ ಗೌರವಿಸಿ ಅಭಿನಂದನೆ ಸಲ್ಲಿಸಿದರು.ಈ ಸಂದರ್ಭದಲ್ಲಿ ಕಮಲನಗರ ನೂತನ ತಾಲುಕು ಹೂರಾಟ ಸಮಿತಿಯ ಅಧ್ಯಕ್ಷ ಬಾಲಾಜಿ ತೆಲಂಗೆ ಗೌರವಾಧ್ಯಕ್ಷರಾದ ಎಸ್.ಎನ್.ಶಿವಣಕರೆ,ಬಸವರಾಜ ಪಾಟೀಲ, ಕರವೇ ಅಧ್ಯಕ್ಷ ಮಂಜುನಾಥ ಸ್ವಾಮಿ, ಯಶವಂತ ಬಿರಾದಾರ,ಮಹೇಶ ಸಜ್ಜನ ಸೇರಿದಂತೆ ಅನೇಕರು ಇದ್ದರು.

> "ಕಮಲನಗರನಿಂದ ಹಾದು ಹೋಗುವ ಎಲ್ಲಾ ಎಕ್ಸ್ ಪ್ರೆಸ್ ರೈಲುಗಳ ನಿಲುಗಡೆ ಮಾಡುವರೆಗೆ ನಮ್ಮ ಹೋರಾಟ ನಿಲ್ಲಿವುದಿಲ್ಲ, ಮುಂದಿನ ದಿನಗಳಲ್ಲಿ ಈ ಬಗ್ಗೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಅಗ್ರಹಿಸುತ್ತೇವೆ".
>
> **ಎಸ್.ಎನ್.ಶಿವಣಕರೆ,**
> **ಹಿರಿಯ ನಾಗರಿಕರು, ಕಮಲನಗರ.**

## ಶೋಭಾ ರಾಣಿ ವಿ. ಜೆ ಅವರಿಂದ ಅಧಿಕಾರ ಸ್ವೀಕರಿಸಿದ ನೂತನ ಎಸ್‌ಪಿ ಪವನ್ ನೆಜ್ಜೂರ್



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ.:**

ಬಳ್ಳಾರಿ ಜಿಲ್ಲಾ ಪೊಲೀಸ್ ಅಧೀಕ್ಷಕರಾಗಿದ್ದ ವಿ.ಜೆ. ಶೋಭರಾಣಿ ಅವರನ್ನು ತಕ್ಷಣಕ್ಕೆ ಜಾರಿಗೆ ಬರುವಂತೆ ಮಂಡ್ಯ ಜಿಲ್ಲೆ ಪೊಲೀಸ್ ಅಧಿಕ್ಷಕರನ್ನಾಗಿ ವರ್ಗಾವಣೆ ಮಾಡಲಾಗಿದೆ. ಅವರ ಸ್ಥಾನಕ್ಕೆ ಬೆಂಗಳೂರು ಲೋಕಾಯುಕ್ತ ಕಚೇರಿಯಲ್ಲಿ ಸೇವೆ ಸಲ್ಲಿಸುತ್ತಿದ್ದ ಪವನ್ ನೆಜ್ಜುರ್ ಅವರನ್ನು ನೂತನ ಬಳ್ಳಾರಿ ಜಿಲ್ಲಾ ಪೊಲೀಸ್ ಅಧೀಕ್ಷಕರನಾಗಿ ಗೃಹ ಇಲಾಖೆಯ ಮುಂದಿನ ಆದೇಶದವರಿಗೆ ಎಂಬ ಸುತ್ತೋಲೆಯೊಂದಿಗೆ ವರ್ಗಾಯಿಸಲಾಗಿದೆ.

ವಿ.ಜೆ. ಶೋಭರಾಣಿ ಅವರ ಕಾರ್ಯಾವಧಿಯಲ್ಲಿ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ, ಕಟ್ಟುನಿಟ್ಟಿನ ಕ್ರಮಗಳು, ಅಪರಾಧ ನಿಯಂತ್ರಣ ಮತ್ತು ಸಾರ್ವಜನಿಕ ಸ್ನೇಹಿ ಪೊಲೀಸ್ ವ್ಯವಸ್ಥೆಗೆ ಒತ್ತು ನೀಡಲಾಗಿತ್ತು. ಇದೀಗ ಮಂಡ್ಯ ಜಿಲ್ಲೆಗೆ ವರ್ಗಾವಣೆಗೊಂಡಿದ್ದಾರೆ.

ನೂತನ ಎಸ್‌ಪಿ ಪವನ್ ನೆಜ್ಜುರ್ ಬೆಂಗಳೂರು ಲೋಕಾಯುಕ್ತದಲ್ಲಿ ಸೇವೆ ಸಲ್ಲಿಸಿದ ಅನುಭವ ಹೊಂದಿದ್ದು, ಭ್ರಷ್ಟಾಚಾರ ನಿರೋಧಕ ಕ್ರಮಗಳು ಹಾಗೂ ತನಿಖಾ ಕಾರ್ಯಗಳಲ್ಲಿ ಪರಿಣತಿ ಪಡೆದವರಾಗಿದ್ದಾರೆ.

ಇಂದು ಬಳ್ಳಾರಿ ಜಿಲ್ಲಾ ಪೊಲೀಸ್ ಕಾರ್ಯಾಲಯದಲ್ಲಿ ಶೋಭಾರಾಣಿ ವಿ.ಜೆ ಅವರು ನೂತನ ಅವರಿಗೆ ಲಾಠಿ ನೀಡುವ ಮೂಲಕ ಅಧಿಕಾರವನ್ನು ಸ್ಥಾಂತರಿಸಿದರು.



ಗುದಗೆ ಆಸ್ಪತ್ರೆಯ ಖ್ಯಾತ ವೈದ್ಯರಾದ ಡಾ.ನಿತೀನ್ ಗುದಗೆ ಸರ್ ಅವರನ್ನು ಇಂದು ಮಲ್ಲಮ್ಮ ನುಡಿ ಪತ್ರಿಕೆ ನೀಡಲಾಯಿತು,

## ಅಮರಶಿಲ್ಪಿ ಜಕಣಾಚಾರಿ ಜಯಂತಿ



• **ಮಲ್ಲಮ್ಮ ನುಡಿ ವಾರ್ತೆ ಕಮಲನಗರ:**

ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಗುರುವಾರ ಅಮರಶಿಲ್ಪಿ ಜಕಣಾಚಾರಿ ಅವರ ಭಾವಚಿತ್ರಕ್ಕೆ ತಹಸೀಲ್ದಾರ ಅಮಿತಕುಮಾರ ಕುಲಕರ್ಣಿ ಪೂಜೆ ಮಾಡುವ ಮೂಲಕ ಜಯಂತಿಯನ್ನು ಆಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿ, 12ನೇ ಶತಮಾನದ ಶಿಲ್ಪಿಯಾದ ಜಕಣಾಚಾರಿಯನ್ನು ಅಮರ ಶಿಲ್ಪಿ ಎಂದು ಕರೆಯುವರು, ಇವರೊಬ್ಬ ಶ್ರೇಷ್ಠ ಕಲಾಕೃತಿಗಾರರು ಬೇಲೂರು–ಹಳೆಬೀಡು ದೇವಾಲಯಗಳಲ್ಲಿನ ಶಿಲ್ಪಗಳನ್ನು ಕೆತ್ತಿನೆ ನೋಡಲು ಸಿಗುತ್ತವೆ.

ಅಮರಶಿಲ್ಪಿ ಜಕಣಾಚಾರಿಯವರ ಜನ್ಮದಿನದಂದು ಅವರ ಸ್ಮರಣಾರ್ಥ ಜನವರಿ 1ರಂದು ಎಲ್ಲಾ ಸರಕಾರಿ ಕಚೇರಿಯಲ್ಲಿ ಆಚರಣೆ ಮಾಡಲಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಉಪ ತಹಸೀಲ್ದಾರ ಗೋಪಾಲಕೃಣ್ಣ, ಗ್ರೇಡ 2 ತಹಸೀಲ್ದಾರ ರಮೇಶ ಪೆದ್ದೆ, ಅಶ್ವಿನ ಪಾಟೀಲ, ಪ್ರವೀಣ ಬಿರಾದಾರ, ಪ್ರಶಾಂತ, ಏಕನಾಥ ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ರಾಷ್ಟ್ರಕವಿ ಕುವೆಂಪುರವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಕೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ನಗರಸಭೆ ಇವರ ಸಂಯುಕ್ತಾಶ್ರಯದಲ್ಲಿ ಸೋಮವಾರ ಜಿಲ್ಲಾಡಳಿತ ಕಛೇರಿ ಸಭಾಂಗಣದಲ್ಲಿ ವಿಶ್ವ ಮಾನವ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ರಾಷ್ಟ್ರಕವಿ ಕುವೆಂಪು ರವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು. ನಂತರ ಮಾತನಾಡಿ, ಕುವೆಂಪುರವರ ಕವನಗಳು ಅರ್ಥಗರ್ಭಿತವಾಗಿದ್ದು, ಅವರ ದಿವ್ಯ ಸಂದೇಶಗಳು ನಮಗೆ ದಾರಿದೀಪವಾಗಿವೆ. ಅವರ ವಿಶ್ವಮಾನವ ಸಂದೇಶವನ್ನು ನಾವೆಲ್ಲರೂ ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಂಗವಾಗಿ ಕೊಪ್ಪಳದ ಸಾಹಿತಿ, ಹಿರಿಯ ಲೇಖ–ಕರು ಮತ್ತು ಕರ್ನಾಟಕ ಚಲನಚಿತ್ರ ಅಕಾಡೆಮಿ ಸದಸ್ಯರಾದ ಸಾವಿತ್ರಿ ಮುಜುಮ್‌ದಾರ್ ಅವರು ವಿಶೇಷ ಉಪನ್ಯಾಸ ನೀಡಿ ಮಾತನಾಡಿ, ಕುವೆಂಪುರವರು 'ಮನುಜ ಮತ ವಿಶ್ವಪಥ' ಸಂದೇಶ ಸಾರಿದ ಶ್ರೇಷ್ಠ ವಿಶ್ವಮಾನವರಾಗಿದ್ದಾರೆ. ಕಥೆ, ಕವನ, ಕಾದಂಬರಿ, ವಿಮರ್ಶೆ ಮುಂತಾದ ಸಾಹಿತ್ಯದ ವಿವಿಧ ಪ್ರಕಾರಗಳಲ್ಲಿಯೂ ಕುವೆಂಪುರವರು ಸಾಹಿತ್ಯ ರಚಿಸಿ, ಕನ್ನಡ ಅಗ್ರಮಾನ್ಯ, ರಾಷ್ಟ್ರಕವಿ ಎಂದೆನಿಸಿಕೊಂಡಿದ್ದಾರೆ. ಅವರ ಸಾಹಿತ್ಯವನ್ನು ಅಧ್ಯಯನ ಮಾಡುವುದರ ಮೂಲಕ ಇಂದಿನ ಯುವ ಕವಿ, ಸಾಹಿತಿಗಳು ಕುವೆಂಪು ಅವರನ್ನು ಸ್ಫೂರ್ತಿಯಾಗಿ ತೆಗೆದುಕೊಳ್ಳಬೇಕು. ಕುವೆಂಪುರವರ 'ಭಾರತ ಜನನಿಯ ತನುಜಾತೆ' ಎಂಬ ಹಾಡನ್ನು ನಮ್ಮ ರಾಜ್ಯದ ನಾಡಗೀತೆ–ಯಾಗಿ ಅಳವಡಿಸಿಕೊಳ್ಳಲಾಗಿದ್ದು, ಈ ಹಾಡು ಇಡೀ ಭಾರತದ ಪರಿಕಲ್ಪನೆಯನ್ನು ಮುಂದಿಡುತ್ತದೆ. ಕುವೆಂಪು ಅವರನ್ನು ಬರೀ ಗದ್ಯ, ಸಾಹಿತ್ಯಕ್ಕಷ್ಟೇ ಲೇಖಕರೆಂದು ಅವರನ್ನು ಗುರುತಿಸಲು ಸಾಧ್ಯವಿಲ್ಲ. ಏಕೆಂದರೆ, ಅವರು ರಚಿಸಿದ 'ಶ್ರೀ ರಾಮಾಯಣ ದರ್ಶನಂ' ಮಹಾಕಾವ್ಯ, ಆಧುನಿಕ ಕಾಲದ ಶ್ರೇಷ್ಠ ಕಾವ್ಯಗಳಲ್ಲೊಂದಾಗಿದೆ ಎಂದರು.

ಕುವೆಂಪುರವರು ಶಿಶು ಸಾಹಿತ್ಯವನ್ನು ಬರೆದಿದ್ದು, ಮನುಷ್ಯನಿಗೆ ಅಲ್ಲಿಂದನೆ ಮಾನವೀಯ ಸಂದೇಶಗಳನ್ನು ತಿಳಿಸಿದ್ದಾರೆ. ಮಗು ಹುಟ್ಟಿನಿಂದಲೇ ವಿಶ್ವಮಾನವನಾಗಿರುತ್ತದೆ. ಆದ–ರೆ, ಅದು ಬೆಳೆದಂತೆಲ್ಲ ಅಲ್ಪ ಮಾನವನಾಗುತ್ತದೆ. ಏಕೆಂದರೆ, ಹಲವಾರು ಕಟ್ಟುಪಾಡುಗಳು ಆ ಮಗುವಿನ ತಲೆಯಲ್ಲಿ ಬರುವಂತೆ ಸುತ್ತಮುತ್ತಲಿನ ವಾತಾವರಣ ಕಾರಣವಾಗುತ್ತದೆ. ಇದು ಆಗಬಾರದು ಮತ್ತು ಪ್ರತಿಯೊಂದು ಮಗು ಬೆಳೆಯುತ್ತಾ ಹೋದಂತೆ ಜಾತಿಗೆ ಸೀಮಿತವಾಗಬಾರದು. ವಿಶಾಲವಾದ ಹೃದಯದಿಂದ ಬೆಳೆಯಬೇಕು. ಮನುಷ್ಯನು ಮಾನವೀಯ ಮೌಲ್ಯಗಳನ್ನು ಹೊಂದಬೇಕೆಂಬ ದಿವ್ಯ ಸಂದೇಶಗಳನ್ನು ನೀಡಿದ ಕುವೆಂಪುರವರು ವಿಶ್ವಮಾನವ ಅನಿಸಿಕೊಂಡಿದ್ದಾರೆ ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ಮಾತನಾಡಿ, ನಿವೃತ್ತ ಪ್ರಾಚಾರ್ಯರು ಹಾಗೂ ಹಿರಿಯ ಸಾಹಿತಿ ಮಹಾಂತೇಶ ಮಲ್ಲನಗೌಡರ್ ಅವರು ಮಾತನಾಡಿ, ಕುವೆಂಪುರವರು ಜಾತಿ, ಮತ, ಪಂಥ, ದೇಶ, ಭಾಷೆ ಎಲ್ಲವನ್ನೂ ಮೀರಿ ಮೊದಲು ನಾವು ಮಾನವರಾಗಬೇಕು, ವಿಶ್ವ ಮಾನವರಾಗಬೇಕೆಂಬ ಸಂದಶೇವನ್ನು ನೀಡಿದ್ದಾರೆ. ಅವರ ವಿಚಾರಗಳನ್ನು ನಾವೆಲ್ಲರೂ ತಿಳಿದುಕೊಳ್ಳಬೇಕು. ಕುವೆಂಪು ರವರು ಹೇಳಿರುವ ಹಾಗೆ ನಾವೆಲ್ಲರೂ ವಿಶ್ವ ಮಾನವರಾಗಿ ಬಾಳಲು ಪ್ರಯತ್ನಿಸೋಣ ಎಂದು ಹೇಳಿದರು.

ಶ್ರೀ ಗುರುಕೃಪ ಸಂಗೀತ ಪಾಠಶಾಲೆಯ ವಿದ್ಯಾರ್ಥಿಗಳು ಕುವೆಂಪು ರವರು ಗೀತೆಗಳನ್ನು ಹಾಡಿದರು. ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ ಮತ್ತು ಸಾಹಿತಿಗಳು, ಲೇಖಕರು ಸೇರಿದಂತೆ ಜಿಲ್ಲಾಧಿಕಾರಿಗಳ ಕಚೇರಿ ಮತ್ತು ವಿವಿಧ ಇತರೆ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.



ಕಮಲನಗರ: ಹೊಸ ವರ್ಷ 2026ಕ್ಕೆ ಕಮಲನಗರ ಪೊಲೀಸ ಸಿಬ್ಬಂದಿ ವರ್ಗದವರು ಸಿಹಿ ಹಂಚಿ ಸಂಭ್ರಮ ಪಟ್ಟರು, ಈ ಸಂದರ್ಭದಲ್ಲಿ ಸಿ.ಪಿ.ಐ ಮಾತನಾಡಿ ಹೊಸ ವರ್ಷಚಾರಣೆ ನಿಮಿತ್ಯ ಕಾನೂನು ಸು–ವ್ಯವಸ್ಥೆ ಕಾಪಾಡಬೇಕು, ನಿಮ್ಮ ಅರೋಗ್ಯ ಹಾಳು ಮಾಡಿಕೊಳ್ಳಬೇಡಿ,ಎಲ್ಲರಿಗೂ ಹೊಸ ವರ್ಷ ಒಳ್ಳೆದು ಮಾಡಲಿ, ಸುಖ, ಶಾಂತಿ ನೆಮ್ಮದಿಯ ಸಮಾಜ ನಮ್ಮದಾಗಲಿ ಎಂದರು. ಈ ವೇಳೆ ಪಿ.ಎಸ್.ಐ ಆಶಾ ರಾಠೋಡ ಸೇರಿದಂತೆ ಸಿಬ್ಬಂದಿ ವರ್ಗದವರು ಇದ್ದರು.

## ಎಸ್ ಪಿವರ್ಗಾವಣೆ ಶುಭಕೋರಿದ ಪತ್ರಕರ್ತರು



ಮಲ್ಲಮ್ಮನುಡಿ ವಾರ್ತೆ ಬಳ್ಳಾರಿ.: ಬಳ್ಳಾರಿ ಜಿಲ್ಲಾ ಪೊಲೀಸ್ ಅಧೀಕ್ಷಕರಾಗಿದ್ದ ವಿ.ಜೆ. ಶೋಭರಾಣಿ (2016) ಮಂಡ್ಯ ಜಿಲ್ಲೆ ಪೊಲೀಸ್ ಅಧೀಕ್ಷಕರನ್ನಾಗಿ ವರ್ಗಾವಣೆ ಮಾಡಿ ಗೃಹ ಇಲಾಖೆ ಆದೇಶ ಮಾಡಿದೆ. ಇಂದು ಅವರು ಮಂಡ್ಯ ಜಿಲ್ಲೆಯ ಪೊಲೀಸ್ ಅಧೀಕ್ಷಕರಾಗಿ ಅಧಿಕಾರ ಸ್ವೀಕರಿಸಲು ತೆರಳುತ್ತಿದ್ದು ಈ ಸಂದರ್ಭದಲ್ಲಿ ಪೊಲೀಸ್ ಬಳ್ಳಾರಿ ಜಿಲ್ಲಾ ಪೊಲೀಸ್ ಇಲಾಖೆಯಿಂದ ಬೀಳ್ಕೊಡುಗೆ ಸಮಾರಂಭವನ್ನು ಎಸ್ಪಿ ಬಂಗ್ಲೆಯಲ್ಲಿ ಏರ್ಪಡಿಸಲಾಗಿತ್ತು.

ಕಳೆದ ಒಂದುವರೆ ವರ್ಷಗಳ ಹಿಂದೆ ಬಳ್ಳಾರಿ ಜಿಲ್ಲಾ ಪೊಲೀಸ್ ಎಸ್. ಪಿ ಆಗಿ ವರ್ಗಾವಣೆಗೊಂಡು ಬಂದ ಶೋಭಾರಾಣಿ ಬಳ್ಳಾರಿ ಜಿಲ್ಲೆಯಲ್ಲಿ ಕ್ರಿಮಿನಲ್ ಪ್ರಕರಣ, ಅಕ್ರಮ ಚಟುವಟಿಕೆಗಳನ್ನು ಮಟ್ಟ ಹಾಕಿ ಶಾಂತಿ ಸುವ್ಯವಸ್ಥೆಯನ್ನು ಕಾಪಾಡಲು ಶ್ರಮಿಸಿದ್ದರು. ಈಗ ಸರ್ಕಾರದ ಆದೇಶದ ಮೇರೆಗೆ ಮಂಡ್ಯ ಜಿಲ್ಲೆಗೆ ವರ್ಗಾವಣೆಗೊಂಡಿದ್ದಾರೆ.

ಈ ಸಂದರ್ಭದಲ್ಲಿ ಪೊಲೀಸ್ ಅಧೀಕ್ಷಕರಾದ ಶೋಭಾ ರಾಣಿ ವೀಜೆ ಅವರನ್ನು ಬಳ್ಳಾರಿ ಪತ್ರಕರ್ತರು ಬೀಳ್ಕೊಡುಗೆ ಶುಭ ಕೋರಿದರು.

## ಹಿಂಗಾರು ಬೆಳೆ ಸಮೀಕ್ಷೆಯ: ಆಪ್ ಬಿಡುಗಡೆ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

2025–26ನೇ ಸಾಲಿನ ಹಿಂಗಾರು ಹಂಗಾಮಿನ ಖಾಸಗಿ ನಿವಾಸಿಗಳಿಂದ ರೈತರು ಬೆಳೆದ ಬೆಳೆಗಳ ಬಗ್ಗೆ ನಿಖರವಾಗಿ ಮಾಹಿತಿಯನ್ನು ಮೊಬೈಲ್ ಆಪ್‌ನಿಂದ ದಾಖಲಿಸಲು ಆಪ್ ಬಿಡುಗಡೆ ಮಾಡಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಈಗಾಗಲೇ ಇ–ಆಡಳಿತವತಿಯಿಂದ ಅಭಿವೃದ್ಧಿಪಡಿಸಿರುವ ಬೆಳೆ ಸಮೀಕ್ಷೆ ನಡೆಸುವ ಕಾರ್ಯ 31 ಡಿಸೆಂಬರ್ 2025ರಂದು ಬೆಳೆ ಸಮೀಕ್ಷೆ ಚಾಲನೆಯಲ್ಲಿದ್ದು 30 ಜನವರಿ 2026ರಂದು ಬೆಳೆ ಸಮೀಕ್ಷೆ ಅಪ್‌ಲೋಡ್ ಮಾಡುವ ಕಾರ್ಯ ಕೊನೆಯ ದಿನವಾಗಿದೆ.

ಖಾಸಗಿ ನಿವಾಸಿಗಳು ತಮ್ಮ ಮೊಬೈಲ್‌ನಲ್ಲಿ ಗೂಗಲ್ ಪ್ಲೇ ಸ್ಟೋರ್‌ನಿಂದ ಬೆಳೆ ಸಮೀಕ್ಷೆ ಹಿಂಗಾರು ಹಂಗಾಮಿನ ಕ್ರಾಪ್ ಸರ್ವೇ ರಬಿ 2025 ಆಪ್‌ನ್ನು ಡೌನ್ಲೋಡ್ ಮಾಡಿಕೊಳ್ಳಬಹುದು ಅಥವಾ ಈ ಕೆಳಗಿನ ಲಿಂಕ್ ಮೂಲಕ ಆಪ್‌ನ್ನು ಡೌನ್ಲೋಡ್ ಮಾಡಿಕೊಳ್ಳಬಹುದು.

https://play.google.com/store/apps/details?id=com.csk.PR_Kharif_2025.

cropsurveyಬೆಳೆ ಸಮೀಕ್ಷೆ ದತ್ತಾಂಶ ಮಾಹಿತಿಯನ್ನು ಬೆಳೆ ವಿಸ್ತರಣೆ ಎಣಿಕೆ ಕಾರ್ಯದಲ್ಲಿ, ಬೆಳೆ ಕಟಾವು ಪ್ರಯೋಗದಲ್ಲಿ, ಪ್ರಕೃತಿ ವಿಕೋಪ ಸಂದರ್ಭದಲ್ಲಿ, ಬೆಳೆಹಾನಿ ವರದಿ ಸಿದ್ಧಪಡಿಸಲು, ಬೆಳೆ ವಿಮಾ ಯೋಜನೆ, ಬೆಂಬಲ ಬೆಲೆ ಯೋಜನೆ, ಆರ್.ಟಿ.ಸಿ.ಯಲ್ಲಿ ಬೆಳೆ ವಿವರ ದಾಖಲಿಸಲು, ರಾಷ್ಟ್ರೀಯ ಹಾಗೂ ಗ್ರಾಮೀಣ ಬ್ಯಾಂಕ್‌ಗಳಲ್ಲಿ ಬೆಳೆ ಸಾಲ ಮಂಜೂರು ಮಾಡಲು ಬೆಳೆ ಸಮೀಕ್ಷೆ ಮಾಹಿತಿ ಉಪಯೋಗಿಸಲಾಗುತ್ತದೆ.

ಜಿಲ್ಲೆಯಲ್ಲಿ 293013 ಬೆಳೆ ತಾಕುಗಳಿದ್ದು, ಮೊಬೈಲ್ ಆಪ್ ನಲ್ಲಿ Geo Referenced and Digitized ಬೆಳೆಗ್ರಾಮ ನಕಾಶೆ ಅಳವಡಿಸಲಾಗಿರುವುದರಿಂದ ಆಯಾ ತಾಕಿನ ಗಡಿ ರೇಖೆಯೊಳಗೆ ಹೋಗಿ ಜಿಪಿಎಸ್ ನಿಖರತೆ ಪಡೆದು ಛಾಯಾಚಿತ್ರದೊಂದಿಗೆ ಬೆಳೆಯ ವಿವರಗಳನ್ನು ಎಲ್ಲಾ ಬೆಳೆಗಳ ವಿವಿರಗಳನ್ನು ಕಡ್ಡಾಯವಾಗಿ ದಾಖಲು ಮಾಡುವುದು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರಗಳ ಕೃಷಿ ಅಧಿಕಾರಿಗಳನ್ನು ಸಂಪರ್ಕಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಮರ ಶಿಲ್ಪಿ ಜಕಣಾಚಾರಿ ಅದ್ಬುತ ಕಲೆಗಾರ:ಕಸ್ತೂರೆ



• **ಮಲ್ಲಮ್ಮ ನುಡಿ ವಾರ್ತೆ,ಕಮಲನಗರ :**

ತಾಲೂಕಿನ ಖತಗಾಂವ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಗುರುವಾರ ಅಮರಶಿಲ್ಪಿ ಜಕಣಾಚಾರಿ ಜಯಂತಿ ಆಚರಿಸಲಾಯಿತು. ಅಮರಶಿಲ್ಪಿ ಜಕಣಾಚಾರಿ ಭಾವಚಿತ್ರಕ್ಕೆ ಹಿರಿಯ ಶಿಕ್ಷಕಿ ಮಲ್ಲಮ್ಮಾ ಕಸ್ತೂರೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಿ ಮಾತನಾಡಿ,ಅಮರ ಶಿಲ್ಪಿ ಜಕಣಾಚಾರಿ ಅದ್ಭುತ ಕಲೆಗಾರ,ಅವರು ನಿರ್ಮಿಸಿದ ಅದ್ಭುತ ಕಲಾಕೃತಿಗಳು ಇಂದಿಗೂ ನಮ್ಮನ್ನು ಚಕಿತಗೊಳಿಸುವಂತಿವೆ ಎಂದರು. ಈ ಸಂದರ್ಭದಲ್ಲಿ

ಶಿಕ್ಷಕ ಸಿದ್ರಾಮಪ್ಪ ಬಿರಾದಾರ, ಅತಿಥಿ ಶಿಕ್ಷಕರಾದ ಮಹಾದೇವ ಬಿರಾದಾರ, ರಚಿತಾ ಗುಡಮೆ, ಪೂಜಾ ಸ್ವಾಮಿ, ಪ್ರತೀಕ್ಷಾ ವಾನಖೇಡೆ, ಕಲ್ಪನಾ ಸ್ವಾಮಿ ಹಾಗೂ ಮಕ್ಕಳು ಇದ್ದರು.

# ಭೀಮಾ ಕೊರೆಗಾಂವ್ ಕದನ ವಿಜಯೋತ್ಸವ ಅದ್ದೂರಿ

### ದಲಿತ ಸಂಘಟನೆಗಳು ಎಲ್ಲರೂ ಡಾ. ಅಂಬೇಡ್ಕರ್ ದಾರಿಯಲ್ಲಿ ನಡೆದು ಬೃಹತ್ ಹೋರಾಟಗಳನ್ನು ನಡೆಸಲು ಮುಂದಾಗಿ;ಮಕ್ಕಳ ತಜ್ಞ ಡಾ.ಕೆ. ಶಿವರಾಜ್



ಸಿಂಧನೂರು.;ಭೀಮಾ ಕೊರೆಗಾಂವ್ 208ನೇ ಕದನ ವಿಜಯೋತ್ಸವ ಆಚರಣಾ ಸಮಿತಿ ಇಂದು ಸಾವಿರಾರು ಸಂಖ್ಯೆಯಲ್ಲಿ ಸೇರಿ ಅತ್ಯಂತ ವಿಜೃಂಭಣೆಯಿಂದ ಭೀಮಾ ಕೊರೆಗಾಂವ್ ಕದನ ವಿಜಯೋತ್ಸವ ಆಚರಿಸಲಾಯಿತು. ಸಮಿತಿಯ ಮುಖಂಡರು ನಗರದ ತಾಲೂಕು ಪಂಚಾಯತ್ ಆವರದಲ್ಲಿನ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಲಾಯಿತು. ಅಲ್ಲಿಂದ ಪಥ ಸಂಚಲನವನ್ನು ಚಲುವಾದಿ ಮಹಾಸಭಾ ಅಧ್ಯಕ್ಷರಾದ ಡಾ ರಾಮಣ್ಣ ಗೋನಾವರ ಭೀಮಾ ಕೊರೆಗಾಂವ್ ಕದನ 500 ಜನ ಸೈನಿಕರು 28000 ಪೇಶ್ವೆ ಸೈನಿಕರ ಸೋಲಿಸುವ ಮೂಲಕ ಜಾತಿ ದೌರ್ಜನ್ಯದ ವಿರುದ್ಧ ಹೋರಾಡಿದ್ದಾರೆ ಎಂದು ಸ್ಮರಿಸಿದರು. ಸಾಮಾಜಿಕ ಹೋರಾಟಗಾರ ಉಪನ್ಯಾಸಕ ನಾರಾಯಣ ಬೆಳಗುರ್ಕಿ ಅವರು ನಿಜವಾದ ಇತಿಹಾಸ ಮುಚ್ಚಿಟ್ಟು ಕೇವಲ ಉಳ್ಳವರ ಇತಿಹಾಸ ಮಾತ್ರ ಅಕಾಡೆಮಿಗಳಲ್ಲಿ ಹೇಳಲಾಗುತ್ತದೆ. ಆದರೆ ಈ ಭೀಮಾ ಕೊರೆಗಾಂವ್ ವಿಜಯೋತ್ಸವ ದಲಿತ ಹಿಂದುಳಿದ ಅಲ್ಪಸಂಖ್ಯಾತ ಶಕ್ತಿಗಳನ್ನು ಐಕ್ಯಗೊಳಿಸಲು ಕಾರಣ ಆಗುತ್ತದೆ ಎಂದು ಮಾತನಾಡಿದರು.ಯುವ ವಿದ್ಯಾರ್ಥಿ ಮುಖಂಡ ಮೌನೇಶ್ ಜಾಲವಾಡಗಿ ಪ್ರಸ್ತಾವನೆ ಹಾಗೂ ನಿರೂಪಣೆ ಮಾಡುತ್ತಾ ಕಾರ್ಯಕ್ರಮ ನಡೆಸಿಕೊಟ್ಟರು. ಈ ಸಂದರ್ಭದಲ್ಲಿ.ಬಿಎಸ್ಪಿ ಮುಖಂಡರಾದ ಮರಿಯಪ್ಪ, ಅಮರೇಶ ಗಿರಿಜಾಲಿ, ಪ್ರವೀಣ ಧುಮತಿ, ಮಹಿಳಾ ಮುಖಂಡರು ನಾಗವೇಣಿ ಪಾಟೀಲ, ಬಸವರಾಜ ಬಾದರ್ಲಿ, ಡಾ.ಶಂಕರ್ ಗುರಿಕಾರ, ಡಾ. ಮರಿಲಿಂಗಪ್ಪ , ಮುತ್ತು ಸಾಗರ, ಅಂಬ್ರುಸ್ ಕೊಡ್ಲಿ, ನಿರುಪಾದಿ ಸಾಸಲಮರಿ, ಹೊನ್ನೂರು ಕಟ್ಟಿಮನಿ,ಬಸವರಾಜ ಬಾಗಲವಾಡ ಅನೇಕ ಗಣ್ಯರು ಮಾತನಾಡಿದರು. ಹನುಮಂತ ಗೋಮರ್ಸಿ ವಂದನಾರ್ಪಣೆ ಮಾಡಿದ ರು. ಬಸವರಾಜ ಎಕ್ಕಿ, ಹೆಚ್ ಆರ್ ಹೊಸಮನಿ, ಮುದಿಯಪ್ಪ ಕ್ರಾಂತಿಕಾರಿ ಸಾಂಸ್ಕೃತಿಕ ವೇದಿಕೆ ಆರ್ ಸಿಎಫ್ ಕಲಾ ತಂಡದಿಂದ ಭೀಮಾ ಕೊರೆಗಾಂವ ಕುರಿತು ಹಾಗೂ ಅಂಬೇಡ್ಕರ್ ಕುರಿತು ಹಾಡುಗಳನ್ನು ಹಾಡಿದರು. ಹಾರೂನ್ ಪಾಷಾ ಜಾಗಿರದರ, ನರಸಪ್ಪ ಕಟ್ಟಿಮನಿ, ಅಯ್ಯಪ್ಪ ವಕೀಲರು, ಮೌಲಪ್ಪ ವಕೀಲರು,, ಚನ್ನಬಸವರಾಜ ಕುನ್ನಟಗಿ, ಹುಲುಗಪ್ಪ ಮಲ್ಲಾಪುರ, ಹುಸೇನಪ್ಪ ಗೊರೇಬಾಳ, ಕರಿಯಪ್ಪ ಮಾಡಸಿರವರ, ಹಂಸರಾಜ ಮಾಡಸಿರವರ, ಚಂದ್ರು ಸಿದ್ರಾಮಪುರ,ಶರಣಬಸವ ಮಲ್ಲಾಪುರ, ದುರುಗಪ್ಪ ಮಲ್ಲಾಪುರ, ವಿರೂಪಣ್ಣ ಬುಧಿಹಾಳ ವೀರೇಶ್ ಹಂಚಿನಾಳ, ಮಾರೆಪ್ಪ ರಾಮತ್ನಾಳ, ಶರಣಪ್ಪ ಸೋಮನಾಳ, ಶರಣಬಸವ ಇನ್ನಿತರ ಮುಖಂಡರು ಭಾಗವಹಿಸುವ ಮೂಲಕ ಯಶಸ್ವಿಗೊಳಿಸಿದರು.

ಡಾ : ಕೆ ಶಿವರಾಜ್ ಅವರು ಉದ್ಘಾಟಿಸಿ ಚಾಲನೆ ನೀಡಿದರು. ದಲಿತ ಸಂಘಟನೆಯ ಎಲ್ಲರೂ ಅಂಬೇಡ್ಕರ ದಾರಿಯಲ್ಲಿ ನಡೆದು ಬೃಹತ್ ಹೋರಾಟಗಳನ್ನು ನಡೆಸಲು ಮುಂದಾಗಬೇಕು . ಸಮಾನತೆ ತರುವಲ್ಲಿ ಈ ಹೋರಾಟಗಳು ಮುಖ್ಯ ಆಗುತ್ತವೆ ಎಂದು ಹೇಳಿ ವಿದ್ಯುಕ್ತವಾಗಿ ಚಾಲನೆ ನೀಡಿದರು.

ನಗರದ ರಾಯಚೂರು ರಸ್ತೆಯ ಉದ್ದಕ್ಕೂ ವಿಜಯ ಘೋಷಣೆಗಳು ಕೂಗುತ್ತಾ, ಬಾಬಾ ಸಾಹೇಬ್ ಅವರಿಗೆ ಜಯವಾಗಲಿ ಎಂದು ಕೂಗುತ್ತಾ ಶಿಸ್ತಿನ ಬೃಹತ್ ಮೆರವಣಿಗೆ ಮತ್ತು ಪಥ ಸಂಚಲನ ಮೂಲಕ ಪಿಡಬ್ಲ್ಯೂಡಿ ಕ್ಯಾಂಪ್ ನಲ್ಲಿನ ಡಾ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಪ್ರತಿಮೆ ಬಳಿ ಬೃಹತ್ ಬಹಿರಂಗ ಸಮಾವೇಶಕ್ಕೆ ತಲುಪಿತು.

ಬೃಹತ್ ಸಮಾವೇಶದಲ್ಲಿ ಭಾಗವಹಿಸಿ ಮಾತನಾಡಿದ ಆಚರಣೆ ಸಮಿತಿಯ ಸಂಚಾಲಕರಾದ ಎಂ ಗಂಗಾಧರ ಅವರು ಮಾತನಾಡಿ ಭೀಮಾ ಕೊರೆಗಾಂವ್ ವಿಜಯೋತ್ಸವ ಆಚರಣೆ ಮಾಡುವುದು ನಮ್ಮೆಲ್ಲರ ಜವಾಬ್ದಾರಿ. ಮುಂದೆಯೂ ಬೃಹತ್ ಪ್ರಮಾಣದಲ್ಲಿ ಆಚರಣೆ ಮಾಡುತ್ತಾ ಅಂಬೇಡ್ಕರ್ ಮಾರ್ಕ್ಸ್ ಚಿಂತನೆಗಳನ್ನು ಕಟ್ಟುತ್ತ ಮನುವಾದಿಗಳ ತೋರಿಸೋಣ ಎಂದು ಹೇಳಿದರು.

> **ಹಿರಿಯ ಹೋರಾಟಗಾರರಾದ ಡಿ ಎಚ್ ಪೂಜಾರ ಅವರು ಫ್ಯಾಸಿಸ್ಟ್ ಶಕ್ತಿಗಳನ್ನು ಸೋಲಿಸಲು ಪರ್ಯಾಯ ಪಥ ಸಂಚಲನ ಹಾಗೂ ಅಂಬೇಡ್ಕರ,ಕನಕ,ಬಸವ ಶರಣರ ವಿಚಾರಗಳನ್ನು ಮುನ್ನೆಲೆಗೆ ತರಬೇಕೆಂದು ಹೇಳಿದರು 'ಜಾತಿ ಬಿಡಿ ಮತ ಬಿಡಿ ಮಾನವತೆಗೆ ಜೀವ ಕೊಡಿ ' ಎಂಬ ಚಳವಳಿ ತೀವ್ರ ಗೊಳ್ಳಬೇಕೆಂದು ಕರೆ ನೀಡಿದರು.**

## ವಿದ್ಯಾರ್ಥಿಗಳಿಂದ ವಿಜ್ಞಾನ ವಸ್ತು ಪ್ರದರ್ಶನ



• **ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ:**

ಪ್ರತಿ ವರ್ಷ ಹೊಸ ವರ್ಷದಲ್ಲಿ ತಾಲ್ಲೂಕಿನ ಹುಡಗಿ ಗ್ರಾಮದ ಬಸವ ತೀರ್ಥ ವಿದ್ಯಾಪೀಠ ಪ್ರೌಢ ಶಾಲೆಯಲ್ಲಿ ವಿಜ್ಞಾನ ವಸ್ತು ಪ್ರದರ್ಶನ ನಡೆಯಿತು. ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ವೈಜ್ಞಾನಿಕ ಪ್ರಯೋಗಗಳನ್ನು ಪ್ರದರ್ಶಿಸಿದರು. ಆರೋಗ್ಯ, ಪರಿಸರ, ಸಾರಿಗೆ, ಮಾನವ ದೇಹದ ಪರಿಚಯ, ಗ್ರಹಣಗಳ ಬಗ್ಗೆ ಮಾದರಿಗಳನ್ನು ತಯಾರಿಸಿದ್ದರು. ಗಣ್ಯರು ವಿದ್ಯಾರ್ಥಿಗಳ ಕಾರ್ಯವನ್ನು ಶ್ಲಾಘಿಸಿದರು. ವಿಜ್ಞಾನ ಶಿಕ್ಷಕಿ ಸವೀತಾ ಪಾಟೀಲ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು. ಬಸವ ತೀರ್ಥ ವಿದ್ಯಾಪೀಠ ಸಂಸ್ಥೆಯ ಕೇಂದ್ರ ಸಮಿತಿಯ ಅಧ್ಯಕ್ಷರಾದ ಕಂಟೆಪ್ಪ ದಾನ, ಬಸವತೀರ್ಥ ವಿದ್ಯಾ ಪೀಠ ಪ್ರೌಢ ಶಾಲಾ ಅಧ್ಯಕ್ಷರಾದ ಅಣ್ಣೇರಾವ್ ಪೊಲೀಸ್ ಪಾಟೀಲ್, ಸದಸ್ಯರಾದ ಕಲ್ಲಪ್ಪ ಮಾಶೆಟ್ಟಿ ಕುಪ್ಪಣ್ಣ ಮುಗಳಿ, ಶಾಲೆಯ ಮುಖ್ಯ ಗುರುಗಳಾದ ಶ್ರೀಮತಿ ಗೀತಾ. ಕೆ ಮುಗಳಿ, ಉಮೇಶ್ ಪಾಟೀಲ್, ಸಹ ಶಿಕ್ಷಕರು, ಶಾಲೆಯ ವಿದ್ಯಾರ್ಥಿಗಳು ಇತರರು ಹಾಜರಿದ್ದರು. ವಿದ್ಯಾರ್ಥಿಗಳ ಪ್ರದರ್ಶನ ನೋಡಿ ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿದರು.

## ಜ, 13 ರಂದು ಹರಾಜು ಪ್ರಕ್ರಿಯೆ



• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಅಬಕಾರಿ ಇಲಾಖೆಯಿಂದ ಕಲಬುರಗಿ ಜಿಲ್ಲೆಯಾದ್ಯಂತ ಖಾಲಿ ಇರುವ 12 ಸಿ.ಎಲ್–2(ಎ) ಮತ್ತು 3 ಸಿಎಲ್–9(ಎ) ಸೇರಿ ಒಟ್ಟು 15 ಮದ್ಯದ ಸನ್ನದುಗಳನ್ನು ನೀಡಲು ಇ–ಹರಾಜು ಪ್ರಕ್ರಿಯೆ ನಡೆಸಲಾಗುತ್ತಿದ್ದು, ಇದೇ ಜನವರಿ 13 ರಂದು ಹರಾಜು ಪ್ರಕ್ರಿಯೆ ನಡೆಯಲಿದೆ ಎಂದು ಅಬಕಾರಿ ಉಪ ಆಯುಕ್ತ ಸಂಗನಗೌಡ ಪಿ. ತಿಳಿಸಿದರು.

ಬುಧವಾರ ತಮ್ಮ ಕಚೇರಿಯಲ್ಲಿ ಕರೆದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯದಾದ್ಯಂತ ಇದೇ ಮೊದಲ ಬಾರಿಗೆ ಖಾಲಿ ಇರುವ 569 ವಿವಿಧ ಮಾದರಿಯ ಮದ್ಯದ ಸನ್ನದುಗಳನ್ನು ಪಾರದರ್ಶಕವಾಗಿ ಜನವರಿ 13 ರಿಂದ 20ರ ವರೆಗೆ ಇ–ಹರಾಜು ಪ್ರಕ್ರಿಯೆ ಮೂಲಕ ಲೈಸೆನ್ಸ್ ನೀಡಲಾಗುತ್ತಿದ್ದು, ಕಲಬುರಗಿ ಜಿಲ್ಲೆಗೆ ಸಂಬಂಧಿಸಿದಂತೆ ಜನವರಿ ಜನವರಿ 13 ರಂದು ಮಧ್ಯಾಹ್ನ 3 ರಿಂದ ಸಂಜೆ 5 ಗಂಟೆಯವರೆಗೆ ಹರಾಜು ಪ್ರಕ್ರಿಯೆ ನಡೆಯಲಿದೆ ಎಂದರು.ಅರ್ಹ ಬಿಡ್ಡುದಾರರು https://www.mstccecommerce.com ಮೂಲಕ ನಿಗದಿತ ಶುಲ್ಕ 1,000 ರೂ. ಭರಿಸಿ ಹೆಸರು ನೋಂದಾಯಿಸಿಕೊಳ್ಳುವುದಲ್ಲದೆ ಅರ್ಜಿ ಶುಲ್ಕ 50,000 ರೂ., ನಿಗದಿತ ಇ.ಎಂ.ಡಿ. ಮೊತ್ತ ಪಾವತಿಸಿ ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿದೆ. ಸರ್ಕಾರದ ನಿಯಮಾವಳಿಯಂತೆ ಸನ್ನದುಗಳನ್ನು ಪಡೆಯಲು ಎಸ್.ಸಿ–ಎಸ್.ಟಿ., ಸಾಮಾನ್ಯ ಮೀಸಲಾತಿ ವರ್ಗಿಕರಿಸಲಾಗಿದೆ. 2025–26 ರಿಂದ 2029–30ನೇ ಸಾಲಿನ ವರೆಗೆ ಲೈಸೆನ್ಸ್ ನೀಡಲಾಗುತ್ತಿದ್ದು, ನಿಯಮಾವಳಿಯಂತೆ ವಾರ್ಷಿಕ ನವೀಕರಣ ಶುಲ್ಕ ಪಾವತಿಸಬೇಕಾಗುತ್ತದೆ ಎಂದು ಅವರು ಮಾಹಿತಿ ನೀಡಿದರು. ಜಿಲ್ಲೆಯ ವಿವಿಧ ಅಬಕಾರಿ ವಲಯದಲ್ಲಿನ ಮದ್ಯದ ಸನ್ನದುಗಳ ಮೂಲ ದರಕ್ಕೆ ಶೇ.2ರಂತೆ ಇ.ಎಂ.ಡಿ. ಮೊತ್ತ ಆನ್‌ಲೈನ್ ಮೂಲಕ ಪಾವತಿಸಿ ಬಿಡ್ಡಿನಲ್ಲಿ ಭಾಗವಹಿಸಬಹುದಾಗಿದೆ. ಬಿಡ್‌ದಾರರು ಒಂದಕ್ಕಿಂತ ಹೆಚ್ಚು ಸನ್ನದುಗಳಿಗೆ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿದ್ದು, ಪ್ರತಿ ಸನ್ನದುಗಳಿಗೆ ಪ್ರತ್ಯೇಕ ಅರ್ಜಿ ಶುಲ್ಕ ಮತ್ತು ಮುಂಗಡ ಠೇವಣಿ ಮೊತ್ತ ಪಾವತಿಸಬೇಕಾಗುತ್ತದೆ. ಬಿಡ್‌ದಾರರು ಪ್ರತಿ ಬಿಡ್‌ಗೆ 2 ಲಕ್ಷ ರೂ. ಅಥವಾ ಅದರ ಗುಣಕಗಳ ಹೆಚ್ಚಳಕ್ಕೆ ಬಿಡ್ ಮಾಡಬೇಕು. ಯಶಸ್ವಿ ಬಿಡ್ ಮಾಡಿರುವ ಬಿಡ್‌ದಾರರನ್ನು ಭಾರತ ಸರ್ಕಾರ ಸ್ವಾಮ್ಯದ ಸಂಸ್ಥೆಯಾಗಿರುವ ಎಂ.ಎಸ್.ಟಿ.ಸಿ. ಲಿಮಿಟೆಡ್ ಸಂಸ್ಥೆಯೇ ಅಂತಿಮಗೊಳಿಸಲಿದೆ ಎಂದು ಪಿ. ಸಂಗನಗೌಡ ಮಾಹಿತಿ ನೀಡಿದರು.ಎಲ್ಲೆಲ್ಲಿ ಸನ್ನದುಗಳು,ಮೂಲ ದರವೆಷ್ಟು?: ಆಳಂದ, ಜೇವರ್ಗಿ ಹಾಗೂ ಸೇಡಂ ವಲಯದಲ್ಲಿ ತಲಾ ಎರಡು ಮತ್ತು ಚಿಂಚೋಳಿಯಲ್ಲಿ ಒಂದು ಸಿ.ಎಲ್–2ಎ ಸನ್ನದುಗಳಿದ್ದು, ಮೂಲ ದರ 80 ಲಕ್ಷ ರೂ. ಮತ್ತು ಇ.ಎಂ.ಡಿ. ಮೊತ್ತ 1.60 ಲಕ್ಷ ರೂ. ಇದೆ. ಕಲಬರಗಿ ವಲಯ–1ರಲ್ಲಿ ಎರಡು ಮತ್ತು ಕಲಬುರಗಿ ವಲಯ–2ರಲ್ಲಿ ಒಂದು ಸಿ.ಎಲ್–2ಎ ಸನ್ನದುಗಳಿದ್ದು, ಮೂಲ ದರ 1.10 ಕೋಟಿ ರೂ. ಮತ್ತು ಇ.ಎಂ.ಡಿ. ಮೊತ್ತ 2.20 ಲಕ್ಷ ರೂ. ಇದೆ. ಅದೇ ರೀತಿ ಕಲಬರಗಿ ವಲಯ–1ರಲ್ಲಿ ಒಂದು ಮತ್ತು ಕಲಬುರಗಿ ವಲಯ–2ರಲ್ಲಿ ಎರಡು ಸಿ.ಎಲ್–9ಎ ಸನ್ನದುಗಳಿದ್ದು, ಮೂಲ ದರ 1.10 ಕೋಟಿ ರೂ. ಮತ್ತು ಇ.ಎಂ.ಡಿ. ಮೊತ್ತ 2.20 ಲಕ್ಷ ರೂ. ಇದೆ. ಮೂಲ ದರದಿಂದಲೆ ಬಿಡ್ಡು ಆರಂಭವಾಗಲಿದ್ದು, ಕೊನೆಗೆ ಹೆಚ್ಚಿನ ಮೊತ್ತಕ್ಕೆ ಬಿಡ್ಡು ಮಾಡುವವರು ಯಶಸ್ವಿ ಬಿಡ್ಡುದಾರರಾಗಿ ಆಯ್ಕೆಯಾಗುತ್ತಾರೆ. ಸರ್ಕಾರಿ ನೌಕರರು, ಲಾಭದಾಯಕ ಹುದ್ದೆಯಲ್ಲಿರುವವರು, ಸರ್ಕಾರಕ್ಕೆ ಬಾಕಿ ಉಳಿಸಿಕೊಂಡವರು, ನ್ಯಾಯಾಲಯದಿಂದ ಶಿಕ್ಷೆಗೆ ಒಳಗಾದವರು ಲೈಸೆನ್ಸ್ ಪಡೆಯಲು ಅರ್ಹರಿರುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಜನವರಿ 3ಕ್ಕೆ ತರಬೇತಿ: ಇ–ಹರಾಜು ಪ್ರಕ್ರಿಯೆ ಮತ್ತು ತಂತ್ರಾಂಶದ ಬಗ್ಗೆ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಸಂಭಾವ್ಯ ಬಿಡ್‌ದಾರರಿಗೆ ಜಾಗೃತಿ ಮೂಡಿಸಲು ಇದೇ ಜನವರಿ 3 ರಂದು ಬೆಳಿಗ್ಗೆ 11 ರಿಂದ ಸಂಜೆ 4 ಗಂಟೆ ವರೆಗೆ ಕಲಬುರಗಿ ನಗರದ ಸೇಡಂ ರಸ್ತೆಯಲ್ಲಿ ಹಳೇ ಆರ್.ಟಿ.ಓ. ಕಚೇರಿ ಹತ್ತಿರದಲ್ಲಿರುವ ಹೆಚ್.ಕೆ.ಇ. ಶಿಕ್ಷಣ ಸಂಸ್ಥೆಯ ಸಿ.ಪಿ.ಎಂ. ಬಾಲಕರ ಹಾಸ್ಟೆಲ್ ಕ್ಯಾಂಪಸ್ ಆವರಣದಲ್ಲಿರುವ ಎಂ.ಆರ್.ಎಂ.ಸಿ. ಎಸ್.ಎ.ಸಿ (ಸ್ಟೂಡೆಂಟ್ ಎಕ್ಟಿವಿಟಿ ಸೆಂಟರ್) ನಲ್ಲಿ ತರಬೇತಿ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಎರಡು ಜಿಲ್ಲೆಗಳ ಸಂಭಾವ್ಯ ಬಿಡ್ಡುದಾರರು ಇದರಲ್ಲಿ ಭಾಗವಹಿಸಿ ಇ–ಹರಾಜು ಪ್ರಕ್ರಿಯೆ ಬಗ್ಗೆ ಮಾಹಿತಿ ಪಡೆದುಕೊಳ್ಳಬಹುದು ಎಂದು ವಲಯದ ಪ್ರಭಾರಿ ಜಂಟಿ ಅಬಕಾರಿ ಆಯುಕ್ತರಾಗಿರುವ ಸಂಗನಗೌಡ ಪಿ. ಅವರು ಮನವಿ ಮಾಡಿದ್ದಾರೆ.ಇ–ಹರಾಜು ಪ್ರಕಿಯೆ, ಮೀಸಲಾತಿ, ಅರ್ಹತೆ, ಷರತ್ತು, ನಿಬಂಧನೆ ಸೇರಿದಂತೆ ಹೆಚ್ಚಿನ ಮಾಹಿತಿಗೆ ಅಬಕಾರಿ ಇಲಾಖೆಯ ಪೋರ್ಟಲ್ https://stateexcise.karnataka.gov.in https://www.mstccecommerce.com ವೀಕ್ಷಿಸಬಹುದಾಗಿದೆ ಎಂದಿದ್ದಾರೆ.ಪತ್ರಿಕಾಗೋಷ್ಠಿಯಲ್ಲಿ ಕಲಬುರಗಿ ವಿಭಾಗದ ಜಂಟಿ ಆಯುಕ್ತರ ಕಚೇರಿಯ ಅಬಕಾರಿ ಅಧೀಕ್ಷಕ ರಾಮಣಗೌಡ ಮುದಿಗೌಡ, ಅಬಕಾರಿ ಉಪ ಆಯುಕ್ತರ ಕಚೇರಿಯ ಅಬಕಾರಿ ಅಧೀಕ್ಷಕ ಹಣಮಂತ್ರಾಯ ವಜ್ರಮಟ್ಟಿ ಇದ್ದರು.

# ಅಕ್ಕಪಡೆ ಯೋಜನೆಯ ಅನುಷ್ಠಾನ ಕುರಿತು ಸಭೆ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಸಂಕಷ್ಟದಲ್ಲಿರುವ ಮಹಿಳೆಯರ ಮತ್ತು ಮಕ್ಕಳಿಗೆ ತಕ್ಷಣದ ರಕ್ಷಣೆ ನೀಡುವ ಸಲುವಾಗಿ ರಾಜ್ಯ ಸರ್ಕಾರವು ಅಕ್ಕಪಡೆ ಯೋಜನೆ ಜಾರಿಗೆ ತಂದಿದೆ ಎಂದು ಕಲಬುರಗಿ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಅಡೂರು ಶ್ರೀನಿವಾಸಲು ಅವರು ಹೇಳಿದರು.



ಅವರು ಬುಧವಾರ ಕಲಬುರಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ಜರುಗಿದ ಅಕ್ಕಪಡೆ ಯೋಜನೆಯ ಅನುಷ್ಠಾನ ಕುರಿತು ಜಿಲ್ಲಾ ಮಟ್ಟದ ಮೇಲ್ವಿಚಾರಣೆ ಮತ್ತು ಪರಿಶೀಲನಾ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿ, ಅಕ್ಕಪಡೆಯ ಅನುಷ್ಠಾನಕ್ಕಾಗಿ ರಾಜ್ಯ ಸರಕಾರವು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಕಲಬುರಗಿ ಜಿಲ್ಲೆಗೆ ಮಹೇಂದ್ರ ಬೊಲೆರೋ (ಡಿಸೇಲ್) (Mahindra Bolero B6 BS 6.2 (Diesel) ವಾಹನ ಸಂಖ್ಯೆ: ಎಂ 01 ಉ 7635) ಪೋಲೀಸ್ ಇಲಾಖೆಗೆ ಒದಗಿಸಿದ್ದು, ಶಾಲೆ, ಕಾಲೇಜು, ವಿದ್ಯಾರ್ಥಿನಿಯರ ಹಾಗೂ ಬಾಲಕಿಯವರ ವಸತಿಗೃಹಗಳಿಗೆ ಭೇಟಿ ನೀಡುವುದು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಮಹಿಳೆಯರ ಮತ್ತು ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ತಡೆಯುವುದು, ದೌರ್ಜನ್ಯ, ಹಿಂಸೆ, ನಿರ್ಲಕ್ಷ್ಯ ಅಥವಾ ಶೋಷಣೆ ಎದುರಿಸುತ್ತಿರುವ ಮಹಿಳೆಯರ ಮತ್ತು ಮಕ್ಕಳಿಗೆ ಸಕಾಲಿಕ ಸಹಾಯ ಹಸ್ತ ಮತ್ತು ರಕ್ಷಣೆ ಒದಗಿಸುವುದು, ಸಾರ್ವಜನಿಕ ಮತ್ತು ಖಾಸಗಿ ಸ್ಥಳಗಳಲ್ಲಿ ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆ, ಘನತೆ ಮತ್ತು ಸಬಲೀಕರಣವನ್ನು ಉತ್ತೇಜಿಸುವುದು ಅಕ್ಕಪಡೆ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದರು.

ಅಕ್ಕಪಡೆ ಯೋಜನೆಯಡಿ 05 ಮಹಿಳಾ ಗೃಹ ರಕ್ಷಕರವರನ್ನೊಳಗೊಂಡ ತಂಡವು ಸ್ಥಳೀಯ ಪೊಲೀಸರ ನಿಕಟ ಸಹಯೋಗದೊಂದಿಗೆ ಬೆಳಿಗ್ಗೆ 7 ಗಂಟೆಯಿಂದ ರಾತ್ರಿ 8 ರವರೆಗೆ 02 ಪಾಳಿಗಳಲ್ಲಿ ಅಂದರೆ ಬೆಳಿಗ್ಗೆ 7 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಮತ್ತು ಮಧ್ಯಾಹ್ನ 2 ರಿಂದ ರಾತ್ರಿ 8ರವರೆಗೆ ಕಾರ್ಯನಿರ್ವಹಿಸಬೇಕು.

ಮಹಿಳಾ ಕಿರುಕುಳ ಪ್ರಕರಣಗಳ ಬಗ್ಗೆ ವ್ಯಾಪ್ತಿಯಲ್ಲಿರುವ ಪೊಲೀಸ್ ಠಾಣೆಗೆ ವರದಿ ಮಾಡಬೇಕು. ಮಹಿಳೆಯರ ಮೇಲಿನ ಕಿರುಕುಳ ಮತ್ತು ಈವ್‌ಟಿಸಿಂಗ್ ತಡೆಗಟ್ಟಲು ಶಾಲೆ, ಕಾಲೇಜು, ಉದ್ಯಾನವನ, ಸಿನಿಮಾ ಮಂದಿರ, ಸ್ಥಳೀಯ ಮಾರುಕಟ್ಟೆಗಳಿಗೆ ನಿಯಮಿತವಾಗಿ ಭೇಟಿ ನೀಡಬೇಕು. ಫೋಕ್ಸೋ, ಬಾಲ್ಯವಿವಾಹ, ಬಾಲ ಕಾರ್ಮಿಕ ಪದ್ದತಿ, ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ, ಮಾದಕ ವಸ್ತುಗಳ ದುರುಪಯೋಗದ ಬಗ್ಗೆ ಜಾಗೃತಿ ಮೂಡಿಸುವುದು, ಸಂಚಾರ ನಿಯಮಗಳ ಬಗ್ಗೆ, ಉಚಿತ ಸಹಾಯವಾಣಿಗಳಾದ 1098, 181, 112 ಇವುಗಳ ಬಗ್ಗೆ ಜಾಗೃತಿ ಮೂಡಿಸುವುದು ಅಕ್ಕಪಡೆ ಯೋಜನೆಯ ಜವಾಬ್ದಾರಿಯಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಅಕ್ಕಪಡೆ ಯೋಜನೆ ಅನುಷ್ಠಾನಕ್ಕಾಗಿ ಬೆಂಗಳೂರಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಿಬ್ಬಂದಿಗಳು ವಾಹನವನ್ನು ತೆಗೆದುಕೊಂಡು ಬರುತ್ತಿದ್ದು, ವಾಹನ ಬಂದ ತಕ್ಷಣ ಅಕ್ಕಪಡೆ ಯೋಜನೆಗೆ ಕಲಬುರಗಿ ಜಿಲ್ಲೆಯಲ್ಲಿ ಚಾಲನೆಗೊಳಿಸಲಾಗುತ್ತದೆ. ಸಮಿತಿಯ ಸದಸ್ಯರು ತಮ್ಮ ಇಲಾಖೆಗೆ ಸಂಬಂಧಪಟ್ಟ ಶಾಲಾ ಕಾಲೇಜುಗಳ, ವಸತಿ ನಿಲಯಗಳ ಪಟ್ಟಿಯನ್ನು ಸಲ್ಲಿಸಬೇಕು. ಅಕ್ಕಪಡೆ ಮಾರ್ಗಸೂಚಿಯಂತೆ ಕಾರ್ಯನಿರ್ವಹಿಸಲು 05 ಮಹಿಳಾ ಗೃಹ ರಕ್ಷಕ ಸಿಬ್ಬಂದಿಗಳಿಗೆ ಹಾಗೂ ಮಹಿಳಾ ಪೋಲೀಸ್ ಸಿಬ್ಬಂದಿಗಳಿಗೆ ತರಬೇತಿ ನೀಡಿ ತಂಡ ಸಿದ್ಧಗೊಳಿಸಿ ಕ್ರಿಯಾ ಯೋಜನೆಯನ್ನು ಸಲ್ಲಿಸಬೇಕು ಎಂದರು.

ಸಭೆಯಲ್ಲಿ ಸಮಿತಿಯ ಸದಸ್ಯರಾದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಕಾಲೇಜು ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಮಂಜುಳಾ ಪಾಟೀಲ, ಗೃಹರಕ್ಷಕ ದಳದ ತರಬೇತಿದಾರರಾದ ಹಣಂತರಾಯ ಗೌಡ ಉಪಸ್ಥಿತರಿದ್ದರು.

ಪ್ರಾರಂಭದಲ್ಲಿ ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ರಾಜಕುಮಾರ ರಾಠೋಡ ಸ್ವಾಗತಿಸಿದರು. ಕೊನೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶಿವಶರಣಪ್ಪ ವಂದಿಸಿದರು.

# ರಾಜ್ಯದ ಮೊದಲ ವಿವಾಹಪೂರ್ವ ಸಂವಾದ ಕೇಂದ್ರ ಆರಂಭ



• **ಮಲ್ಲಮ್ಮ ನುಡಿ ವಾರ್ತೆ ಬೀದರ್:**

ಇಲ್ಲಿಯ ಬ್ರಿಮ್ಸ್‌ಆಸ್ಪತ್ರೆಆವರಣದಲ್ಲಿರಾಜ್ಯದ ಮೊದಲ 'ತೆರೆ ಮೇರೆ ಸಪ್ನೆ' ವಿವಾಹ ಪೂರ್ವ ಸಂವಾದಕೇಂದ್ರ ಆರಂಭವಾಗಿದೆ. ರಾಷ್ಟ್ರೀಯ ಮಹಿಳಾ ಆಯೋಗದ ಮಾರ್ಗದರ್ಶನದಲ್ಲಿ ಶಾಂತೀಶ್ವರಿ ಸ್ವಯಂ ಸೇವಾ ಸಂಸ್ಥೆ ವತಿಯಿಂದ ಕೇಂದ್ರವನ್ನು ಪ್ರಾರಂ ಭಿಸಲಾಗಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳು ಸಹಕಾರ ನೀಡಲಿವೆ ಎಂದು ಬುಧವಾರ ನಡೆದ ಕೇಂದ್ರದ ಉದ್ಘಾಟನಾ ಸಮಾರಂಭದಲ್ಲಿ ಕೇಂದ್ರ ಸರ್ಕಾರದ ರಾಜ್ಯ ಅಭಿವೃದ್ಧಿ, ಸಮನ್ವಯ ಹಾಗೂ ಮೇಲುಸ್ತುವಾರಿ ಸಮಿತಿಯ ಸದಸ್ಯ ಶಿವಯ್ಯ ಸ್ವಾಮಿ ತಿಳಿಸಿದರು.

ಕೇಂದ್ರವು ವಿವಾಹ ಪೂರ್ವದಲ್ಲೇಯುವಜನರಿಗೆ ದಾಂಪತ್ಯದ ಮಹತ್ವ ಮನವರಿಕೆ ಮಾಡಲಿದೆ. ಹೊಂದಾಣಿಕೆಯ ಗೌರವಯುತ ದಾಂಪತ್ಯದ ಸೂತ್ರಗಳನ್ನು ಹೇಳಿಕೊಡಲಿದೆ. ಮದುವೆ ನಂತರದಗೊಂದಲ, ಮಹಿಳಾ ದೌರ್ಜನ್ಯ ನಿವಾರಣೆ, ವಿವಾಹ ವಿಚ್ಛೇದನಗಳ ನಿಯಂತ್ರಣಕ್ಕೆನೆರವಾಗಲಿದೆಎಂದು ಹೇಳಿದರು.

ಕೇಂದ್ರದಲ್ಲಿಇಬ್ಬರು ಆಪ್ತ ಸಮಾಲೋಚಕರುಇರಲಿದ್ದಾರೆ. ಯುವಕ, ಯುವತಿಯರಿಗೆ ಪ್ರತ್ಯೇಕ, ನಂತರ ಪಾಲಕರೊಂದಿಗೆಜಂಟಿಯಾಗಿ ಆಪ್ತ ಸಮಾಲೋಚನೆ ನಡೆಸಲಿದ್ದಾರೆ.ಮದುವೆಗೆ ಸಂಬಂಧಿಸಿದ ಸಂದೇಹ ನಿವಾರಿಸಲಿದ್ದಾರೆ.ಉತ್ತಮದಾಂಪತ್ಯಕ್ಕೆಅಗತ್ಯಮಾರ್ಗದರ್ಶನ ನೀಡಲಿದ್ದಾರೆಎಂದು ತಿಳಿಸಿದರು.

ಯುವಕ, ಯುವತಿಯರಿಗೆ ವಿವಾಹ ಪೂರ್ವ ಆಪ್ತ ಸಮಾಲೋಚನೆಅವಶ್ಯಕವಾಗಿದೆಯೇಹೊರತು ಪ್ರಿ ವೆಡ್ಡಿಂಗ್‌ಶೂಟ್ ಅಲ್ಲ. ಪ್ರಿವೆಡ್ಡಿಂಗ್ ಶೂಟ್‌ನಿಂದದುಂದು ವೆಚ್ಚವಾಗುತ್ತಿದೆ.ಅದರನಂತರವೂ ಅನೇಕ ಮದುವೆಗಳು ಮುರಿದು ಬಿದ್ದಿವೆ. ಕಾರಣ, ಆಪ್ತ ಸಮಾಲೋಚನೆಯ ಸದುಪಯೋಗ ಪಡೆಯಬೇಕುಎಂದು ಹೇಳಿದರು.

ರಾಜ್ಯದಲ್ಲಿಕಳೆದ ಐದು ವರ್ಷಗಳ ಅವಧಿಯಲ್ಲಿ ಸುಮಾರು 2.21 ಲಕ್ಷ ವಿವಾಹ ವಿಚ್ಛೇದನ ಪ್ರಕರಣಗಳು ನ್ಯಾಯಾಲಯಗಳ ಮುಂದೆ ಇವೆ. ಇದು, ಆರೋಗ್ಯಕರ ಬೆಳವಣಿಗೆ ಅಲ್ಲ. ದೇಶದ ಸಾಮಾಜಿಕ, ಆರ್ಥಿಕಹಿನ್ನಡೆಗೆಕಾರಣವಾಗಲಿದೆ. ಆದರ್ಶದಾಂಪತ್ಯದ ಸೂತ್ರ ತಿಳಿಸುವಹಾಗೂ ವಿವಾಹ ವಿಚ್ಛೇದನಗಳನ್ನು ನಿಯಂತ್ರಿಸುವ ಕೆಲಸ ಆಗಬೇಕಿದೆ.ಈ ದಿಸೆಯಲ್ಲಿಜನಪ್ರತಿನಿಧಿಗಳು, ಅಧಿಕಾರಿಗಳು, ಸಂಘ ಸಂಸ್ಥೆಗಳು ಹಾಗೂ ಸಾರ್ವಜನಿಕರ ಸಹಕಾರಅಗತ್ಯವಿದೆಎದು ತಿಳಿಸಿದರು.ಕೇಂದ್ರಕ್ಕೆ ಚಾಲನೆ ನೀಡಿದಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಮಾತನಾಡಿ, ಕೇಂದ್ರವು ವಿವಾಹದ ಬಗೆಗಿನ ಯುವಕ, ಯುವತಿಯರ ಅನೇಕ ಸಂದೇಹಗಳನ್ನು ನಿವಾರಣೆ ಮಾಡಲಿದೆ.ಪ್ರೀತಿ, ವಿಶ್ವಾಸದದಾಂಪತ್ಯಜೀವನ ನಡೆಸಲು ಸಹಕಾರಿಯಾಗಲಿದೆಎಂದು ಹೇಳಿದರು. ಕೇಂದ್ರ ಸ್ಥಾಪಿಸಿದ ಶಾಂತೀಶ್ವರಿ ಸ್ವಯಂ ಸೇವಾ ಸಂಸ್ಥೆಯಕಾರ್ಯ ಶ್ಲಾಘನೀಯ.ಕೇಂದ್ರಕ್ಕೆಸಂಬಂಧಿಸಿದ ಇಲಾಖೆಗಳು ಅಗತ್ಯ ಸಹಕಾರ ನೀಡಬೇಕುಎಂದು ಸೂಚಿಸಿದರು.ಕೇಂದ್ರದ ವಿವಾಹಪೂರ್ವ ಸಂವಾದ ಪುಸ್ತಕವನ್ನು ಬೀದರ್ ವಿಶ್ವವಿದ್ಯಾಲಯದ ಸಿಂಡಿ–ಕೇಟ್ ಸದಸ್ಯ ನಾಗಭೂಷಣಕಮಠಾಣೆ ಬಿಡುಗಡೆ ಮಾಡಿದರು.ಬೇಮಳಖೇಡ ಹಿರೇಮಠ ಸಂಸ್ಥಾನದಡಾ. ರಾಜಶೇಖರ ಶಿವಾಚಾರ್ಯ ಸಾನಿಧ್ಯವಹಿಸಿದ್ದರು.ಜಿಲ್ಲಾ ವಕೀಲರ ಸಂಘದಅಧ್ಯಕ್ಷ ಸನ್ಮುಕಯ್ಯ ಬಿ.ಸ್ವಾಮಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಶ್ರೀಧರ ಎಂ.ಎಸ್, ಜಿಲ್ಲಾ ಶಸ್ತ್ರಚಿಕಿತ್ಸಕಡಾ.ಎಂ.ಡಿ. ಅಹೆಮದೊದ್ದೀನ್, ಭಾರತೀಯ ವೈದ್ಯಕೀಯ ಸಂಘದ ಬೀದರ್ ಘಟಕದ ಅಧ್ಯಕ್ಷಡಾ. ವಿಜಯ ಬಲ್ಲೂರಕರ್, ಮಹಾನಗರ ಪಾಲಿಕೆಯ ಸದಸ್ಯೆ ಉಲ್ಲಾಸಿನಿ ವಿಕ್ರಮ ಮುದಾಳೆ, ಮೇರಾಯುವ ಭಾರತ್‌ನಜಿಲ್ಲಾಯುವಅಧಿಕಾರಿ ಮಯೂರ ಕುಮಾರ ಗೋರಮೆ, ಕರ್ನಾಟಕ ಪಶು ವೈದ್ಯಕೀಯ ವಿಶ್ವವಿದ್ಯಾಲಯದ ಸಂಶೋಧನಾ ನಿರ್ದೇಶಕಡಾ. ಬಿ.ವಿ. ಶಿವಪ್ರಕಾಶ್ ಮಾತನಾಡಿದರು.

ಬೀದರ್ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯಅಬ್ದುಲ್ ಸತ್ತಾರ್, ಮಹಾನಗರ ಪಾಲಿಕೆ ಸದಸ್ಯೆಜ್ಯೋತಿ ಶಿವರಾಜ ಗುಮ್ಮಾ, ಜಿಲ್ಲಾ ಪಂಚಾಯಿತಿ ಮುಖ್ಯ ಲೆಕ್ಕಾಧಿಕಾರಿ ಶ್ರೀಕಾಂತ ವೈರಾಗೆ, ಉಪ ನೋಂದಣಾಧಿಕಾರಿ ಹಾಗೂ ವಿವಾಹ ನೋಂದಣಾಧಿಕಾರಿ ಪ್ರಿಯಂಕಾ ಕೆ.ಪಾಟೀಲ, ಸಂವಾದಕೇಂದ್ರದ ಆಡಳಿತಾಧಿಕಾರಿ ಸಂಗೀತಾ ಪಾಟೀಲ, ಸಮಾಲೋಚಕಿಚೆನ್ನಾಂಬಿಕಾ, ರಾಜ್ಯ ಸರ್ಕಾರಿ ನೌಕರರ ಸಂಘದಜಿಲ್ಲಾಘಟಕದ ನಿರ್ದೇಶಕ ಪ್ರವೀಣ್ ಸ್ವಾಮಿ, ನಾಗರಾಜ ಮಠ, ಪ್ರಮುಖರಾದ ಓಂಪ್ರಕಾಶರೊಟ್ಟೆ, ವರದಯ್ಯ ಸ್ವಾಮಿ, ಮಹೇಶ ಪಾಟೀಲ, ಶಿವಶಂಕರ ಬೆಳಮಗಿ, ಚಂದ್ರಕಾಂತ ಚೆನ್ನಳ್ಳಿ, ಅಂಬರೀಷ್‌ಕಮಠಾಣೆ, ನಾಗಯ್ಯ ಸ್ವಾಮಿ, ಶ್ರೀಕಾಂತ ಹೊನ್ನಿಕೇರಿ ಮತ್ತಿತರರುಇದ್ದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿಇಲಾಖೆಯಜಿಲ್ಲಾ ಮಹಿಳಾ ಅಧಿಕಾರಿರೂಪಾ ಸ್ವಾಗತಿಸಿದರು. ಬಿ.ವಿ.ಬಿ. ಕಾಲೇಜಿನಕನ್ನಡ ವಿಭಾಗದ ಮುಖ್ಯಸ್ಥೆರೇಣುಕಾದೇವಿ ಮಳ್ಳಿ ನಿರೂಪಿಸಿದರು.ಸಂವಾದಕೇಂದ್ರದ ಸಂಯೋಜಕಿಕಾವೇರಿ ವಂದಿಸಿದರು.

### ಜಿಲ್ಲಾಧಿಕಾರಿಗಳಿಂದ "ಪ್ರಬುದ್ಧ ಅಕಾಡೆಮಿ" ಕೇಂದ್ರ ಪರಿಶೀಲನೆ:

# ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ತರಬೇತಿ ಕೇಂದ್ರ



• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಇತ್ತೀಚೆಗೆ ಸಮಾಜ ಕಲ್ಯಾಣ ಇಲಾಖೆಯಿಂದ ಕಲಬುರಗಿನಗರದಹೊರವಲಯದ ಅಟಲ್ ಬಿಹಾರಿ ವಾಜಪೇಯಿ ಬಡಾವಣೆಯಲ್ಲಿ ಕೆ.ಕೆ.ಆರ್.ಡಿ.ಬಿ. ಅನುದಾನದಡಿ ಅಂದಾಜು 25 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗಿರುವ ಪರೀಕ್ಷಾ ಪೂರ್ವ ಉಚಿತ ತರಬೇತಿ ಕೇಂದ್ರ "ಪ್ರಬುದ್ಧ ಅಕಾಡೆಮಿ" ಗೆ ಭೇಟಿ ನೀಡಿ ಪರಿಶೀಲಿಸಿದರು.

ಸುಮಾರು 10,449,35 ಚ.ಮೀ ವಿಸ್ತೀರ್ಣ ಹೊಂದಿರುವ "ಪ್ರಬುದ್ಧ ಅಕಾಡೆಮಿ" ತರಬೇತಿ ಕೇಂದ್ರವು ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವನೆ ಹೆಚ್ಚಿಸುವ ಗುರಿಯೊಂದಿಗೆ ಉಚಿತ ಮತ್ತು ಗುಣಮಟ್ಟದ ತರಬೇತಿಯನ್ನು ನೀಡುವ ಉದ್ದೇಶ ಹೊಂದಿದ್ದು, ಶೀಘ್ರವೆ ಕೇಂದ್ರ ಆರಂಭಕ್ಕೆ ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಡಿ.ಸಿ. ನಿರ್ದೇಶನ ನೀಡಿದರು.ಕೇಂದ್ರ ಲೋಕಸೇವಾ ಆಯೋಗ ಮತ್ತು ಕರ್ನಾಟಕ ಲೋಕಸೇವಾ ಆಯೋಗದ ವತಿಯಿಂದ ನಡೆಯುವ ಪ್ರಮುಖ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸುತ್ತಿರುವ ವಿದ್ಯಾರ್ಥಿಗಳಿಗೆ ಉದ್ದೇಶದೊಂದಿಗೆ "ಪ್ರಬುದ್ಧ ಅಕಾಡೆಮಿ"ಯನ್ನು ಸ್ಥಾಪಿಸಲಾಗಿದೆ. ಪ್ರಸ್ತುತ ವಾರ್ಷಿಕ 500 ವಿದ್ಯಾರ್ಥಿಗಳಿಗೆ ತರಬೇತಿ ನೀಡಲು ಯೋಜಿಸಿದ್ದು, ಮುಂದಿನ ದಿನದಲ್ಲಿ ಈ ಸಂಖ್ಯೆ ಹೆಚ್ಚಿಸಿ ಪ್ರದೇಶದ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡುವುದು ಸರ್ಕಾರದ ಉದ್ದೇಶವಾಗಿದೆ ಎಂದು ಡಿ.ಸಿ. ಬಿ.ಫೌಜಿಯಾ ತರನ್ನುಮ್ ತಿಳಿಸಿದರು.

ಈ ಕೇಂದ್ರವು ಆಧುನಿಕ ತಂತ್ರ ಜ್ಞಾನದೊಂದಿಗೆ 125 ವಿದ್ಯಾರ್ಥಿಗಳ ಸಾಮರ್ಥ್ಯ ಹೊಂದಿರುವ ನಾಲ್ಕು ವಿಶಾಲವಾದ ತರಬೇತಿ ಕೊಠಡಿಗಳನ್ನು ಹೊಂದಿದೆ. ಅಂದಾಜು 100 ವಿದ್ಯಾರ್ಥಿ ಸಾಮರ್ಥ್ಯದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅವಶ್ಯವಿರುವ ಎಲ್ಲಾ ಪುಸ್ತಕಗಳನ್ನು ಒಳಗೊಂಡ ಸುಸಜ್ಜಿತ ಗ್ರಂಥಾಲಯ, ಆಡಳಿತ ವಿಭಾಗ, ಡಿಜಿಟಲ್ ಲೈಬ್ರರಿ, ಮೆಂಟರಿಂಗ್ ಕೊಠಡಿಗಳು, ಸ್ವ–ಅಧ್ಯಯನಕ್ಕಾಗಿ ಕ್ಯುಬಿಕಲ್ಸ್ ಸೌಲಭ್ಯ ಇದೆ. ಇದಲ್ಲದೆ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ರಿಯಾಯಿತಿ ದರದಲ್ಲಿ ಉಪಹಾರ ಕೇಂದ್ರ ಹಾಗೂ ಉತ್ತಮ ಪರಿಸರದ ವಾತಾವರಣ ಇಲ್ಲಿ ಕಲ್ಪಿಸಲಾಗಿದೆ.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಡಮನಿ, ಹಿಂದುಳಿದವರ್ಗಗಳಕಲ್ಯಾಣಾಧಿಕಾರಿ ಸೋಮಶೇಖರ, ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿ ಸಂಗಮೇಶ, ಕೆ.ಆರ್.ಐ.ಡಿ.ಎಲ್ ಕಾರ್ಯನಿರ್ವಾಹಕ ಅಭಿಯಂತರ ಸೌರಭ್ ಸೇರಿದಂತೆ ಇತರೆ ಅಧಿಕಾರಿಗಳು ಇದ್ದರು.

## ಡ್ರಂಕ್ ಅಂಡ್ ಡ್ರೈವ್ ತಪಾಸಣೆ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ನೂತನ ವರ್ಷದ ಸಂಭ್ರಮಾಚರಣೆ ಹಿನ್ನೆಲೆ ಸಾರ್ವಜನಿಕರ ಸುರಕ್ಷತೆಗಾಗಿ ಬಳ್ಳಾರಿ ನಗರದಲ್ಲಿ ಟ್ರಾಫಿಕ್ ಪೊಲೀಸರಿಂದ ಡಿಸೆಂಬರ್ 31ರಂದು ವಿಶೇಷ ಡ್ರಂಕ್ ಅಂಡ್ ಡ್ರೈವ್ ತಪಾಸಣೆ ನಡೆಸಲಾಗಿದ್ದು, ಈ ವೇಳೆ ಒಟ್ಟು 16 ಪ್ರಕರಣಗಳು ದಾಖಲಾಗಿವೆ.

ಈ ಕುರಿತು ಮಾಹಿತಿ ನೀಡಿದ ಟ್ರಾಫಿಕ್ ಪೊಲೀಸ್ ಠಾಣೆಯ ಎಸ್‌ಐ ಅಯ್ಯನಗೌಡ ಪಾಟೀಲ್ ಅವರು,

ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವುದರಿಂದ ಅಪಘಾತಗಳು ಹೆಚ್ಚಾಗುವ ಹಿನ್ನೆಲೆಯಲ್ಲಿ ತಪಾಸಣೆಯನ್ನು ಕಟ್ಟುನಿಟ್ಟಾಗಿ ನಡೆಸಲಾಗಿದೆ.

ಸಾರ್ವಜನಿಕರು ತಮ್ಮ ಹಾಗೂ ಇತರರ ಜೀವ ಸುರಕ್ಷತೆಗಾಗಿ ಮದ್ಯಪಾನ ಮಾಡಿ ವಾಹನ ಚಾಲನೆ ಮಾಡಬಾರದು. ಟ್ರಾಫಿಕ್ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಮನವಿ ಮಾಡಿದರು.

# 2026ರ ಹೊಸ ವರ್ಷ ಸಂಭ್ರಮಾಚರಣೆ



• **ಮಲ್ಮನ ನುಡಿ ವಾರ್ತೆ ಮಸ್ಕಿ:**

2025ಕೆ ಗುಡ್ ಬಾಯ್ ಹೇಳಿ 2026ಕ್ಕೆ ಹೊಸ ವರ್ಷ ಸಂಭ್ರಮಾಚರಣೆ ಪಟ್ಟಣದ ವಿವಿಧ ಭಾಗಗಳಲ್ಲಿ ಪ್ರೀತಿಯಿಂದ ಸಿಹಿ ತಿಳಿಸಿ ಹೊಸ ವರ್ಷದ ಶುಭ ಕೋರಿದರು.

ವಿಶೇಷವಾಗಿ ಪಟ್ಟಣದ ಬೇಕರಿಗಳು ಮೊದಲಗಿತ್ತಿಯಂಗೆ ಸಿಂಗಾರಗೊಂಡು ಹೊಸ ವರ್ಷಕ್ಕೆ ವಿವಿಧ ಬಗೆಯ ಕೇಕ್ ತಯಾರಿಸಿ ಅದನ್ನು ಗ್ರಾಹಕರು ಕೊಂಡೊಯ್ಯುವ ದೃಶ್ಯ ಎಲ್ಲಡೆ ಕಂಡು ಬಂತು.2026ರ ಹೊಸ ವರ್ಷವನ್ನು ಕುಣಿದು ಕುಪ್ಪಳಿಸಿ ಹೊಸ ವರ್ಷವೂ ಸಂಭ್ರಮ ಸಡಗರದಿಂದ ಆಚರಿಸಿದರುಪಟ್ಟಣದಲ್ಲಿ ಪೊಲೀಸ್ ಇಲಾಖೆ ಅಧಿಕಾರಿಗಳು ರಾತ್ರಿಯ ವೇಳೆ ಗಸ್ತು ಕಾರ್ಯನಿರ್ವಹಿಸಿ ಬಿಗಿ ಬಂದು ಬಸ್ತ್ ಕಟ್ಟೆ ಎಚ್ಚರವಹಿಸಿದರು.

## ಕವನ




### ಬೆಳಗು

ಬೆಳಗು ಬಾ ಬೆಳಕು
ಬೆಳದಿಂಗಳ ಬೆಳಕು ಚೆಲ್ಲುತ
ರಂಗು ರಂಗಿನ ಕಾಮನಬಿಲ್ಲಿನಂತೆ
ಮಿನು ಮಿನುಗುವ ಬೆಳ್ಳಿಚುಕ್ಕಿಯಂತೆ
ರಂಗು ರಂಗಿನ ರಂಗೋಲಿಯಂತೆ
ನೆನಪಿನಂಗಳದಿ ನಗು ನಗುತ
ನೀ ಬೆಳಗು ಬಾ ಬೆಳಕು...
ಈ ಬಾಳ್ ಕತ್ತಲೆಯ ಬದುಕು
ಹೊಸ ಜ್ಯೋತಿಯ ಹೊಂಬೆಳಕಲಿ
ಸೂರ್ಯನ ಬೆಳಕು ಚೆಲ್ಲುತ
ದ್ವಿವ ಜ್ಯೋತಿಯ ಉದಯಿಸುತ
ಬೆಳಗು ಬಾ ಬೆಳಕು...



ವಿ.ಎಂ.ಎಸ್.ಗೋಪಿ
ಲೇಖಕರು ಬೆಂಗಳೂರು.

## ಕಲಿಕೆ ಹಬ್ಬ ಮಕ್ಕಳ ಭವಿಷ್ಯದ ಬುನಾದಿ :ವಿರೇಶ ಬೋಳಶೆಟ್ಟಿ



ಆಳಂದ ತಾಲ್ಲೂಕಿನ ಜಮಗಾ ಕೆ ತಾಂಡದಲ್ಲಿ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ 2025–26 ನೇ ಸಾಲಿನ ಈಐಓ ಆಧಾರಿತ ಹೊದಲೂರು ಕ್ಲಸ್ಟರ್ ಹಂತದ ಕಲಿಕಾ ಹಬ್ಬ ಆಯೋಜನೆ ಮಾಡಲಾಗಿತ್ತು ಮೋಜಿನ ಗಣಿತ, ರಸಪ್ರಶ್ನೆ ,ಪೌಷ್ಟಿಕ ಆಹಾರ, ಕೈಬರಹ, ಕಥೆ ಹೇಳುವದು, ಗಟ್ಟಿ ಓದು, ರಸಪ್ರಶ್ನೆ, ಮುಂತಾದ ಚಟುವಟಿಕೆಗಳನ್ನು ಆಯೋಜನೆ ಮಾಡಲಾಗಿತ್ತು. ಹೊದಲೂರ ಕ್ಲಸ್ಟರಿನ ಶಾಲೆಯ ಮುಖ್ಯ ಗುರುಗಳು ಸಹ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ಮುಖ್ಯ ಗುರುಗಳಾದ ಸುರೇಶ್ ಹೊಸಮನಿ ವಹಿಸಿದರು. ಶಾಲೆಯ ಖಆಒಅ ಅಧ್ಯಕ್ಷರಾದ ಅಂಕುಶ ರಾಠೋಡ್ ಉದ್ಘಾಟಿಸಿದರು. ಗ್ರಾಮ ಪಂಚಾಯತಿಯ ಸದಸ್ಯರಾದ ಕಾಂತು ರಾಠೋಡ್ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು. ಮುಖ್ಯ ಗುರುಗಳಾದ ಸೂರ್ಯಕಾಂತ ಮಂಡ್ಲೆ, ಮಿಲಿಂದ ಸೋನಾಕಾಂಬಳೆ, ಹಣಮಂತ ಪಾತ್ರೆ, ಜಿಲಾನಿ ಗುತ್ತೇದಾರ ಉಪಸ್ಥಿತರಿದ್ದರು. ಅಂಗನವಾಡಿಯ ಕಾರ್ಯಕರ್ತೆಯರು ಹಾಗೂ ಗ್ರಾಮದ ವಿದ್ಯಾರ್ಥಿಗಳು, ಪಾಲಕರು ಸೇರಿದಂತೆ ಅನೇಕ ಜನ ಭಾಗವಹಿಸಿದ್ದರು ಪ್ರಾಸ್ತಾವಿಕವಾಗಿ ಹೊದಲೂರು ಕ್ಲಸ್ಟರ್ನ ಸಿಆರಪಿ ಯವರಾದ ವೀರೇಶ ಬೋಳಶೆಟ್ಟಿ ಮಾತನಾಡುತ್ತಾ ಕಲಿಕೆಯಲ್ಲಿ ಹಿಂದುಳಿದ ಮಕ್ಕಳನ್ನು ಗುರುತಿಸಿ, ಬುನಾದಿ ಸಾಕ್ಷರತೆ ಮತ್ತು ಸಂಖ್ಯಾ ಜ್ಞಾನವನ್ನು ಮಕ್ಕಳಲ್ಲಿ ಬೆಳೆಸುವ ನಿಟ್ಟಿನಲ್ಲಿ ಈ ಒಂದು ಕಾರ್ಯಕ್ರಮ ಬಹಳ ಪ್ರಮುಖವಾಗಿದೆ. ಪಾಲಕರು ಮತ್ತು ಮಕ್ಕಳು ಇದರಲ್ಲಿ ಭಾಗವಹಿಸುತ್ತಾರೆ ಎಂದು ತಿಳಿಸಿದರು. ಕಾರ್ಯಕ್ರಮದ ಕೊನೆಗೆ ಸ್ಪರ್ಧೆಯಲ್ಲಿ ಭಾಗವಹಿಸಿದ ಮಕ್ಕಳಿಗೆ ಪ್ರಥಮ ದ್ವಿತೀಯ ತೃತೀಯ ಬಹುಮಾನಗಳನ್ನು ನೀಡಲಾಯಿತು ಸುಮಾರು 21 ಮಕ್ಕಳು ಬಹುಮಾನ ಪಡೆದುಕೊಂಡರು ಶಿಕ್ಷಕರಾದ ಕಾಶಿನಾಥ ಹಿರೇಮಠ ನಿರೂಪಿಸಿದರು, ರವೀಂದ್ರ ರುದ್ರವಾಡಿ ಸ್ವಾಗತಿಸಿದರು. ಶಿಕ್ಷಕರಾದ ಕರಿಯಪ್ಪ ವಂದಿಸಿದರು.

## ಒಂದು ದಿನದ ಐ.ಎ.ಎಸ್, ಕೆ.ಎ.ಎಸ್ ಕಾರ್ಯಗಾರ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಜಿಲ್ಲಾಡಳಿತ, ಜಿ.ಪಂ, ಜಿಲ್ಲಾ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ತೋವಿವಿಯ ಸಹಯೋಗದಲ್ಲಿ ಜನವರಿ 8 ರಂದು ಬೆಳಿಗ್ಗೆ 9.30 ರಿಂದ ಮಧ್ಯಾಹ್ನ 3 ವರೆಗೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಒಂದು ದಿನದ ಐ.ಎ.ಎಸ್, ಕೆ.ಎ.ಎಸ್ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಆಸಕ್ತ ಪದವೀಧರರು ಗೂಗಲ್ ಫಾರ್ಮ http://forms.gle/EsqikFGxyeemav9 ಮೂಲಕ ನೋಂದಣಿ ಮಾಡಿಕೊಳ್ಳುವಂತೆ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08354–295210, 9464448728, 8147111236, 6362700132ಗೆ ಸಂಪರ್ಕಿಸಬಹುದಾಗಿದೆ.

# ನಾಡಿನ ಶಿಲ್ಪಕಲಾ ಸಂಸ್ಕೃತಿ ಶ್ರೀಮಂತಗೊಳಿಸಿದವರು ಜಕಣಾಚಾರಿ ಹಾಗೂ ವಿಶ್ವಕರ್ಮರು: ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ



• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:**

ಅಮರ ಶಿಲ್ಪಿ ಜಕಣಾಚಾರಿ ಅವರು ನಾಡಿನ ಶಿಲ್ಪ ಕಲೆಗೆ ನೀಡಿದ ಕೊಡುಗೆ ಸದಾ ಸ್ಮರಣೀಯ ಎಂದು ನಗರ ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ ಹೇಳಿದರು.

ನಗರದ ಸರ್ಕಾರಿ ಪದವಿ ಮಹಾವಿದ್ಯಾಲಯದ ಸಭಾಂಗಣದಲ್ಲಿ ಇಂದು ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಅವರ ಸಂಸ್ಮರಣಾ ದಿನಾಚರಣೆ ಅಂಗವಾಗಿ ಅಮರಶಿಲ್ಪಿ ಜಕಣಾಚಾರಿ ಅವರ ಭಾವಚಿತ್ರಕ್ಕೆ ಗೌರವ ಅರ್ಪಿಸಿ, ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಅಮರಶಿಲ್ಪಿ ಜಕಣಾಚಾರಿ ಅವರು ನಾಡಿನ ಶಿಲ್ಪ ಕಲೆಗೆ ನೀಡಿದ ಕೊಡುಗೆ ಅಪಾರ. ಶಿಲ್ಪಕಲಾ ಕ್ಷೇತ್ರ ಶ್ರೀಮಂತಗೊಳಿಸಿದ ಇಂತಹ ಅಮರಶೀಲ್ಪಕಾರ ಸೂರ್ಯ–ಚಂದ್ರವಿರುವ ವರೆಗೂ ಸ್ಮರಣೀಯರಾಗಿದ್ದಾರೆ ಎಂದು ಹೇಳಿದರು.

ವಿಶ್ವಕರ್ಮ ಸಮುದಾಯ ಹಾಗೂ ಅಮರಶೀಲ್ಪಿ ಜಕಣಾಚಾರಿ ಅವರ ಸಾಧನೆಗಳು ಈ ನಾಡಿಗೆ ವಿಶ್ವದ ಜನರನ್ನು ಕೈಬೀಸಿ ಕರೆಯುತ್ತಿವೆ. ಬೇಲೂರು, ಹಳೆಬೀಡು, ಐಹೊಳೆ, ಪಟ್ಟದಕಲ್ಲು, ಶಿಲ್ಪಕಲಾಕೃತಿಗಳು ಖ್ಯಾತಿ ಪಡೆದಿವೆ. ಇಂತಹ ಶಿಲ್ಪಕಲೆಗಳು, ಕಲಾ ನೈಪುಣ್ಯತೆಗಳು ಆಧುನಿಕ ತಂತ್ರಜ್ಞಾನದ ಭರಾಟೆಯಲ್ಲಿ ನಶಿಸಿ ಹೋಗದಂತೆ ನೋಡಿಕೊಳ್ಳುವ ಅವಶ್ಯಕತೆ ಇದೆ ಎಂದು ಹೇಳಿದರು.

ಸರ್ಕಾರವು ಸಹ ಇಂತಹ ಮಹಾನ್ ಶಿಲ್ಪಿಯ ಗೌರವಾರ್ಥವಾಗಿ ಜಕಣಾಚಾರಿ ಪ್ರಶಸ್ತಿಯನ್ನು ಸಹ ಪ್ರಕಟಿಸಿದೆ. ವಿಶ್ವಕರ್ಮರ ಕಲಾ ನೈಪುಣ್ಯತೆ ಅಗಾಧವಾಗಿದೆ ಎಂದ ಅವರು ವಿಶ್ವಕರ್ಮರ ಪಂಚಕಲೆಗಳಿಗೆ ಪ್ರೋತ್ಸಾಹ ನೀಡುವ ಅವಶ್ಯಕತೆ ಇದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಎಲ್.ಕೆ.ಟಿ ಪದವಿ ಮಹಾವಿದ್ಯಾಲಯ ಪ್ರಾಂಶುಪಾಲ ಶ್ರೀ ಗುರಪ್ಪ ಚಾರ್ಯ ಅವರು ಶಿಲ್ಪ ಕಲೆಗಳ ಮೂಲಕ ಭಾರತದ ಹಾಗೂ ಈ ನಾಡಿನ ಸಂಸ್ಕೃತಿಯನ್ನು ವಿಶ್ವಕರ್ಮರು ಶ್ರೀಮಂತಗೊಳಿಸಿದ್ದಾರೆ.

ವಿಶ್ವಕರ್ಮರ ಪಂಚಕಲೆಗಳಿಗೆ ಕೈಗಾರಿಕಾಸ್ಥಾನಮಾನ ದೊರಕಬೇಕು. ಶಿಲ್ಪಕಲೆ, ಕಂಚು, ತಾಮ್ರದ ಶಿಲ್ಪ ಕಲೆ ಹೀಗೆ ವಿವಿಧ ಕಲೆಗಳಿಗೆ ಪ್ರೋತ್ಸಾಹ ದೊರಕಬೇಕು. ಕೈಗಾರಿಕಾ ಪ್ರದೇಶದಲ್ಲಿ ಕೈಗಾರಿಕಾ ಸಂಕೀರ್ಣ, ಕುಠೀರದಂತಹ ವ್ಯವಸ್ಥೆ ಮೂಲಕ ಪ್ರೋತ್ಸಾಹಿಸುವ ಅವಶ್ಯಕತೆ ಇದೆ. ಕೈಗಾರಿಕಾ ವಸಾಹತು ಸ್ಥಾಪಿಸಿ ಪ್ರೋತ್ಸಾಹಿಸಲು ಅವರು ಕೋರಿದರು.ವಿಶ್ವಕರ್ಮ ಏಕದಂಡಗಿ ಮಠದ ಶ್ರೀ ರವೀಂದ್ರ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಾಬುರಾವ್ ಕಾಡ್ಲೂರ್, ಸಹಾಯಕ ಆಯುಕ್ತ ಶ್ರೀಧರ್ ಗೋಟುರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಶ್ರೀಮತಿ ಉತ್ತರದೇವಿ, ವಿಶ್ವಕರ್ಮ ಮಹಾಸಭಾ ಉಸ್ತುವಾರಿ ದೇವೇಂದ್ರ ಎಲ್.ವಡಗೇರಿ, ವಿಶ್ವ ಕರ್ಮ ಮಹಾಸಭಾದ ಗೌರವಾಧ್ಯಕ್ಷ ಶಿವಣ್ಣ ಉಣೂರ, ಜಿಲ್ಲಾಧ್ಯಕ್ಷ ಮಹೇಶ್ ತಡಬೀಡಿ, ಪ್ರಧಾನ ಕಾರ್ಯದರ್ಶಿ ರಮೇಶ್ ವಿಶ್ವಕರ್ಮ ಹತ್ತಿಕುಣಿ, ತಾಲೂಕಾಧ್ಯಕ್ಷ ಬಣ್ಣಪ್ಪ ಕಾಳೆಬೆಳಗುಂದಿ, ಹಣುಮಂತರಾಯ್ ಉಳ್ಳೆಸುಗೂರ ಉಪಸ್ಥಿತರಿದ್ದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ, ವಿವಿಧ ಇಲಾಖೆ ಹಾಗೂ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಕಾರ್ಯಕ್ರಮ ಆಯೋಜಿಸಲಾಗಿತ್ತು. ಸಮಾಜಕ್ಕಾಗಿ ಶ್ರಮಿಸುತ್ತಿರುವವರನ್ನು ಸನ್ಮಾನಿಸಲಾಯಿತು.

# ಸಮ್ಮೇಳನ ಅಧ್ಯಕ್ಷರ ಆಯ್ಕೆ ಸರ್ವರಿಗೂ ಸಂತಸ



• **ಮಲ್ಲಮ್ಮ ನುಡಿ ವಾರ್ತೆ,ಕೆಂಭಾವಿ:**

ಜನೇವರಿ 9 ರಂದು ನಡೆಯಲಿರುವ ಹುಣಸಗಿ ತಾಲೂಕು ಪ್ರಥಮ ಕನ್ನಡ ಸಾಹಿತ್ಯ ಸಮ್ಮೇಳದ ಅಧ್ಯಕ್ಷರಾಗಿ ಆಯ್ಕೆಯಾದ ಹಿರಿಯ ಸಾಹಿತಿ ವೀರೇಶ ಹಳ್ಳೂರ ರವರಿಗೆ ಕೆಂಭಾವಿ ವಲಯ ಸಾಹಿತಿ ಬಳಗದಿಂದ ಅಭಿನಂದಿಸಲಾಯಿತು. ಬುಧವಾರ ಸಮ್ಮೇಳನ ಅಧ್ಯಕ್ಷರಾದ ಹಳ್ಳೂರವರ ನಿವಾಸಕ್ಕೆ ತೆರಳಿ ಆತ್ಮೀಯವಾಗಿ ಗೌರವಿಸಿ ಅಭಿನಂದನೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಹಿರಿಯ ಚಿಂತಕ ಸುಮಿತ್ರಪ್ಪ ಅಂಗಡಿ ಮಾತನಾಡಿ ಗಿರಿ ಜಿಲ್ಲೆಯ ಹಿರಿಯ ಸಾಹಿತಿ ಹಳ್ಳೂರ ರವರನ್ನು ಹುಣಸಗಿಯ ನೂತನ ತಾಲೂಕು ಪ್ರಥಮ ಕಸಾಪ ತಾಲೂಕು ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆ ಮಾಡಿರುವುದು ತುಂಬಾ ಸಂತಸ ತಂದಿದೆ ಎಂದರು.

ಸಾಹಿತಿ ವೀರಣ ಕಲಕೇರಿ ಮಾತನಾಡಿ ಹಳ್ಳೂರವರು ಆಶು ಕವಿಯಾಗಿ, ಲೇಖಕರಾಗಿ, ಕಾದಂಬರಿಕಾರರಾಗಿ, ವಚನ ಸಾಹಿತಿಯಾಗಿ ಸಾರಸ್ವತ ಸಿರಿತನಕ್ಕೆ ಸಾಕ್ಷಿಯಾಗಿದ್ದಾರೆ. ಗಿರಿ ಜಿಲ್ಲೆ ಹಿರಿಯ ಸಾಹಿತಿಯಾಗಿದ್ದಾರೆ. ಅವರು ಸುಮಾರು 25 ಕ್ಕೂ ಹೆಚ್ಚು ಮೌಲ್ಯಯುತ ಕೃತಿಗಳನ್ನು ಕನ್ನಡ ಸಾಹಿತ್ಯಕ್ಕೆ ನೀಡಿದ್ದಾರೆ. ಸಮ್ಮೇಳನದ ಅಧ್ಯಕ್ಷರಾಗಿ ಅವರ ಆಯ್ಕೆ ಸರ್ವರಿಗೂ ಸಂತಸ ತಂದಿದೆ ಅವರನ್ನು ಆಯ್ಕೆ ಮಾಡಿದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಿದ್ದಪ್ಪ ಹೊಟ್ಟಿಯವರಿಗೆ ಹಾಗೂ ಹುಣಸಗಿ ತಾಕೂಕು ಅಧ್ಯಕ್ಷ ವೆಂಕಟಗಿರಿ ದೇಶಪಾಂಡೆ ರವರು ಸೇರಿದಂದೆ ಪರಿಷತ್ತಿನ ಎಲ್ಲಾ ಪದಾಧಿಕಾರಿಗಳಿಗೆ ಧನ್ಯವಾದ ತಿಳಿಸಿದರು.

ಈ ಸಂದರ್ಭದಲ್ಲಿ ಶರಣಪ್ಪ ಅಂಗಡಿ, ಡಾ. ಯಂಕನಗೌಡ ಪಾಟೀಲ್, ಶ್ರೀಶೈಲ ಪಾಸೋಡಿ, ಲೇಖಕಿ ಪಾರ್ವತಿ ಬೂದೂರ್, ಜ್ಯೋತಿ ದೇವಣಗಾಂವ್, ಭಾರತಿ ಪಾಸೋಡಿ, ಸಾಯಬಣ್ಣ ಕೊಡಗಾನೂರ ಚೇತನ ಸೇರಿದಂತೆ ಇತರರು ಇದ್ದರು.

## ಹಿರಿಯ ಶಿಕ್ಷಣ ಪ್ರೇಮಿ ಮಾಣಕಪ್ಪ ಗಾದಾ

ಕಲ್ಯಾಣ ಕರ್ನಾಟಕ
ಗಡಿನಾಡಿನ ಬೀದರ ಜಿಲ್ಲೆಯ
ಜಯಸಿಂಹ ನಗರದ
ಶಿಕ್ಷಣ ಕ್ರಾಂತಿಯ ಹರಿಕಾರರು
ಹಿರಿಯ ಮಾಣಿಕಪ್ಪ ಗಾದಾ

ಸರಳದ ಭಾವನೆಗಳು
ಆಧ್ಯಾತ್ಮಿಕ ಜೀವಿ
ನಿಷ್ಠಾವಂತ ಕಾಯಕ
ಸಮಾಜಕ್ಕೆ ಪ್ರೇಮಿಗಳು

ಇವರ ಅದ್ಭುತ ಮಕ್ಕಳು
ಶಿಕ್ಷಣದ ಜ್ಞಾನಿವಂತರು
ಸಂಸ್ಕೃತಿ ಸಂಸ್ಕಾರದ
ಸಮಾಜಕ್ಕೆ ಪ್ರೇಮಿಗಳು

ಆರೋಗ್ಯದ ಜೀವನ
ನೂರು ವರ್ಷದ ಬದುಕು
ಯೋಗಾಸನದ ಸನ್ಮಾರ್ಗ
ಆಯುಷು ಆನಂದ ಬೆಳಕು

ಹಲವಾರು ಶಿಕ್ಷಣ ಸಂಸ್ಥೆ
ಶಾಲೆ ನಿಷ್ಠಾವಂತ ಶಿಕ್ಷಕರು
ಸನ್ಮಾರ್ಗ ನೀಡಿದ ಮಕ್ಕಳಿಗೆ
ದೇಶಕ್ಕೆ ಬೆಳಕು ತೋರಿಸಿದವರು

ಸಾವಿರಾರು ಮಕ್ಕಳು ಬುದ್ಧಿವಂತರು
ಜ್ಞಾನಿವಂತರು ವಿದ್ವಾಂಸರ ಪಂಡಿತರು
ಬದುಕು ಜೀವನ ಸಾಧನೆ ಯವರು
ವಿಶ್ವಕ್ಕೆ ಬೆಳದಿಂಗಳು ಬೆಳಕಾದವರು

ಹಲವಾರು ವಿದ್ಯಾರ್ಥಿಗಳ ಸಾಧನೆ
ಶಿಕ್ಷಣದ ಜ್ಞಾನ ಭಂಡಾರ
ಬದುಕು ಬಲು ಬಂಗಾರ
ಸಂಸಾರ ಜೀವನ ಉದ್ಧಾರ

ಅತ್ತ ಇತ್ತ ಎತ್ತ ನೋಡಿದರು
ಶ್ರೀ ವಿವೇಕಾನಂದ ಸಂಸ್ಥೆಯ ಮಕ್ಕಳು
ಶಿಕ್ಷಣದ ಜ್ಞಾನ ಪಂಡಿತರು
ಸಮಾಜದ ಶಿಕ್ಷಣದ ಗೆದ್ದವರು

ಗಾಧಾ ಮುಪ್ಪ ಜೀವನದ
ಉಸಿರಾಡುವ ಕೊನೆತನಕ
ಶಿಕ್ಷಣದ ಅನುಭವದ ಪಾಠದ
ಶಿಕ್ಷಣ ಸಂಸ್ಥೆ ಅಮರವಾಯಿತು
ಸಾಕ್ಷಾತ್ಕಾರ



**ಕರ್ನಾಟಕ ರಾಜ್ಯ ಬರಹಗಾರರ ಸಂಘ ಬೀದರ್**
**ಜಿಲ್ಲಾಧ್ಯಕ್ಷರಾದ ಸಾಹಿತಿ**
**ಶ್ರೀ ವಿಜಯ ಕುಮಾರ ಚಟ್ಟಿ**
**9141949392**

# ಸಮಯಕ್ಕೆ ಸರಿಯಾಗಿ ಕೆಲಸ ನಿರ್ವಹಿಸುತತ್ತಿಲ : ಬಿಎಸ್ಪಿ ಮನವಿ.



ಮಲ್ಲಮ್ಮನುಡಿ ವಾರ್ತೆ. ಬಸವಕಲ್ಯಾಣ:– ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿರುವ ಹಲವು ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ನಿಯೋಜಿತ ವೈದ್ಯರು ನಿಯಮಿತ ಸಮಯಕ್ಕೆ ಸರಿಯಾಗಿ ಕರ್ತವ್ಯಕ್ಕೆ ಹಾಜರಾಗುತ್ತಿಲ್ಲ ಎಂದು ಬಿಎಸ್ಪಿ ತಾಲೂಕು ಅಧ್ಯಕ್ಷರಾದ ಶಂಕರ್ ಫುಲೆ ನೇತೃತ್ವದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿಗಳಿಗೆ ಮನವಿ ಪತ್ರ ಮೂಲಕ ಒತ್ತಾಯಿಸಿದ್ದಾರೆ. ವೈದ್ಯರು ಸಮಯಕ್ಕೆ ಸರಿಯಾಗಿ ಇರಲಾರದ ಕಾರಣ ನಗರ ಹಾಗೂ ಗ್ರಾಮೀಣ ಜನತೆ, ವಿಶೇಷವಾಗಿ ಗರ್ಭಿಣಿಯರು. ವೃದ್ಧರು ಹಾಗೂ ಬಡ ರೋಗಿಗಳು ತೀವ್ರ ತೆ–ಂದರೆ ಅನುಭವಿಸುತ್ತಿದ್ದಾರೆ. ಕೆಲವೊಮ್ಮೆ ದೂರದ ಖಾಸಗಿ ಆಸ್ಪತ್ರೆಗಳ ಹೋಗಬೇಕಾದ ಅನಿವಾರ್ಯತೆ ಎದುರಾಗುತ್ತಿದ್ದು, ಇದರಿಂದ ಆರ್ಥಿಕ ಹಾಗೂ ಆರೋಗ್ಯ ಸಂಬಂಧಿತ ಸಮಸ್ಯೆಗಳು ಉಂಟಾಗುತ್ತಿವೆ.

ಸರ್ಕಾರದಿಂದ ಗ್ರಾಮೀಣ ಜನತೆಗೆ ಉತ್ತಮ ಆರೋಗ್ಯ ಸೇವೆ ಒದಗಿಸುವ ಉದ್ದೇಶದಿಂದ ಈ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ವೈದ್ಯರು ಕರ್ತವ್ಯ ನಿರ್ಲಕ್ಷ್ಯ ತೋರಿಸುವುದು ಅತ್ಯಂತ ಖಂಡನೀಯ ವಿಷಯವಾಗಿದೆ.

ಸಂಬಂಧಿಸಿದ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ ವೈದ್ಯರ ಕರ್ತವ್ಯ ಸಮಯವನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಕ್ರಮ ಕೈಗೊಳ್ಳುವಂತೆ ಹಾಗೂ ಸಾರ್ವಜನಿಕರಿಗೆ ಸುಸಜ್ಜಿತ ಆರೋಗ್ಯ ಸೇವೆ ಲಭ್ಯವಾಗುವಂತೆ ಸೂಕ್ತ ನಿರ್ದೇಶನ ನೀಡುವಂತೆ ವಿನಂತಿಸಿದರು. ಒಂದು ವೇಳೆ ಇವರ ಮೇಲೆ ಕ್ರಮಕೈಗೊಳ್ಳದಿದ್ದರೆ ನಾವು ನೀಮ್ಮ ಮೇಲಾಧಿಕಾರಿಗಳಿಗೆ ದೂರು ಸಲ್ಲಿಸುತ್ತೇವೆ ಎಂದು ಶಂಕರ್ ಫುಲೆ ಒತ್ತಾಯಿಸಿದ್ದಾರೆ. ಈ ಸಂದರ್ಭದಲ್ಲಿ ರಮೇಶ ರಾಠೋಡ. ರವಿ ಉದಾತೆ. ಮಹಾದೇವ ಗಾಯಕವಾಡ. ದೀಲಿಪ ಸಿರೋಳೆ. ಮಾರುತಿ ಮೇಕಾಲೆ. ಪ್ರಕಾಶ ಗುಡ್ಡೆ ಹಾರಕೂಡ. ತಾಲ್ಲೂಕು ಅಧ್ಯಕ್ಷರು ಹಾಗೂ ಗ್ರಾಮ ಘಟಕದ ಅಧ್ಯಕ್ಷರು ಉಪಾಧ್ಯಕ್ಷರು. ಕಾರ್ಯದರ್ಶಿಗಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಸಹಕಾರಿ ಸಂಸ್ಥಾಪನಾ ದಿನಾಚರಣೆ



• **ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ:**

ಕರ್ನಾಟಕ ಸೌಹಾರ್ದ ಸಹಕಾರಿ ಕಾಯ್ದೆಯು 2001 ರಲ್ಲಿ ಜಾರಿಗೆ ಬಂದಿದ್ದು, ಪ್ರತಿ ವರ್ಷವೂ ಜನವರಿ 01 ರಂದು ಸೌಹಾರ್ದ ಸಹಕಾರಿ ದಿನವನ್ನಾಗಿ ಆಚರಿಸಲಾಗುತ್ತಿದೆ ಎಂದ ನಿರ್ದೇಶಕ ವೈ ಟಿ ಪಾಟೀಲ ಹೇಳಿದರು.ಪಟ್ಟಣದ ಹೇಮರೆಡ್ಡಿ ಮಲ್ಲಮ್ಮ ಸೌಹಾರ್ದ ಸಹಕಾರಿ ಸಂಘ ನಿ. ಕೆಂಭಾವಿಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಸೌಹಾರ್ದ ಸಹಕಾರಿ ದಿನಾಚರಣೆ ಅಂಗವಾಗಿ ಸಹಕಾರಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು ಸೌಹಾರ್ದ ಸಹಕಾರಿ ಕಾಯ್ದೆಯು ಸಹಕಾರಿ ಸಂಸ್ಥೆಗಳಿಗೆ ಸ್ವಾಯತ್ತತೆ ಮತ್ತು ಪುನರ್ ಸಂಘಟನೆ, ಸಮಾಜ ಸೇವೆ ಹಾಗೂ ಆರ್ಥಿಕ ಅಭಿವೃದ್ಧಿಯನ್ನು ಉತ್ತೇಜಿಸಿ, ಲಾಭದ ಜೊತೆಗೆ ಸಾಮಾಜಿಕ ಉದ್ದೇಶಗಳನ್ನೂ ಹೊಂದಿದ್ದು, ಹಿರಿಯ ನಾಗರಿಕರು, ಮಹಿಳೆಯರು, ಯುವಕರಲ್ಲಿ, ಸಹಕಾರ ಮತ್ತು ಸ್ವಾವಲಂಬನೆ ಸಾಧಿಸುವಲ್ಲಿ ಸೌಹಾರ್ದ ಸಹಕಾರಿ ಕಾಯ್ದೆ ಪ್ರಮುಖ ಪಾತ್ರವಹಿಸುತ್ತದೆ ಎಂದರು.

ಇದೇ ವೇಳೆ ಮುಖ್ಯ ಕಾರ್ಯನಿರ್ವಾಹಕ ಸುರೇಶ ಯಾಳಗಿ, ಸಿಬ್ಬಂದಿಗಳಾದ ಶಿವರೆಡ್ಡಿ, ಶ್ಯಾಮಸುಂದರ, ನಾಡಿಗೇರ ಚಂದುಸಿಂಗ್ ಯಾಳಗಿ, ಶಿವು ಪತ್ತೇಪುರ, ಶೇಖು ಪತ್ತೇಪುರ ಉಪಸ್ಥಿತರಿದ್ದರು. ಧ್ವಜಾರೋಹಣಕ್ಕೂ ಮುನ್ನಾ ಸಹಕಾರಿ ಪಿತಾಮಹ ಸಣ್ಣರಾಮನಗೌಡರ ಭಾವ ಚಿತ್ರಕ್ಕೆ ಮಾಲಾರ್ಪಣೆ ಮಾಡಿ ಪೂಜೆ ಸಲ್ಲಿಸಲಾಯಿತು.

# ತತ್ವ–ಚಿಂತನೆಗಳಿಗೆ ಕಾಲದ ಕಟ್ಟಳೆಗಳಿಲ್ಲ ಡಾ. ಭೀಮಾಶಂಕರ ಬಿರಾದಾರ



**ಮಲ್ಲಮ್ಮ ನುಡಿ ವಾರ್ತೆ.**
**ಬಸವಕಲ್ಯಾಣ: –**

ಹನ್ನೆರಡನೆಯ ಶತಮಾನದಲ್ಲಿ ಬಸವಾದಿ ಶರಣರು ಕಟ್ಟಿದ ಸಮ ಸಮಾಜ, ಜಾತ್ಯತೀತ ಜಗತ್ತು, ಪ್ರಭುತ್ವ–ಸಾಂಸ್ಥಿಕ ಹಂಗಿಲ್ಲದ ಬದುಕು ಬದುಕಿದ್ದರು. ಆಧುನಿಕ ಸಾಹಿತ್ಯ ಸಂದರ್ಭದಲ್ಲಿ ಕುವೆಂಪು ಅವರು ಸರ್ವೋದಯ, ಸಮನ್ವಯ, ನಿರಂಕುಶಮತಿತ್ವಪ್ರತಿಪಾದಿಸಿ, ವಿಶ್ವಮಾನವ ತತ್ವವನ್ನು ತಮ್ಮ ಸಾಹಿತ್ಯದ ತಾತ್ವಿಕತೆಯಾಗಿ ರೂಪಿಸಿದರು ಬಸವಣ್ಣನವರ ಮತ್ತು ಕುವೆಂಪು ಅವರ ವಿಚಾರಗಳಲ್ಲಿ ಅತಿ ಹೆಚ್ಚು ಸಾಮ್ಯತೆಗಳಿವೆ. ಎಂದು ಬಸವೇಶ್ವರ ಪದವಿ ಕಾಲೇಜು ಪ್ರಾಚಾರ್ಯ ಡಾ. ಭೀಮಾಶಂಕರ ಬಿರಾದಾರ ಹೇಳಿದರು.

ನಗರದ ಶ್ರೀ ಬಸವೇಶ್ವರ ಪದವಿ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ವಿಶ್ವಮಾನವ ದಿನಾಚರಣೆ ಪ್ರಯುಕ್ತ ಕುವೆಂಪು ಸಾಹಿತ್ಯದ ತಾತ್ವಿಕತೆ ಕುರಿತ ಉಪನ್ಯಾಸ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು,ತತ್ವ ಚಿಂತನೆಗಳಿಗೆ ಕಾಲದ ಕಟ್ಟಳೆಗಳಿಲ್ಲ. ಜನಪರ ವಿಚಾಗಳಿಗಳು ಯಾವ ಕಾಲದಾದರೂ ಅವು ನಿರಂತರ ಚಲನಶೀಲತೆ ಹೊಂದಿರುತ್ತವೆ ಎಂದರು.

ಮೌಢ್ಯ , ಕಂದಾಚಾರ, ಸಾಮಾಜಿಕ ಅನಿಷ್ಟಗಳನ್ನು ವಿರೋಧಿಸಿದವರಲ್ಲಿ ಬಸವಣ್ಣನವರ ನಂತರದ ನಿಷ್ಠುರ ಧ್ವನಿ ಕುವೆಂಪು. ಇವರಿಬ್ಬರೂ ಕನ್ನಡ ಪ್ರಜ್ಞೆ ವಿಸ್ತರಿಸಿದವರು. ಕನ್ನಡ ಸಾಂಸ್ಕೃತಿಕ ಲೋಕದಲ್ಲಿ ವೈಚಾರಿಕ ಅರಿವನ್ನು ಬಿತ್ತಿದವರು ಎಂದರು.

ಕುವೆಂಪು ಅವರ ಸಾಹಿತ್ಯ ಕಳೆದ ಐದಾರು ದಶಕಗಳಿಂದ ಹಲವು ನೆಲೆಗಳಲ್ಲಿ ಮತ್ತು ಹಲವು ಆಯಾಮಗಳಲ್ಲಿ ಅನುಸಂಧಾನಕ್ಕೆ ಒಳಪಡುತ್ತಲಿವೆ. ಕುವೆಂಪು ಅವರು ಬರಹ ಆರಂಭಿಸಿದ ಕಾಲದಿಂದಲೇ ಟೀಕೆ, ಟಿಪ್ಪಣಿ, ಪ್ರತಿಕ್ರಿಯೆ ರೂಪದಲ್ಲಿ ಅವರ ಬರಹದ ಕುರಿತು ಕನ್ನಡದಲ್ಲಿ ಕುವೆಂಪು ಸಾಹಿತ್ಯ ವಿಮರ್ಶೆಯ ಮಾರ್ಗ ಆರಂಭವಾಗಿದೆ ಎಂದರು.

ಕಾಡು, ಕಾಡಿನ ಜೀವಜಾಲ, ಮನುಷ್ಯ ಸಂಬಂಧಗಳ ಬಗೆಗೆ 'ಮಲೆಗಳಲ್ಲಿ ಮದುಮಗಳು' ಮತ್ತು 'ಕಾನೂರು ಹೆಗ್ಗಡತಿ' ಕಾದಂಬರಿಗಳಲ್ಲಿ ಕಟ್ಟಿಕೊಟ್ಟ ಬಗೆ ಅಚ್ಚರಿ ಮೂಡಿಸುತ್ತದೆ. ಈ ಕಾದಂಬರಿಗಳಲ್ಲಿ ಬರುವ ಮಲೆನಾಡಿನ ತಳಸಮುದಾಯದ ಬದುಕು , ಶೂದ್ರ ತಪಸ್ವಿ ನಾಟಕಗಳು ಸಬಾಲ್ಟರ್ನ್ ಓದಿಗೆ ಒಡ್ಡುತ್ತವೆ ಎಂದರು.

ಕುವೆಂಪು ಕನ್ನಡ ನುಡಿ ಪ್ರೇಮದ ಬಗೆಗೆ ಎಷ್ಟು ಕವಿತೆ ಬರೆದಿದ್ದಾರೆಯೋ, ಅಷ್ಟೇ ಮಹತ್ವ ನೀಡಿದ್ದು ಪ್ರಕೃತಿ ಮತ್ತು ಪರಿಸರದ ವಿಸ್ಮಯಕ್ಕೆ. ಅವರ ಮಲೆಗಳಲ್ಲಿ ಮದುಮಗಳು ಕಾದಂಬರಿಯಲ್ಲಿ ಬರುವ ಕಾಡಿನ ಕಥನ ಹಾಗೂ ವಿಶ್ಲೇಷಣೆ ಓದುಗರಿಗೆ ಕಾಡಿನ ಪಯಣದ ಅನುಭವ ನೀಡುತ್ತದೆ ಎಂದರು.

ಕಲಬುರಗಿಯ ನಾಗಾಂಬಿಕಾ ಮಹಿಳಾ ಪದವಿ ಕಾಲೇಜು ಸಹಾಯಕ ಪ್ರಾಧ್ಯಾಪಕ ಡಾ. ಜಗದೀಶ್ ಬಡಿಗೇರ ಮಾತನಾಡಿ, ಕುವೆಂಪು ಈ ಶತಮಾನದ ಬಹುದೊಡ್ಡ ಲೇಖಕರು. ಮಕ್ಕಳ ಸಾಹಿತ್ಯ, ವಿಚಾರ, ವಿಮರ್ಶೆ, ನಾಟಕ, ಕತೆ, ಕಾದಂಬರಿ, ಮಹಾಕಾವ್ಯ ಸೇರಿ ಸಾಹಿತ್ಯದ ಹಲವು ಪ್ರಕಾರಗಳು ಬರೆದಿದ್ದಾರೆ.

ರಾಷ್ಟ್ರೀಯತೆ, ನುಡಿ ಪ್ರೇಮ ಕುವೆಂಪು ಸಾಹಿತ್ಯದ ಸತ್ವವಾಗಿದೆ ಎಂದರು.

ಕನ್ನಡ ಅಧ್ಯಾಪಕ ಚನ್ನಬಸಪ್ಪ ಗೌರ ಮಾತನಾಡಿ, ಕುವೆಂಪು ಅವರು ಕನ್ನಡ ಭಾಷೆ ಮತ್ತು ಕನ್ನಡಿಗರ ಅಭಿಮಾನದ ಬಗೆಗೆ ಹೆಚ್ಚು ಕವಿತೆಗಳು ಬರೆದಿದ್ದಾರೆ. ಅವರು ಸಾರಿದ ವಿಶ್ವಮಾನವ ಸಂದೇಶ ಇಡೀ ಜಗತ್ತಿಗೆ ಮಾದರಿಯಾಗಿದೆ. ಇಡೀ ಭಾರತವನ್ನು ಸರ್ವಜನಾಂಗದ ಶಾಂತಿಯ ತೋಟಕ್ಕೆ ಹೊಲಿಸಿದ್ದಾರೆ. ಭಾರತದ ಅಖಂಡತೆ, ಅನನ್ಯತೆ ಸೂಚಿಸುವ ಕಾವ್ಯ ರಚಿಸಿದ್ದಾರೆ ಎಂದರು.

ಪ್ರವೀಣ್ ಬಿರಾದಾರ, ಸಂಗೀತಾ ಮಹಾಗಾಂವೆ, ಶೃತಿ ನೀಲಮಠ, ವಿವೇಕಾನಂದ ಶಿಂದೆ, ರೋಷನ್ ಬೀ, ಗುರುದೇವಿ ಕಿಚಡೆ, ಸನತ್ ರೆಡ್ಡಿ, ಶಿತಲ್ ರೆಡ್ಡಿ, ಪ್ರೀಯಾ ಚೌಹಾಣ್, ಕೃಷ್ಣಪ್ಪ ಸದಲಾಪುರ, ನಾಗರಾಜ ನಾಸೆ, ಕೃಷ್ಣ ಗೌಳಿ, ವೀರೇಶ ಮಠಪತಿ, ಎಂ.ಡಿ.ಜಬಿ , ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಉಪನ್ಯಾಸಕ ಗಿರೀಶ್ ಪಾಟೀಲ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಐಕ್ಯುಎಸಿ ಸಂಯೋಜಕ ಪವನ ಪಾಟೀಲ ಸ್ವಾಗತಿಸಿದರು. ಕನ್ನಡ ವಿಭಾಗದ ಮುಖ್ಯಸ್ಥೆ ಜಗದೇವಿ ಜಾವಳಗೆ ನಿರೂಪಿಸಿದರು. ಗಂಗಾಧರ ಸಾಲಿಮಠ ವಂದಿಸಿದರು.

# ಬಿಡ್ಡುದಾರರಿಗೆ ತರಬೇತಿಗೆ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :**

ಅಬಕಾರಿ ಇಲಾಖೆಯಲ್ಲಿ ಸ್ಥಗಿತಗೊಂಡಿರುವ, ಮಂಜೂರಾಗದೇ ಬಾಕಿ ಉಳಿದಿರುವ ಸನ್ನದುಗಳನ್ನು ಭಾರತ ಸರ್ಕಾರದ ಸ್ವಾಮ್ಯದ ಸಂಸ್ಥೆಯಾದ ಎಮ್‌ಎಸ್‌ಟಿಸಿ ಲಿಮಿಟೆಡ್‌ನ ಇ–ಪೋರ್ಟಲ್‌ನಲ್ಲಿ ಇ–ಹರಾಜು ಮಾಡಲು ವೆಬ್‌ಸೈಟ್ www.mstcecom-merce.com ಮೂಲಕ ಅರ್ಜಿ ಬಿಡ್ಡರ್‌ಗಳಿಂದ ಬಿಡ್ಡುಗಳನ್ನು ಆಹ್ವಾನಿಸಲಾಗಿದ್ದು, ಕಲ್ಬುರ್ಗಿಯಲ್ಲಿ ತರಬೇತಿ ಆಯೋಜಿಸಲಾಗಿದೆ ಎಂದು ಯಾದಗಿರಿ ಅಬಕಾರಿ ಉಪ ಆಯುಕ್ತರು ಅವರು ತಿಳಿಸಿದ್ದಾರೆ. ಯಾದಗಿರಿ ಜಿಲ್ಲಾ ಸಂಭಾವ್ಯ ಬಿಡ್ಡುದಾರರಿಗೆ 2026ರ ಜನವರಿ 30 ರಂದು ಬೆಳಿಗ್ಗೆ 11 ರಿಂದ 1 ಗಂಟೆಯ ವರೆಗೆ ಹಾಗೂ ಮಧ್ಯಾಹ್ನ 2 ರಿಂದ 4 ಗಂಟೆಯ ವರೆಗೆ ಸಮಯದಲ್ಲಿ ನಿಗದಿಪಡಿಸಲಾಗಿರುತ್ತದೆ. ಎಂ.ಆರ್.ಎಂ.ಸಿ, ಎಸ್.ಎಸ್.ಸಿ (ಹೆಚ್.ಕೆ.ಇ.ಎಸ್, ಸಿ.ಪಿ.ಎಂ.ಬಾಯ್ಸ್ ಹಾಸ್ಟೆಲ್ ಕ್ಯಾಂಪ್ಸ್ ಸೇಡಂ ರೋಡ (ಹಳೆಯ ಆರ್.ಟಿ.ಓ ಕಛೇರಿ ಎದುರುಗಡೆ) ಕಲಬುರಗಿ ನಗರದಲ್ಲಿ ಒಂದು ದಿನದ ತರಬೇತಿಯನ್ನು ಆಯೋಜಿಸಲಾಗಿರುತ್ತದೆ. ನೋಂದಣಿ ಪ್ರಕ್ರಿಯೆ ಪೂರ್ಣಗೊಂಡ ನಂತರ ಮತ್ತು ಆನ್‌ಲೈನ್ ಮೂಲಕ ವ್ಯಾಲೆಟ್‌ಗೆ ಹಣ ಪಾವತಿಯು ಖಚಿತವಾದ ನಂತರವೇ ಬಿಡ್ಡರಗಳು ಆನ್‌ಲೈನ್ ಹರಾಜಿನಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ. ಆದ್ದರಿಂದ ಬಿಡ್ಡರಗಳು ತಾವು ಭಾಗವಹಿಸಲು ಇಚ್ಚಿಸುವ ನಿರ್ಧಿಷ್ಟ ಸ್ಲಾಟ್‌ನ ಹರಾಜು ಪ್ರಾರಂಭವಾಗುವ 48 ಗಂಟೆಗಳ ಮುಂಚಿತವಾಗಿ ನೋಂದಣಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದಲ್ಲಿ ಪ್ರಕ್ರಿಯೆ ಸುಗಮವಾಗುತ್ತದೆ. ಅಬಕಾರಿ ಆಯುಕ್ತರು ಹೊರಡಿಸಿರುವ ತರಬೇತಿ ವೇಳಾಪಟ್ಟಿಯನ್ನು ಅಬಕಾರಿ ಇಲಾಖೆ ವೆಬ್‌ಸೈಟ್ stateexcise.karnataka.gov.in ನಲ್ಲಿ ಮತ್ತು ಎಂ.ಎಸ್.ಟಿ.ಸಿ ಇ–ಹರಾಜು ಪೋರ್ಟಲ್ ತಿತಿತಿ. ಟಣಛಿಜಛಿಂಟಟಜಡಿಛಿಜ.ಛಿಂಟ ನಲ್ಲಿ ಲಭ್ಯವಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಅಧಿಕಾರಿಗಳನ್ನು ಯಾದಗಿರಿ ಉಪ ವಿಭಾಗ ಅಬಕಾರಿ ಉಪ ಅಧೀಕ್ಷಕರು ಶ್ರೀ ಹರ್ಷರಾಜ್.ಬಿ ಮೊ.ನಂ.8867649520, ಯಾದಗಿರಿ ವಿಭಾಗ ಅಬಕಾರಿ ನಿರೀಕ್ಷಕರು ಶ್ರೀ ಜಟ್ಟೆಪ್ಪ ಬೇಲೂರ ಮೊ.ನಂ.9743791924, ಯಾದಗಿರಿ ಡಿ.ಸಿ.ಇ.ಐ.ಬಿ. ಅಬಕಾರಿ ನಿರೀಕ್ಷಕರು ಶ್ರೀ ಶ್ರೀಶೈಲ್ ಒಡೆಯರ್ ಮೊ.ನಂ.9480289919, ಯಾದಗಿರಿ ವಲಯ ಅಬಕಾರಿ ನಿರೀಕ್ಷಕರು ಶ್ರೀ ಶಿವಾನಂದ ಪಾಟೀಲ್ ಮೊ.ನಂ.9741616613, ಶಹಾಪೂರ ವಲಯ ಅಬಕಾರಿ ನಿರೀಕ್ಷಕರು ಶ್ರೀ ಶರಣಗೌಡ ಬಿರಾದಾರ ಮೊ.ನಂ.9591485361ಗೆ ಸಂಪರ್ಕಿಸಲು ಅಬಕಾರಿ ಉಪ ಆಯುಕ್ತರು ಕೋರಿದ್ದಾರೆ.

# ಕ್ರಿಕೆಟ್ ಟೂರ್ನಿಗೆ ಚಾಲನೆ



• **ಮಲ್ಲಮ್ಮ ನುಡಿ ವಾರ್ತೆಚಿಟಗುಪ್ಪ:**

ಯುವ ಜನರು ಕ್ರಿ–ಡ್ರೆಗಳ ಮಹತ್ವ ಅರಿತು, ಅಭಿವೃದ್ಧಿ ಪಡಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಜತೆಗೆ ಕ್ರಿಡೆಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ದೆಹಿಕ ಮತ್ತು ಮಾನಸಿಕವಾಗಿ ಸದೃಢರಾಗಬೇಕೆಂದು ಬಿಜೆಪಿ ಮುಖಂಡ ಅರುಣಕುಮಾರ ಬಾವಗಿ ಹೇಳಿದರು. ತಾಲೂಕಿನ ಬನ್ನಳ್ಳಿ ಗ್ರಾಮದಲ್ಲಿ ಜೈ ಭವಾನಿ ಮತ್ತು ಜೈ ಹನುಮಾನ್ ತಂಡ ಆಯೋಜಿಸಿದ್ದ ಕ್ರಿಕೆಟ್ ಟೂರ್ನಮೆಂಟ್ ಉದ್ಘಾಟಿಸಿ ಮಾತನಾಡಿದ ಅವರು, ಕ್ರೀಡೆಯಿಂದ ಯುವ ಜನರಲ್ಲಿ ನಾಯಕತ್ವ ಗುಣ ಮತ್ತು ಕ್ರೀಡಾ ಮನೋಭಾವ ಬೆಳೆಸಲು ಉಪಯುಕ್ತವಾಗಿವೆ. ಕ್ರೀಡೆಯಲ್ಲಿ ಸೋಲು ಗೆಲುವು ಸಾಮಾನ್ಯ ಪಾಲ್ಗೊಳ್ಳುವದು ಮುಖ್ಯವಾಗಿದೆ ಎಂದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಮಾಜಿ ಉಪಾಧ್ಯಕ್ಷ ಮೈಪಾಲ್ ರೆಡ್ಡಿ, ಶಿವಕುಮಾರ್ ಧರ್,ವೆಂಕಟರೆಡ್ಡಿ ಶೇರಿಕಾರ್, ವಿಷ್ಣು ಸಗರ್, ಕಾರ್ತಿಕ್ ಸ್ವಾಮಿ, ಸಂದೀಪ್ ಖಾನಾಪುರಿ ಸೇರಿದಂತೆ ಕ್ರೀಡಾ ಪಟ್ಟುಗಳು ಉಪಸ್ಥಿತರಿದ್ದರು.

## 208ನೇ ಭೀಮಾ ಕೋರೆಗಾಂವ್ ವಿಜಯೋತ್ಸವ ಆಚರಣೆ



• **ಮಲ್ಲಮ್ಮ ನುಡಿ ವಾರ್ತೆ,ರಾಯಚೂರು:**

208ನೇ ಭೀಮಾ ಕೋರೆಗಾಂವ್ ವಿಜಯೋತ್ಸವದ ಅಂಗವಾಗಿ ಅಂಬೇಡ್ಕರ್ ಸೇನೆಯ ವತಿಯಿಂದ ಇಂದು ನಗರದ ಡಾ. ಬಿ.ಆರ್. ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಭೀಮಾ ಕೋರೆಗಾಂವ್ ವಿಜಯೋತ್ಸವವನ್ನು ಭಕ್ತಿಭಾವದಿಂದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಅಂಬೇಡ್ಕರ್ ಸೇನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಜಿಲ್ಲಾಧ್ಯಕ್ಷರಾದ ವಿಶ್ವನಾಥ ಪಟ್ಟಿ ಅವರು ಮಾತನಾಡಿ, ಭೀಮಾ ಕೋರೆಗಾಂವ್ ವಿಜಯೋತ್ಸವವು ದಲಿತ ಸಮುದಾಯದ ಶೌರ್ಯ, ಸ್ವಾಭಿಮಾನ ಮತ್ತು ಸಂವಿಧಾನಾತ್ಮಕ ಹೋರಾಟದ ಜೀವಂತ ಸಂಕೇತವಾಗಿದ್ದು,

ಡಾ. ಬಿ.ಆರ್. ಅಂಬೇಡ್ಕರ್ ಅವರ ಸಮಾನತೆ ಮತ್ತು ಸಾಮಾಜಿಕ ನ್ಯಾಯದ ಚಿಂತನೆಗಳನ್ನು ಮುಂದಿನ ತಲೆಮಾರಿಗೆ ತಲುಪಿಸಬೇಕಾದ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಸೇನೆಯ ಅಲ್ಪಸಂಖ್ಯಾತರ ಘಟಕದ ಜಿಲ್ಲಾಧ್ಯಕ್ಷರಾದ ಬಂದೇನಾವಜು, ಅಮರಯ್ಯ ಸ್ವಾಮಿ, ಕುಮಾರಸ್ವಾಮಿ, ತಾಯಕೂಮಾರು, ವೆಂಕಟೇಶ ರಾಂಪುರು, ಚಂದ್ರು ಯಕಲಸುಪುರು, ನರಸಿಂಹುಲು, ಪಿ. ಚಂದ್ರಶೇಖರು, ಬಿ. ಅಂಜಿನೆಯ್ಯ ಸೇರಿದಂತೆ ಅನೇಕ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.ಭೀಮಾ ಕೋರೆಗಾಂವ್ ವಿಜಯೋತ್ಸವದ ಇತಿಹಾಸಾತ್ಮಕ ಮಹತ್ವವನ್ನು ಸ್ಮರಿಸಿ, ಸಂವಿಧಾನ ರಕ್ಷಣೆಗೆ ಮತ್ತು ಸಾಮಾಜಿಕ ಸಮಾನತೆಯ ಹೋರಾಟಕ್ಕೆ ಬದ್ಧರಾಗುವಂತೆ ಈ ಸಂದರ್ಭದಲ್ಲಿ ಕರೆ ನೀಡಲಾಯಿತು.

# ಸದ್ಗುರು ವಿದ್ಯಾಲಯದಲ್ಲಿ ಅಮ್ಮನ ಕೈ ತುತ್ತು ಕಾರ್ಯಕ್ರಮ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ :**



ಎಲ್ಲಾ ಮಕ್ಕಳ ಜೀವನದಲ್ಲಿ ತಾಯಿಯ ಪಾತ್ರ ಬಹಳ ಮುಖ್ಯವಾದದ್ದು ತಾಯಿಯೇ ಮೊದಲ ಗುರುವಾಗಿದ್ದು ಮಕ್ಕಳ ಸರ್ವತೋಮುಖ ಬೆಳವಣಿಗೆಯಲ್ಲಿ ತಾಯಿಯ ಕೊಡುಗೆ ಅತ್ಯುನ್ನತವಾದದ್ದು, ತಾಯಿಯ ಕಷ್ಟ, ನೋವು ಎಲ್ಲವೂ ಮಕ್ಕಳ ಅತ್ಯುನ್ನತ ಸಾಧನೆಯ ಮುಂದೆ ಮಂಜಿನಂತೆ ಕರಗಿಹೋಗುತ್ತದೆ ಎಂದು ಸದ್ಗುರು ವಿದ್ಯಾಲಯ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಸೋಮನಾಥ ಮುದ್ದಾ ಹೇಳಿದರು.

ಪಟ್ಟಣದ ಸದ್ಗುರು ವಿದ್ಯಾಲಯ ಶಾಲೆಯಲ್ಲಿ ನಡೆದ ಮಾತೃತ್ವದ ಮಹತ್ವ ಅಮ್ಮನ ಕೈ ತುತ್ತಿನ ಮಹತ್ವ ತಿಳಿಸಲು ನಡೆದ ಅಮ್ಮನ ಕೈ ತುತ್ತು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಶಿಕ್ಷಣದ ಜೊತೆಗೆ ತಮ್ಮ ಮಕ್ಕಳಿಗೆ ಸಂಸ್ಕಾರ, ಗುರು ಹಿರಿಯರ ಆದರಣೆ, ತಂದೆ ತಾಯಿಯರ ಮಹತ್ವ ತಿಳಿಸಿಕೊಡುವುದು ಇಂದಿನ ಶಾಲೆಗಳ ಕರ್ತವ್ಯವಾಗಿದೆ ಈ ಬಗ್ಗೆ ಮಕ್ಕಳಿಗೆ ಇಂತಹ ವಿಭಿನ್ನವಾದ ಕಾರ್ಯಕ್ರಮಗಳ ಮೂಲಕ ಆಯೋಜಿಸಿದ್ದು ಸಂತಸ ತಂದಿದೆ ಎಂದು ಹೇಳಿದರು.

ಆಡಳಿತಾಧಿಕಾರಿ ವೀರಣ್ಣ ಪರಶಣ್ಣೆ ಮಾತನಾಡಿ, ಮಕ್ಕಳ ಪ್ರಗತಿಯನ್ನು ಅರಿಯಲು ಅವರ ಸರ್ವತೋಮುಖ ಬೆಳವಣಿಗೆಯ ಬಗ್ಗೆ ತಿಳಿಯಲು ಪಾಲಕರು ನಿರಂತರವಾಗಿ ಶಿಕ್ಷಕರು ಮತ್ತು ವಿದ್ಯಾಸಂಸ್ಥೆಯೊಂದಿಗೆ ಸಂಪರ್ಕದಲ್ಲಿರಬೇಕು. ಮಗುವಿನ ಆಸಕ್ತಿ ಮತ್ತು ಚಟುವಟಿಕೆಗಳ ಬಗ್ಗೆ ಅರಿತು ಸಕಾರಾತ್ಮಕವಾಗಿ ಸ್ಪಂದಿಸಬೇಕು ಎಂದು ಹೇಳಿದರು.

ಆಗಮಿಸಿದ ಪಾಲಕರಲ್ಲಿ ತಾಯಂದಿರು ಮಾತನಾಡಿ ಇಂತಹ ವಿಶೇಷ ಕಾರ್ಯಕ್ರಮಗಳನ್ನು ಶಾಲೆಯಲ್ಲಿ ನಡೆಸುವುದು ಬಹಳ ವಿಶೇಷವಾಗಿದೆ ಈ ನಿಮಿತ್ತದಿಂದ ತಾಯಂದಿರು ಶಾಲೆಗೆ ಆಗಮಿಸಿ ಮಕ್ಕಳಿಗೆ ಕೈ ತುತ್ತು ತಿನ್ನಿಸಿ ಅವರ ಅಭಿವೃದ್ಧಿಯ ಬಗ್ಗೆ ವಿಚಾರಿಸಬಹುದು ಮತ್ತು ಇಂತಹ ಕಾರ್ಯಕ್ರಮಗಳ ಮೂಲಕ ಮಕ್ಕಳಲ್ಲಿ ಸಂಸ್ಕಾರ ಬೆಳೆಯುತ್ತದೆ ಎಂದು ಸಂತಸ ಪಟ್ಟರು.

ಮಕ್ಕಳಿಗೆ ಕೈ ತುತ್ತು ತಿನಿಸಿದ ನಂತರ ಆಗಮಿಸಿದ ಎಲ್ಲ ತಾಯಂದಿರಿಗೆ ವಿಶೇಷವಾದ ಆಟೋಟ ಸ್ಪರ್ಧೆಗಳನ್ನು ಏರ್ಪಡಿಸಿ ಅದರಲ್ಲಿ ಗೆದ್ದವರಿಗೆ ಬಹುಮಾನ ನೀಡಲಾಯಿತು. ಎಲ್ ಕೆ ಜಿ ಯಿಂದ ಎರಡನೇ ತರಗತಿಯ ಮಕ್ಕಳು ಅಮ್ಮಂದಿರ ಕುರಿತ ರೂಪಕ, ನೃತ್ಯಗಳನ್ನು ಪ್ರದರ್ಶಿಸಿ ಎಲ್ಲರ ಮೆಚ್ಚುಗೆಗೆ ಪಾತ್ರರಾದರು.

ಸಂಸ್ಥೆಯ ಕಾರ್ಯದರ್ಶಿ ಲಕ್ಷ್ಮಿ ಮುದ್ದಾ, ಮುಖ್ಯಗುರು ಕನ್ಯಾಕುಮಾರಿ ಯಾಲಾ, ಸುಷ್ಮಿತಾ ಸಹಾನೆ ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಸಹ ಶಿಕ್ಷಕಿಯರಾದ ಶಿಲ್ಪಾ ಸ್ವಾಗತಿಸಿದರು, ಜ್ಯೋತಿ ಕ್ಯಾಸಾ ನಿರೂಪಿಸಿದರು. ಪ್ರಿಯದರ್ಶಿನಿ ಬಾಲೂರಕರ, ಸಂಗೀತಾ, ಶಾಂತಮ್ಮ ಸಿರಗಾಪೂರೆ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿಗೆ ಪಕ್ಷಾತೀತ ಪ್ರಯತ್ನ : ಸಚಿವ ಮಂಕಾಳ ವೈದ್ಯ.

• **ಮಲ್ಲಮ್ಮ ನುಡಿ ವಾರ್ತೆ ಕಾರವಾರ:**



ರಾಜ್ಯದ ಕರಾವಳಿಯಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಜ.10 ರಂದು ಮಂಗಳೂರಿನಲ್ಲಿ ಉಪಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಸಭೆಯಲ್ಲಿ 3 ಜಿಲ್ಲೆಗಳು ಎಲ್ಲಾ ಶಾಸಕರು, ಸಂಸದರು ಸೇರಿದಂತೆ ಎಲ್ಲಾ ಜನಪ್ರತಿನಿಧಿಗಳು,ಉದ್ದಿಮೆದಾರರು ಭಾಗವಹಿಸಿ,ಪಕ್ಷಾತೀತವಾಗಿ ಕರಾವಳಿ ಜಿಲ್ಲೆಗಳಲ್ಲಿ ಪ್ರವಾಸೋದ್ಯಮದ ಅಭಿವೃದ್ಧಿಗೆ ಚರ್ಚಿಸಲಾಗುವುದು ಎಂದು ಮೀನುಗಾರಿಕೆ,ಬಂದರು ಮತ್ತು ಒಳನಾಡಿ ಜಲಸಾರಿಗೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ಎಸ್ ವೈದ್ಯ ತಿಳಿಸಿದರು.ಅವರು ಬುಧವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಕರಾವಳಿಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿ ಕುರಿತಂತೆ ಪ್ರವಾಸಿ ಕ್ಷೇತ್ರದ ಪರಿಣಿತರು,ಸಾರ್ವಜನಿಕರು ತಮ್ಮ ಸಲಹೆ, ಯೋಜನೆಗಳು ಮತ್ತು ಸೂಚನೆಗಳನ್ನು ನೀಡುವಂತೆ ಸಚಿವರು ತಿಳಿಸಿದರು. ಕರ್ನಾಟಕ ರಾಜ್ಯ ಮಾರ್ಕೆಟಿಂಗ್ ಕಮ್ಯೂನಿಕೇಷನ್ ಮತ್ತು ಅಡ್ವರ್ಟೈಸಿಂಗ್ ಲಿಮಿಟೆಡ್ ಅಧ್ಯಕ್ಷ ಹಾಗೂ ಶಾಸಕ ಸತೀಶ್ ಸೈಲ್ ಮಾತನಾಡಿ, ಕರಾವಳಿ ಭಾಗದಲ್ಲಿ ಸಿ.ಆರ್.ಝಡ್ ನಿಯಮಗಳಲ್ಲಿ ಸಡಿಲಿಕೆ,ಬಂಡವಾಳ ಹೂಡಿಕೆದಾರರಿಗೆ ತೆರಿಗೆ ಮತ್ತು ವಿದ್ಯುತ್ ರಿಯಾಯತಿ ಸೇರಿದಂತೆ ಅಗತ್ಯ ಮೂಲ ಸೌಕರ್ಯಗಳನ್ನು ಒದಗಿಸಿದಲ್ಲಿ ಹೆಚ್ಚಿನ ಹೂಡಿಕೆದಾರರು ಆಗಮಿಸಲಿದ್ದಾರೆ ಹಾಗೂ ಸಿಂಗಲ್ ವಿಂಡೋ ಸಿಸ್ಟಂ ಮೂಲಕ ಅವರಿಗೆ ಅಗತ್ಯ ಅನುಮತಿಗಳನ್ನು ಶೀಘ್ರದಲ್ಲಿ ನೀಡುವಂತಾಗಬೇಕು ಎಂದರು.

ಶಾಸಕ ಭೀಮಣ್ಣ ನಾಯ್ಕ ಮಾತನಾಡಿ, ಮಲೆನಾಡು ಭಾಗದಲ್ಲಿನ ಜಲಪಾತಗಳ ವೀಕ್ಷಣೆಗೆ ಮುಕ್ತ ಅವಕಾಶ, ರಸ್ತೆಗಳ ದುರಸ್ತಿ ಮತ್ತು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಬೇಕು ಎಂದರು. ಪ್ರವಾಸಿ ಸ್ಥಳಗಳಲ್ಲಿ ಸೂಕ್ತ ಪಾರ್ಕಿಂಗ್ ವ್ಯವಸ್ಥೆ,ಹೋಟೆಲ್ ಗಳು,ಮುಖ್ಯ ಸ್ಥಳಗಳಲ್ಲಿ ಧ್ವನಿ ಮತ್ತು ಬೆಳಕು ಪ್ರದರ್ಶನ ವ್ಯವಸ್ಥೆ,ಕುಟುಂಬ ಸಮೇತ ಪ್ರವಾಸಕ್ಕೆ ಬಂದು ಆನಂದಿಸಲು ಅಗತ್ಯವಿರುವ ಸೌಲಭ್ಯಗಳನ್ನು ಒದಗಿಸಬೇಕು, ಹೋಂ ಸ್ಟೇ ಗಳಿಗೆ ಅಗತ್ಯ ಅನುಮತಿಯನ್ನು ನೀಡಬೇಕು, ಜಿಲ್ಲೆಯಲ್ಲಿ ವಿವಿಧ ರೀತಿಯ 15 ಬಗೆಯ ಟೂರಿಸಂ ಸರ್ಕಿಟ್‌ಗಳಿದ್ದು ಅವುಗಳನ್ನು ಅಭಿವೃದ್ಧಿಪಡಿಸಬೇಕು ಎಂದು ಸಭೆಯಲ್ಲಿ ಹಾಜರಿದ್ದ ಪ್ರವಾಸ ಕ್ಷೇತ್ರದ ಪರಿಣಿತರು ತಿಳಿಸಿದರು.

ಸಭೆಯಲ್ಲಿ ವಿಧಾನ ಪರಿಷತ್ ಶಾಸಕ ಗಣಪತಿ ಉಳ್ವೇಕರ್, ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ, ಜಿ.ಪಂ. ಸಿಇಓ ಡಾ.ದಿಲೀಷ್ ಶಶಿ, ಎಸ್ಪಿ ದೀಪನ್ ಎಂ.ಎನ್, ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ, ಉಪ ವಿಭಾಗಾಧಿಕಾರಿ ಶ್ರವಣ ಕುಮಾರ್, ತರಬೇತಿ ನಿರತ ಪ್ರೊಬೇಷನರಿ ಅಧಿಕಾರಿ ಝೂಪಿಶಾನ್ ಹಕ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಪ್ರವಾಸಿ ಕ್ಷೇತ್ರಗಳ ಪರಿಣಿತರು ಮತ್ತಿತರರು ಹಾಜರಿದ್ದರು.



ಹುಮನಾಬಾದ: ಪ್ರತಿ ವರ್ಷ ಹೊಸ ವರ್ಷದಲ್ಲಿ ತಾಲ್ಲೂಕಿನ ಹುಡಗಿ ಗ್ರಾಮದ ಬಸವ ತೀರ್ಥ ವಿದ್ಯಾಪೀಠ ಪ್ರೌಢ ಶಾಲೆಯಲ್ಲಿ ವಿಜ್ಞಾನ ವಸ್ತು ಪ್ರದರ್ಶನ ನಿಮಿತ್ತ ವಿದ್ಯಾರ್ಥಿಗಳು ವೈಜ್ಞಾನಿಕ ಪ್ರಯೋಗಗಳನ್ನು ಪ್ರದರ್ಶಿಸಿದರು. ಈ ಸಂದರ್ಭದಲ್ಲಿ ಬಸವ ತೀರ್ಥ ವಿದ್ಯಾಪೀಠ ಸಂಸ್ಥೆಯ ಶಿಕ್ಷಕ ಮೋಹನಸಿಂಗ್ ರಾಜಪುತ್, ಶಾಲೆಯ ಮುಖ್ಯ ಗುರುಗಳಾದ ಶ್ರೀಮತಿ ಗೀತಾ. ಕೆ ಮುಗಳಿ, ಉಮೇಶ್ ಪಾಟೀಲ್, ಸಹ ಶಿಕ್ಷಕರು, ಶಾಲೆಯ ವಿದ್ಯಾರ್ಥಿಗಳು ಇತರರು ಹಾಜರಿದ್ದರು.

(ಮಲ್ಲಮ್ಮ ನುಡಿ ಚಿತ್ರ)

## ಸೇವಾ ವಯೋ ನಿವೃತ್ತಿ ದಿನದಂದು ಆದರ್ಶ ಮೆರೆದ ರಮೇಶ ಘಾಳೆ ಶಿಕ್ಷಕ.

(ವರದಿ.ಡಿ.ಕೆ. ಪ್ರಹ್ಲಾದ)

ಮಲ್ಲಮ್ಮ ನುಡಿ ವಾರ್ತೆ



ಬಸವಕಲ್ಯಾಣ :– ಒಬ್ಬ ಶಿಕ್ಷಕ ಸಮಾಜದಲ್ಲಿ ಹೇಗಿರಬೇಕು? ಸಮಾಜದಲ್ಲಿ ನಮ್ಮ ಮಕ್ಕಳು ಹೇಗೆ? ಜೀವನವನ್ನು ಸಾಗಿಸಬೇಕು? ಎಂದು ದಾರಿ ತೋರುವವನೇ ಆದರ್ಶ ಶಿಕ್ಷಕ ಎಂದು ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಸಿದ್ಧವೀರಯ್ಯ ರುದ್ನೂರ ಹೇಳಿದರು.

ಹುಲಸೂರ ತಾಲೂಕಿನ ಮಿರಖಲ್ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ನಡೆದ ರಮೇಶ ಘಾಳೆ ರವರ ಸೇವಾ ವಯೋ ನಿವೃತ್ತಿ ನಿಮಿತ್ಯ ಹಮ್ಮಿಕೊಂಡಿರುವ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದ ಅವರು, ಮಕ್ಕಳಿಗೆ ಆಟ, ಪಾಠದ ಜೊತೆಗೆ ಉತ್ತಮ ಸಂಸ್ಕಾರ ಮುಡಿಸುವುದು ಅವಶ್ಯಕತೆ ಇದೆ. ಇಂದು ಊರಿನ ಜನರ ಸಹಭಾಗಿತ್ವ ನೋಡಿದ್ರೆ ನಮಗೆ ಅರ್ಥವಾಗುತ್ತದೆ ರಮೇಶ ಘಾಳೆ ಸರ್ ರವರು ಎಷ್ಟು ಪ್ರಮಾಣಿಕತೆಯಿಂದ ಸೇವೆ ಸಲ್ಲಿಸಿ, ಆಟ, ಪಾಠದ ಜೊತೆಗೆ ಎಷ್ಟು ಉತ್ತಮ ಸಂಸ್ಕಾರ ಕಲಿಸಿದ್ದಾರೆ ಇಂದು ನಮಗೆಲ್ಲಾ ತೋರುತ್ತಿದೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ನಾಗರಾಜ ಹಾವಣ್ಣಾ ಮಾತನಾಡಿ ರಮೇಶ ಘಾಳೆ ಯವರು ನಮ್ಮ ಸರ್ಕಾರಿ ನೌಕರರ ಕುಟುಂಬದ ಆಸ್ತಿ. ಅವರು ಯಾವ ಊರಲ್ಲಿ ಸಹ ಶಿಕ್ಷಕರಾಗಿ ಸೇವೆ ಸಲ್ಲಿಸಿದ್ದಾರೋ ಅಲ್ಲಿ ತಮ್ಮ ಗುರುತನ್ನು ಕಾಣುವಂತೆ ಸೇವೆ ಸಲ್ಲಿಸಲಿದ್ದಾರೆ. ಇಲ್ಲಿಯೂ ಕೂಡ ಅವರು ಕನ್ನಡ ಭಾಷಾ ಬೆಳವಣಿಗೆಗೆ ತಮ್ಮ ಅಳಿಲು ಸೇವೆ ಸಲ್ಲಿಸಿದ್ದಾರೆ. ಈ ಶಾಲೆಯಲ್ಲಿ ವ್ಯಾಸಂಗ ಮಾಡುವ 150 ಮಕ್ಕಳಿಗೆ ತಮ್ಮ ಸ್ವಂತ ಹಣದಿಂದ 150 ಶಾಲಾ ಬ್ಯಾಗ್ ನ್ನು ವಿತರಣೆ ಮಾಡಿ ಇಂದು ಆದರ್ಶ ಮೆರೆದಿದ್ದಾರೆ. ಇಂದು ನಿವೃತ್ತಿ ಹೊಂದಿದ್ದರು ಈ ಶೈಕ್ಷಣಿಕ ವರ್ಷದ ಮುಕ್ತಾಯದವರೆಗೆ ನಾನು ಕನ್ನಡ ಭಾಷೆ ಕಲಿಸಲು ಪ್ರತಿನಿತ್ಯ ಶಾಲೆಗೆ ಬರುವೇ ಎಂದು ತಿಳಿಸಿರುವುದು ಅವರಿಗಿರುವ ಮಕ್ಕಳ ಶಿಕ್ಷಣದ ಕಾಳಜಿ ಎದ್ದು ತೋರುತ್ತಿದೆ. ಹಾಗೂ ಈ ಶಿಕ್ಷಕರು ನಮಗೆಲ್ಲರಿಗೂ ಮಾದರಿಯಾಗುವಂತೆ ಕಾರ್ಯ ಮಾಡಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಪಂ ಅಧ್ಯಕ್ಷೆ ಸುವರ್ಣ ಮೇತ್ರೆ, ಎಸ್ಡಿಎಂಸಿ ಅಧ್ಯಕ್ಷೆ ಪೂಜಾ ಮಾಳಿ, ಬಸವಕಲ್ಯಾಣ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ಸಂತೋಷ ಅಕ್ಕಣ, ಶಿಕ್ಷಣ ಸಂಯೋಜಕರಾದ ರಾಜಕುಮಾರ ಸಾಲಿ, ಶಿವರಾಜ ಕನಕಟ್ಟೆ, ರವಿಂದ್ರ ಖಂಡಾಳೆ, ಸಿಆರ್ಪಿ ಶಮಾ ಬಿ, ಡಾ.ಧರ್ಮೇಂದ್ರ ಭೋಸ್ಲೆ, ವೆಂಕಟ ಕುಂಬಾರ, ಸಂತೋಷ ಕಾಂಬ್ಳೆ, ಶೆಂಕ್ರಯ್ಯಾ ಮಠಪತಿ ಸರ್ಕಾರಿ ನೌಕರರ ಸಂಘದ ಕಾರ್ಯದರ್ಶಿ ಶಿವರಾಜ ಮಾಶೆಟ್ಟಿ, ಹುಲಸೂರ ಮತ್ತು ಬಸವಕಲ್ಯಾಣ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿಗಳಾದ ಹರಿನಾಥ ಪಾಟೀಲ, ಲಕ್ಷ್ಮಣ ಹೆಂಬಾಡೆ, ಸರ್ಕಾರಿ ನೌಕರರ ರಾಜ್ಯ ಪರಿಷತ್ ಸದಸ್ಯ ಭೀಮಾಶಂಕರ ಆದೆಪ್ಪ, ವರ್ಷಾ ಪಂಚಾಳ ರಾಜಮತಿ ಕೊರಾಳೆ, ರೋಹಿದಾಸ್ ಮಾಲೆ, ಶರಣಬಸಪ್ಪ ಬಿರಾದಾರ, ವಿರೇಂದ್ರ ರಡ್ಡಿ, ಕಾಶಿನಾಥ್ ಹೋಳ್ಕಡೆ, ಶಾಲಾ ಮುಖ್ಯಗುರುಗಳು ಹಾಗೂ ಸಿಬ್ಬಂದಿ ವರ್ಗದವರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಆಸ್ಪತ್ರೆಯ ನಿರ್ಲಕ್ಷ್ಯದಿಂದ ಯುವಕ ಸಾವು

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು/ಮಾನವಿ:**



**ವೈದ್ಯ–ಸಿಬ್ಬಂದಿ ವಿರುದ್ಧ ಕ್ರಮಕ್ಕೆ ಕುಟುಂಬದ ಆಗ್ರಹ**

ಮಾನವಿ ಪಟ್ಟಣದ ಖಾಸಗಿ ಶ್ರೀ ಲಕ್ಷ್ಮೀ ಮಲ್ಟಿಸ್ಪೆಷಲಿಟಿ ಆಸ್ಪತ್ರೆಯ ನಿರ್ಲಕ್ಷ್ಯ ಚಿಕಿತ್ಸೆಯಿಂದ ಯುವಕನೊಬ್ಬನ ಸಾವು ಸಂಭವಿಸಿದೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಬಾಗಲವಾಡ ಗ್ರಾಮದ ನಿವಾಸಿ ಅನ್ವರ ಸಾಬ (34) ಅವರ ಸಾವು ಆಸ್ಪತ್ರೆಯ ಅವ್ಯವಸ್ಥೆ ಹಾಗೂ ವೈದ್ಯರ ವಿಳಂಬದಿಂದ ಸಂಭವಿಸಿದೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ.

ಈ ಕುರಿತು ಇಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿದ ಮೃತನ ಸಹೋದರ ಜಿಲಾನಿ ತಂದೆ ನಬಿ ಸಾಬ ಅವರು, ಉಸಿರಾಟದ ತೊಂದರೆಯಿಂದ ಜೀವಂತವಾಗಿಯೇ ಆಸ್ಪತ್ರೆಗೆ ದಾಖಲಾಗಿದ್ದ ಅನ್ವರ ಸಾಬರಿಗೆ ನುರಿತ ವೈದ್ಯರ ಬದಲು ನರ್ಸರು ಚಿಕಿತ್ಸೆ ನೀಡಿದ್ದು, ವೈದ್ಯರನ್ನು ಕರೆಸಲು ಮನವಿ ಮಾಡಿದರೂ ನಿರ್ಲಕ್ಷ್ಯ ತೋರಲಾಗಿದೆ ಎಂದು ಹೇಳಿದರು.

ಚಿಕಿತ್ಸೆ ವೇಳೆ ಆರೋಗ್ಯ ಸ್ಥಿತಿ ಗಂಭೀರವಾದರೂ ವೈದ್ಯರು ಸಮಯಕ್ಕೆ ಸರಿಯಾಗಿ ಹಾಜರಾಗದೆ, ಕೆಲವೇ ನಿಮಿಷಗಳಲ್ಲಿ ಅನ್ವರ ಸಾಬ ಮೃತಪಟ್ಟಿದ್ದಾರೆ ಎಂದು ತಿಳಿಸಲಾಗಿದೆ. ಬಳಿಕ ಯಾವುದೇ ಮರಣ ದಾಖಲೆ ನೀಡದೇ ಮೃತದೇಹವನ್ನು ಒತ್ತಡದ ಮೂಲಕ ಆಸ್ಪತ್ರೆಯಿಂದ ಹೊರಹಾಕಲಾಗಿದೆ ಎಂದು ದೂರಿದರು.

ನಂತರ ಆಸ್ಪತ್ರೆಯಿಂದ ಪಡೆದ ಮರಣ ವರದಿಯಲ್ಲಿ "ಃಡಿಂಣಾಙಣ ಆಜಚಿಜ" ಎಂದು ಉಲ್ಲೇಖಿಸಿರುವುದು ಅನುಮಾನಕ್ಕೆ ಕಾರಣವಾಗಿದ್ದು, ಒಳರೋಗಿಯಾಗಿ ಚಿಕಿತ್ಸೆ ಪಡೆದ ದಾಖಲೆಗಳು ಹಾಗೂ ಸಿಸಿ ಕ್ಯಾಮೆರಾ ದೃಶ್ಯಾವಳಿಗಳು ಇರುವುದಾಗಿ ಕುಟುಂಬಸ್ಥರು ಹೇಳಿದ್ದಾರೆ. ದೂರು ವಿಚಾರಿಸಲು ಹೋದಾಗ ವೈದ್ಯರಿಂದ ಅವಾಚ್ಯ ಶಬ್ದ ಬಳಕೆ ಹಾಗೂ ಜೀವ ಬೆದರಿಕೆ ಹಾಕಲಾಗಿದೆ ಎಂದು ಆರೋಪಿಸಿದ ಜಿಲಾನಿ, ಮಾನವಿ ಪೊಲೀಸ್ ಠಾಣೆಯಲ್ಲಿ ದೂರು ಸ್ವೀಕರಿಸದಿರುವುದಕ್ಕೂ ಆಕ್ರೋಶ ವ್ಯಕ್ತಪಡಿಸಿದರು. ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಗಮನಕ್ಕೆ ತಂದರೂ ಆರೋಗ್ಯ ಇಲಾಖೆ ವರದಿ ನೀಡದ ಕಾರಣ ಪ್ರಕರಣ ದಾಖಲಿಸಲು ವಿಳಂಬವಾಗುತ್ತಿದೆ ಎಂದು ದೂರಿದರು. ಈ ಸಾವಿನ ಹಿಂದೆ ದೊಡ್ಡ ಹುನ್ನಾರ ಹಾಗೂ ಮೋಸ ನಡೆದಿರುವ ಶಂಕೆ ವ್ಯಕ್ತವಾಗಿದ್ದು, ಖಾಸಗಿ ಆಸ್ಪತ್ರೆಯ ವೈದ್ಯರು, ನರ್ಸರು ಹಾಗೂ ಸಿಬ್ಬಂದಿಗಳ ವಿರುದ್ಧ ತಕ್ಷಣ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕೆಂದು ಕುಟುಂಬಸ್ಥರು ಒತ್ತಾಯಿಸಿದ್ದಾರೆ.

## ಹೊಸ ವರ್ಷಾಚರಣೆಗೆ ವಿದೇಶಿಗರ ಭಜನೆ : ದೇಶಿಯರ ಮೋಜು ಮಸ್ತಿ

**ಮಲ್ಲಮ್ಮ ನುಡಿ ವಾರ್ತೆ ಗೋಕರ್ಣ:**



ಗೋಕರ್ಣ ಭಾಗದಲ್ಲಿ ವಿವಿಧ ಭಾಗಗಳಿಂದ ಪ್ರವಾಸಿಗರು ಆಗಮಿಸಿ ಮೋಜು, ಮಸ್ತಿಗಳನ್ನು ಮಾಡುತ್ತಿದ್ದಾರೆ. ಅದೇ ವಿದೇಶಿಗರು ಭಾರತೀಯ ಸಂಪ್ರದಾಯ ಮತ್ತು ನಂಬಿಕೆಗೆ ಬದ್ಧರಾಗಿ ವಾದ್ಯ ನುಡಿಸುತ್ತ ಭಜನೆ ಮಾಡುತ್ತಿರುವುದು ನಿಜಕ್ಕೂ ಖುಷಿ ಎನಿಸಿತು. ಇಂತಹ ಮನಸ್ಥಿತಿ ನಮ್ಮ ಯುವ ಜನಾಂಗಕ್ಕೆ ಬರಬೇಕಾಗಿದೆ.

**ಶ್ರೀಧರ ಎಸ್.ಆರ್.**
**ಪೊಲೀಸ್ ನಿರೀಕ್ಷಕರು, ಗೋಕರ್ಣ**

ಹೊಸವರ್ಷಾಚರಣೆಯ ನಿಮಿತ್ತ ಬುಧವಾರದಿಂದಲೇ ಸಾಕಷ್ಟು ಜನರು ವಿವಿಧ ವಸತಿಗೃಹದಲ್ಲಿ ಉಳಿದುಕೊಂಡು ಸಿಡಿಮದ್ದು ಹಾಗೂ ಮೋಜು ಮಸ್ತಿಗಳನ್ನು ಮಾಡುತ್ತಿದ್ದರು. ಆದರೆ ವಿದೇಶಿ ಪ್ರವಾಸಿಗರು ದೇವರ ಭಜನೆ ಮಾಡುವ ಮೂಲಕ ಭಾರತೀಯ ಸಂಸ್ಕೃತಿಯನ್ನು ಎತ್ತಿ ಹಿಡಿಯುವ ಕೆಲಸ ಮಾಡುವ ಘಟನೆ ಬುಧವಾರ ರಾತ್ರಿ ರಥಬೀದಿಯಿಂದ ಕಡಲತೀರದವರೆಗೆ ತೆರಳುತ್ತಿರುವುದು ಕಂಡುಬಂದವು.

ಇದರಲ್ಲಿ ಕೆಲವು ವಿದೇಶಿ ಪ್ರವಾಸಿಗರು ರಷ್ಯಾ ಮೂಲದವರಾಗಿದ್ದು, ಇಲ್ಲಿಯ ಧಾರ್ಮಿಕ ಆಚರಣೆ, ಧಾರ್ಮಿಕ ನಂಬಿಕೆಗಳಿಗೆ ಬದ್ಧರಾಗಿ ಅತ್ಯಂತ ಖುಷಿಯಿಂದ ಭಜನೆ ಹಾಡುವುದು ಅದರ ಜತೆಗೆ ವಾದ್ಯವನ್ನು ಕೂಡ ನುಡಿಸುವುದು ಕಂಡುಬಂದವು. ಆದರೆ ಭಾರತೀಯ ಸಂಸ್ಕೃತಿಯ ಈ ನೆಲದಲ್ಲಿಯೇ ಮದ್ಯ, ಧ್ವನಿವರ್ಧಕಗಳನ್ನು ಬಳಸಿ ಡ್ಯಾನ್ಸ್ ಮಾಡುವ ಮೂಲಕ ಹೊಸವರ್ಷವನ್ನು ಆಹ್ವಾನಿಸಿದರು.

## ಪೊಲೀಸ್ ಠಾಣೆಗಳಲ್ಲಿ ಸಿಬ್ಬಂದಿ ಕೊರತೆ: ನರಸಿಂಹಲು ಆಕ್ರೋಶ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**



ರಾಜ್ಯದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಮೇಲೆ ನಡೆಯುವ ದೌರ್ಜನ್ಯ ಪ್ರಕರಣಗಳ ತನಿಖೆಗೆ ಸ್ಥಾಪಿಸಲಾದ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ (ಡಿಸಿಆರ್‌ಇ) ವಿಶೇಷ ಪೊಲೀಸ್ ಠಾಣೆಗಳಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಕೊರತೆಯಿಂದ ಪರಿಣಾಮಕಾರಿ ತನಿಖೆ ನಡೆಯುತ್ತಿಲ್ಲ ಎಂದು ದಲಿತ ಸಂಘಟನೆಗಳು ಆರೋಪಿಸಿವೆ.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಹಾಗೂ ಎಸ್.ಸಿ & ಎಸ್.ಟಿ ದೌರ್ಜನ್ಯ ನಿಯಂತ್ರಣ ಸಮಿತಿ ಸದಸ್ಯರಾದ ಎಸ್. ನರಸಿಂಹಲು, 14 ಏಪ್ರಿಲ್ 2024 ರಂದು ರಾಜ್ಯಾದ್ಯಂತ ಜಿಲ್ಲೆಗೊಂದರಂತೆ 33 ಡಿಸಿಆರ್‌ಇ ಪೊಲೀಸ್ ಠಾಣೆಗಳನ್ನು ಸರ್ಕಾರ ಸ್ಥಾಪಿಸಿದ್ದರೂ, ಪ್ರಸ್ತುತ ಕೇವಲ 12 ಠಾಣೆಗಳಲ್ಲಿ ಮಾತ್ರ ಡಿವೈಎಸ್ಪಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ಎಂದರು.

ಡಿವೈಎಸ್ಪಿ ಮಟ್ಟದ ಅಧಿಕಾರಿಗಳಿಂದ ನಡೆಯಬೇಕಾದ ದೌರ್ಜನ್ಯ ಪ್ರಕರಣಗಳ ತನಿಖೆಗಳನ್ನು ಪಿಎಸ್‌ಐ ಮತ್ತು ಪಿಐಗಳ ಮೂಲಕ ನಡೆಸಲಾಗುತ್ತಿರುವುದರಿಂದ ನ್ಯಾಯಸಮ್ಮತ ಮತ್ತು ಸಮಯಬದ್ಧ ತನಿಖೆ ಸಾಧ್ಯವಾಗುತ್ತಿಲ್ಲ. ಇದರಿಂದ ಆರೋಪಿಗಳ ಬಂಧನ, ಅಂತಿಮ ವರದಿ ಸಲ್ಲಿಕೆ ಸೇರಿದಂತೆ ಕಾನೂನು ಪ್ರಕ್ರಿಯೆಗಳು ವಿಳಂಬವಾಗುತ್ತಿವೆ ಎಂದು ಅವರು ಆರೋಪಿಸಿದರು.

ಇದಕ್ಕು ಜೊತೆಗೆ ಡಿಸಿಆರ್‌ಇ ಠಾಣೆಗಳಿಗೆ ಸ್ವಂತ ಕಟ್ಟಡ, ಅಗತ್ಯ ಪೀಠೋಪಕರಣಗಳು ಹಾಗೂ ಮೂಲಭೂತ ಸೌಲಭ್ಯಗಳ ಕೊರತೆ ಇರುವುದರಿಂದ ಈ ವಿಶೇಷ ಠಾಣೆಗಳ ಸ್ಥಾಪನೆಯ ಉದ್ದೇಶವೇ ಸಂಪೂರ್ಣವಾಗಿ ಈಡೇರಿಲ್ಲ ಎಂದು ತಿಳಿಸಿದರು.

ಆದ್ದರಿಂದ ತಕ್ಷಣವೇ ಎಲ್ಲಾ ಡಿಸಿಆರ್‌ಇ ಪೊಲೀಸ್ ಠಾಣೆಗಳಿಗೆ ಡಿವೈಎಸ್ಪಿ ಸೇರಿದಂತೆ ಅಗತ್ಯ ಸಿಬ್ಬಂದಿಯನ್ನು ನೇಮಕ ಮಾಡಬೇಕು, ಸ್ವಂತ ಕಟ್ಟಡ ಹಾಗೂ ಮೂಲಸೌಕರ್ಯಗಳನ್ನು ಒದಗಿಸಿ 24 ಗಂಟೆ ಕಾರ್ಯನಿರ್ವಹಿಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು. ಇದಕ್ಕೆ ಸರ್ಕಾರ ಸ್ಪಂದಿಸದಿದ್ದಲ್ಲಿ ರಾಜ್ಯಾದ್ಯಂತ ವಿವಿಧ ದಲಿತ ಸಂಘಟನೆಗಳ ನೇತೃತ್ವದಲ್ಲಿ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ ಶ್ರೀನಿವಾಸ್ ರಾಜು, ಎಂ.ಎನ್. ಭೇರಿ, ಹನುಮೇಶ ಆರೋಲಿ, ನಾಗೇಂದ್ರ, ಶಿವಕುಮಾರ್ ಮ್ಯಾಗಲಮನಿ ಸೇರಿದಂತೆ ದಲಿತ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

## ಮಹಾಬಲೇಶ್ವರ ಅರ್ಬನ್ ಬ್ಯಾಂಕ್‌ನಿಂದ ಸನ್ಮಾನ



• **ಮಲ್ಲಮ್ಮ ನುಡಿ ವಾರ್ತೆ ಗೋಕರ್ಣ:**

ಇಲ್ಲಿಯ ಗೋಕರ್ಣ ಮಹಾಬಲೇಶ್ವರ ಅರ್ಬನ್ ಬ್ಯಾಂಕಿನ ಅಧ್ಯಕ್ಷ ಮೋಹನ ನಾಯಕ ದೇವರಬಾವಿ ನಿರ್ದೇಶಕ ರಾಜಗೋಪಾಲ ಅಡಿ ಇವರು ಕೆಡಿಸಿಸಿ ಬ್ಯಾಂಕಿಗೆ ಸ್ಪರ್ಧಿಸಿ ಗೆಲವು ಸಾಧಿಸಿರುವುದಕ್ಕೆ ಬ್ಯಾಂಕಿನ ಆಡಳಿತ ಮಂಡಳಿಯವರು ಮತ್ತು ಸಿಬ್ಬಂದಿಗಳು ಸನ್ಮಾನಿಸಿ ಗೌರವಿಸಿದರು.

ಬ್ಯಾಂಕಿನ ಇತಿಹಾಸದಲ್ಲಿ ಇದುವರೆಗೂ ಕೆಡಿಸಿಸಿ ಬ್ಯಾಂಕಿನಲ್ಲಿ ಯಾರೂ ಆಯ್ಕೆಯಾಗಿರಲಿಲ್ಲ. ಆದರೆ ಈ ಬಾರಿ ಇಬ್ಬರು ಆಯ್ಕೆಯಾಗಿರುವುದಕ್ಕೆ ಆಡಳಿತ ಮಂಡಳಿ ಹಾಗೂ ಸಿಬ್ಬಂದಿಗಳ ಹರ್ಷಕ್ಕೆ ಕಾರಣವಾಗಿದೆ. ನಿರ್ದೇಶಕರಾದ ಅರುಣ ಕವರಿ ಮಾತನಾಡಿ, ನಮ್ಮ ಬ್ಯಾಂಕಿನಿಂದ ಸ್ಪರ್ಧಿಸಿದ ಇಬ್ಬರು ಚುನಾವಣೆಯಲ್ಲಿ ಆಯ್ಕೆಯಾಗಿರುವುದಕ್ಕೆ ತುಂಬಾ ಹೆಮ್ಮೆಯಾಗುತ್ತದೆ ಎಂದರು.

ಉಪಾಧ್ಯಕ್ಷ ವೆಂಕಟ್ರಮಣ ಕವರಿ, ನಿರ್ದೇಶಕರಾದ ಮಂಜುನಾಥ ನಾಯಕ ದೇವರಬಾವಿ, ಶ್ರೀನಿವಾಸ ದೇವಣ್ಣ ನಾಯಕ, ರಾಮು ಕೆಂಚನ್, ರೋಹಿತ್ ನಾಯಕ, ಗಜಾನನ ಆರ್. ನಾಯಕ, ತೇಜಸ್ವಿ ಪಿ. ನಾಯ್ಕ, ಅರುಣಕುಮಾರ ಜಿ. ನಾಯ್ಕ, ತಿಮ್ಮಣ್ಣ ಎಂ. ನಾಯಕ, ನಾಗರತ್ನ ಗಾಂವಕರ, ಸ್ಮಿತಾ ಅಡಿ, ರೀಚರ್ಡ್ ಪಿಂಟೋ, ತಿಮ್ಮಣ್ಣ ಹಳ್ಳೇರ, ಗಜಾನನ ಎನ್. ನಾಯಕ, ಲಕ್ಷ್ಮಣ ಗೌಡ ಉಪಸ್ಥಿತರಿದ್ದರು. ಗೋಕರ್ಣ ಮಹಾಬಲೇಶ್ವರ ಅರ್ಬನ್ ಬ್ಯಾಂಕಿನ ವ್ಯವಸ್ಥಾಪಕ ಆನಂದ ಗಾಂವಕರ ಸ್ವಾಗತಿಸಿದರು. ಮಾದನಗೇರಿ ಶಾಖೆಯ ವ್ಯವಸ್ಥಾಪಕ ಪ್ರತಿಭಾ ಶಾನಭಾಗ ನಿರೂಪಿಸಿದರು. ರೇಷ್ಮಾ ಗೋಕರ್ಣ ವಂದಿಸಿದರು.

# ಜಕಣಾಚಾರಿ ಶಿಲ್ಪಕಲೆಯ ಕೊಡುಗೆ ಮಹತ್ತರ: ಕೆ.ಇ ಚಿದಾನಂದಪ್ಪ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಅಮರಶಿಲ್ಪಿ ಜಕಣಾಚಾರಿ ಶಿಲ್ಪಿ ಕೆತ್ತನೆಯು ರಾಜ್ಯದ ಶ್ರೀಮಂತ ಪರಂಪರೆಯಾಗಿದ್ದು, ಅವರ ಕೊಡುಗೆ ಮಹತ್ತರವಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಹೇಳಿದರು.ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಕಾಳಮ್ಮ ಬೀದಿಯ ಕಾಳಮ್ಮ ಕಮತೇಶ್ವರ ದೇವಸ್ಥಾನ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಕಣಾಚಾರಿಯು ತುಮಕೂರಿನ ಕೈದಾಳ ಎಂಬ ಹಳ್ಳಿಯಲ್ಲಿ ಜನಿಸಿದವರು. ತಮ್ಮ ಜೀವನವನ್ನೇ ಶಿಲ್ಪ ಕಲೆಗಾಗಿ ಮುಡಿಪಾಗಿಟ್ಟಿದ್ದರು. ಅವರ ಕೆತ್ತನೆಯ ಬೇಲೂರಿನ ಚನ್ನಕೇಶವ, ಹಳೇಬೀಡು ದೇವಾಲಯಗಳು ಪ್ರಸಿದ್ಧಿ ಪಡೆದಿವೆ ಎಂದರು.

ಕರ್ನಾಟಕ ರಾಜ್ಯದಲ್ಲಿ ಪ್ರತಿಯೊಂದು ಕಲ್ಲಿನಲ್ಲಿ ಶಿಲ್ಪ ಕೆತ್ತನೆಯು ಜೀವಂತವಾಗಿದೆ. ಪ್ರಸ್ತುತ ಆಧುನಿಕ ಯುಗದಲ್ಲಿ ಶಿಲ್ಪಿಕಲೆ ನಶಿಸಿಹೋಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದ ಅವರು, ಅಮರಶಿಲ್ಪಿ ಜಕಣಾಚಾರಿ ಅವರ ಪರಂಪರೆಯನ್ನು ನಾವು ಉಳಿಸಿ ಬೆಳೆಸಬೇಕಾಗಿದೆ ಎಂದರು.ವಿಶ್ವಕರ್ಮರನ್ನು ವಿಶ್ವರೂಪ, ದಕ್ಷಿಣಾಚಾರ್ಯ, ಜಕಣಾಚಾರ್ಯ, ಸ್ಥಪತಿ ಇನ್ನಿತರ ಹೆಸರುಗಳಿಂದ ಗುರುತಿಸಲಾಗುತ್ತಿದೆ. ಅವರ ಶಿಲ್ಪಕಲಾ ಕುಶಲತೆ ಇಂದು ಜಗತ್ತಿನ ಎಲ್ಲೆಡೆ ಪಸರಿಸಿದೆ. ವಿಶ್ವಕರ್ಮ ಸಮಾಜದವರು ಸಾಮಾಜಿಕ, ಆರ್ಥಿಕ, ರಾಜಕೀಯವಾಗಿ ಸಬಲತೆ ಸಾಧಿಸಬೇಕು ಎಂದು ಹೇಳಿದರು.

ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ ಅವರು ಮಾತನಾಡಿ ಬೇಲೂರು, ಹಳೇಬೀಡು ದೇವಾಲಯಗಳ ವಾಸ್ತುಶಿಲ್ಪವು ಅತ್ಯಂತ ಚಾರಿತ್ರಿಕವಾಗಿವೆ. ಇತಿಹಾಸ ಪ್ರಸಿದ್ಧ ದೇವಾಲಯಗಳು ನಮ್ಮ ದೇಶದ ಸಂಸ್ಕೃತಿ ವೈಭವವನ್ನು ಪ್ರತಿಬಿಂಬಿಸುತ್ತವೆ. ಅಂತಹ ವಾಸ್ತುಶಿಲ್ಪ ಕಲೆ ನಮ್ಮ ದೇಶದಲ್ಲಿ ಇರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಹೇಳಿದರು.ಹೊಸಪೇಟೆಯ ಶ್ರೀ ಅಕ್ಷಯ ಪದವಿಪೂರ್ವ ಹಾಗೂ ಪದವಿ ಮಹಾವಿದ್ಯಾಲಯದ ಕನ್ನಡ ಪ್ರಾಧ್ಯಾಪಕ ವೆಂಕಟೇಶ್ ಬಡಿಗೇರ್ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಅಮರಶಿಲ್ಪಿ ಜಕಣಾಚಾರಿ ಅವರು ಕರ್ನಾಟಕ ಸಾಹಿತ್ಯ ಶಿಲ್ಪಕಲಾ ಜಗತ್ತಿನ ಆಸ್ಮಿತೆಯನ್ನು ಎತ್ತಿ ಹಿಡಿದಿದ್ದಾರೆ ಎಂದು ವರ್ಣಿಸಿದರು.

ಹೊಯ್ಸಳರು ಮತ್ತು ಚಾಲುಕ್ಯರ ಕಾಲದಲ್ಲಿ ಸುಂದರ ವಾಸ್ತುಶಿಲ್ಪಕ್ಕೆ ಪುರಾಣ ಪ್ರಸಿದ್ಧಿ ಪಡೆದ ಬೇಲೂರು, ಹಳೇಬೀಡು, ಸೋಮನಾಥಪುರ ದೇವಾಲಯಗಳು ಶಿಲ್ಪಾ ಕಲೆಗೆ ಜೀವ ತುಂಬುವ ಮೂಲಕ ಜಕಣಾಚಾರಿ ದೇವ ಶಿಲ್ಪಿಯಾಗಿದ್ದಾರೆ ಎಂದು ಸ್ಮರಿಸಿದರು.ಕಾರ್ಯಕ್ರಮಕ್ಕೂ ಮುನ್ನ ಸಂವಿಧಾನ ಪೀಠಿಕೆ ಭೋದಿಸಲಾಯಿತು. ಕಾರ್ಯಕ್ರಮದಲ್ಲಿ ಸಮಾಜದ ಐದು ಜನ ಹಿರಿಯ ವಿಶ್ವಕರ್ಮ ಕಲಾವಿದರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಬಳ್ಳಾರಿ ಜಿಲ್ಲಾ ವಿಶ್ವಕರ್ಮ ವಿಕಾಸ ವೇದಿಕೆಯ ಅಧ್ಯಕ್ಷ ಚಂದ್ರಕಾಂತ್ ಸೋನರ್, ರಾಜಸ್ತಾನಿ ವಿಶ್ವಕರ್ಮ ಅಧ್ಯಕ್ಷ ಮೇಘರಾಜ್, ಮಹಾನಗರ ಪಾಲಿಕೆ ಸದಸ್ಯೆ ಈರಮ್ಮ ಸುರೇಂದ್ರ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ತ್ರಿವೇಣಿ ಪತ್ತಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಸಮಾಜ ಮುಖಂಡರು, ಸಾರ್ವಜನಿಕರು ಉಪಸ್ಥಿತರಿದ್ದರು.

# ಗ್ರಾಮಗಳ ಸ್ವಚ್ಛತೆ ಆದ್ಯತೆಯಾಗಲಿ: ಶಿವಪೂರೆ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಗ್ರಾಮಗಳಲ್ಲಿ ಸ್ವಚ್ಛತೆ ಕಾಪಾಡಲು ಘನ ತಾಜ್ಯ ನಿರ್ವಹಣಾ ಘಟಕದ ವಾಹನ ಚಾಲಕರು ಮತ್ತು ಸಹಾಯಕ ಮಹಿಳಾ ಸದಸ್ಯರ ಪಾತ್ರ ಪ್ರಮುಖವಾಗಿದ್ದು, ಸ್ವಚ್ಛತಾ ಕಾರ್ಯ ಆದ್ಯತೆಯಾಗಬೇಕು ಎಂದು ಜಿಲ್ಲಾ ಪಂಚಾಯತ್ ನ ಉಪಕಾರ್ಯದರ್ಶಿ ಶಶಿಕಾಂತ ಶಿವಪೂರೆ ಅವರು ಹೇಳಿದರು.

ಮಹಾತ್ಮಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ ಬೆಂಗಳೂರು ಮತ್ತು ಗ್ರಾಮೀಣ ಅಭಿವೃದ್ಧಿ ಪಂಚಾಯತ್ ರಾಜ್ ಇಲಾಖೆ, ಸಂಜೀವಿನಿ ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ ಬೆಂಗಳೂರು, ಕಿತ್ತೂರಾಣಿ ಚೆನ್ನಮ್ಮ ಮಹಿಳಾ ಸ್ವಸಹಾಯ ಸಂಘ ಹರಪನಹಳ್ಳಿ ಹಾಗೂ ಜಿಲ್ಲಾ ಪಂಚಾಯತ್ ಇವರ ಸಹಯೋಗದಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಘನ ತಾಜ್ಯ ನಿರ್ವಹಣಾ ಘಟಕದಲ್ಲಿನ ವಾಹನ ಚಾಲಕರಿಗೆ ಹಾಗೂ ಸಹಾಯಕರಾದ ಮಹಿಳಾ ಸದಸ್ಯರಿಗೆ ಜಿಲ್ಲಾ ಸಂಪನ್ಮೂಲ ತರಬೇತಿ ಕೇಂದ್ರದಲ್ಲಿ ಗುರುವಾರ ಆಯೋಜಿಸಿದ್ದ ಮೂರು ದಿನದ ವಸತಿ ಸಹಿತ ಪುನಶ್ಚೇತನ ತರಬೇತಿ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು.ವೈಜ್ಞಾನಿಕ ಘನತಾಜ್ಯ ನಿರ್ವಹಣೆ ಮಾಡುವುದರ ಬಗ್ಗೆ ಅರಿವು ಹೊಂದಬೇಕು. ಜೊತೆಗೆ ತೆರಿಗೆ ವಸೂಲಾತಿ ಮಾಡಿ ಹೆಚ್ಚಿನ ಆದಾಯ ಪಡೆಯುವಂತೆ ಸಲಹೆ ನೀಡಿದರು.ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಸಹಾಯಕ ನಿರ್ದೇಶಕ ಬಸವರಾಜ್ ಹಿರೇಮಠ,

ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ರಾಜೇಂದ್ರ, ಜಿಲ್ಲಾ ವ್ಯವಸ್ಥಾಪಕ ವಿಜಯ್ ಕುಮಾರ್ ಪಿ., ಸಂಪನ್ಮೂಲ ವ್ಯಕ್ತಿಗಳಾದ ಗಣೇಶ್, ಬಳ್ಳಾರಿ ಮತ್ತು ಸಂಡೂರು ತಾಲ್ಲೂಕಿನ ತಾಲ್ಲೂಕು ಕಾರ್ಯಕ್ರಮ ವ್ಯವಸ್ಥಾಪಕ ಗಂಗಾಧರ, ಸೋಮಶೇಖರ್.ಕೆ., ಹಾಗೂ ವಲಯ ಮೇಲ್ವಿಚಾರಕ ಗಂಗಾಧರ ಸ್ವಾಮಿ ಸೇರಿದಂತೆ ಜಿಲ್ಲಾ ಪಂಚಾಯತ್ ನ ಸಿಬ್ಬಂದಿ, ಬಳ್ಳಾರಿ ಮತ್ತು ಸಂಡೂರು ತಾಲ್ಲೂಕಿನ ವಾಹನ ಚಾಲಕರು ಹಾಗೂ ಸಹಾಯಕರು ಉಪಸ್ಥಿತರಿದ್ದರು.

# ಕ್ಯಾಲೆಂಡರ್ ಮಾತ್ರವಲ್ಲ ಮನೋಭಾವವೂ ಬದಲಾಗಲಿ

• **ಮಲ್ಲಮ್ಮ ನುಡಿ ವಾರ್ತೆ ಬೀದರ್:**

ಹೊಸ ವರ್ಷಕ್ಕೆ ಕ್ಯಾಲೆಂಡರ್ ಬದಲಾಯಿಸುವುದು ಅಷ್ಟೇ ಅಲ್ಲ; ನಮ್ಮ ಮನೋಭಾವವೂ ಬದಲಾಗಬೇಕು ಎಂದು ಲಿಂಗಾಯತ ಮಹಾಮಠದ ಪ್ರಭುದೇವ ಸ್ವಾಮೀಜಿ ನುಡಿದರು.

ನಗರದ ಬಸವಗಿರಿಯಲ್ಲಿ ಲಿಂಗಾಯತ ಮಹಾ ಮಠದ 2026ನೇ ಸಾಲಿನ ದಿನದರ್ಶಿಕೆ ಬಿಡುಗಡೆ ಮಾಡಿ ಅವರು ಮಾತನಾಡಿದರು.

ಹೊಸ ವರ್ಷವನ್ನು ಸ್ವಾಗತಿಸುತ್ತಿದೆ. ಅಕ್ಕ ಅನ್ನಪೂರ್ಣತಾಯಿ ಅವರು ಹಾಕಿಕೊಟ್ಟ ಸಂಪ್ರದಾಯದಂತೆ 2026ನೇ ವರ್ಷದಲ್ಲಿಯೂ ಬಹುಪಯೋಗಿ ದಿನದರ್ಶಿಕೆಯನ್ನು ಶರಣ ಸಮಾಜಕ್ಕೆ ಸಮರ್ಪಿಸಲಾಗಿದೆ ಎಂದು ಹೇಳಿದರು.

ಹೊಸ ವರ್ಷ ಎಲ್ಲರ ಜೀವನದಲ್ಲಿ ಹೊಸ ಆಶಯ, ಹೊಸ ಕನಸುಗಳನ್ನು ಮೂಡಿಸಲಿ ಎಂದು ಶುಭ ಹಾರೈಸಿದರು.

ಲಿಂಗಾಯತ ಮಹಾ ಮಠದಿಂದ ಮಠಪತಿ ತಿಳಿಸಿದರು.

ಹೊಸ ವರ್ಷದ ದಿನದರ್ಶಿಕೆ ಎಲ್ಲರ ಮನೆ, ಮನೆಗಳ ಗೋಡೆಯನ್ನು ಅಲಂಕರಿಸಲಿ. ಮನೆ ಅಂದ ಹೆಚ್ಚಿಸುವ ಜತೆಗೆ ದಿನ, ದಿನವೂ ಹೊಸತಕ್ಕೆ ಪ್ರೇರಣೆಯಾಗಲಿ. ಹೊಸ ವರ್ಷ ಹೊಸ ಎತ್ತರ, ಹೊಸ ಸಾಧನೆಗೆ ಪ್ರೇರಣೆಯಾಗಲಿ ಎಂದು ಹೇಳಿದರು.

ನಿವೃತ್ತ ಪೊಲೀಸ್ ಅಧಿಕಾರಿ ಮಾರುತಿ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಪ್ರಮುಖರಾದ



ಜೀವನ ಉಜ್ಜೀವನವಾಗುವಂತೆ ನಮ್ಮನ್ನು ನಾವು ಬದಲಿಸಿಕೊಳ್ಳಬೇಕು. ಬಸವಾದಿ ಶರಣರಂತೆ ಜೀವನ ರೂಪಿಸಿಕೊಳ್ಳಬೇಕು. ಹಿಂದಿನ ವರ್ಷದ ಅನುಭವಗಳಿಂದ ಹೊಸ ವರ್ಷಕ್ಕೆ ಹೊಸ ಸಂಕಲ್ಪ ಮಾಡಬೇಕು ಎಂದು ತಿಳಿಸಿದರು.

ಲಿಂಗಾಯತ ಮಹಾ ಮಠವು ದಿನದರ್ಶಿಕೆ ಬಿಡುಗಡೆ ಮಾಡುವ ಮೂಲಕ ವಿಶಿಷ್ಟ, ವರ್ಣರಂಜಿತ ದಿನದರ್ಶಿಕೆಯನ್ನು ಹೊರತರಲಾಗಿದೆ. ದಿನದರ್ಶಿಕೆಯು ಸರ್ಕಾರಿ ರಜೆ, ಪರಿಮಿತ ರಜೆ, ಮಹಾತ್ಮರ ಜಯಂತಿ, ಶರಣರ ಜಯಂತಿ, ವಿಶೇಷ ದಿನಗಳು, ಹುಣ್ಣಿಮೆ, ಅಮಾವಾಸ್ಯೆ ಮಾಹಿತಿಯನ್ನು ಒಳಗೊಂಡಿದೆ. ಬಸವಾದಿ ಶರಣರ ಭಾವಚಿತ್ರಗಳು ದಿನದರ್ಶಿಕೆ ಮೌಲ್ಯ ಹೆಚ್ಚಿಸಿವೆ ಎಂದು ಸಾಹಿತಿ ರಮೇಶ ಮಠಪತಿ ತಿಳಿಸಿದರು.

ಮಾಣಿಕಪ್ಪ ಗೋರನಾಳೆ, ಪ್ರಕಾಶ್ ಮಠಪತಿ, ಸಿ.ಎಸ್. ಗಣಾಚಾರಿ, ಆರ್.ಕೆ. ಪಾಟೀಲ, ಮಲ್ಲಿಕಾರ್ಜುನ ಔರಾದೆ, ಯಾವಗಲ್ ಹುಬ್ಬಳ್ಳಿ, ಸಿದ್ರಾಮ ಬಿರಾದಾರ ಉಪಸ್ಥಿತರಿದ್ದರು.

ಬಸವ ಚಿಕ್ಕಲಿಂಗೆ ಸ್ವಾಗತಿಸಿದರು. ಪರುಷಕಟ್ಟೆಯ ಚನ್ನಬಸವಣ್ಣ ಪ್ರಾರ್ಥನೆ ಗೀತೆ ಹಾಗೂ ವಚನ ಗಾಯನ ನಡೆಸಿಕೊಟ್ಟರು.

# ಸೌಹಾರ್ದ ಸಹಕಾರಿ ದಿನಾಚರಣೆ ಉಪನ್ಯಾಸ ಕಾರ್ಯಕ್ರಮ



• **ಮಲ್ಲಮ್ಮ ನುಡಿ ವಾರ್ತೆ ಬೀದರ್:**

ಸಾಮರ್ಥ್ಯ ಕೇಂದ್ರ, ಕಲ್ಯಾಣ ಪತ್ತಿನ ಸೌಹಾರ್ದ ಸಹಕಾರಿ ನಿ., ಕೆ.ಇ.ಬಿ ರಸ್ತೆ, ನಂದಿ ಕಾಲೋನಿ, ಬೀದರ್‌ನಲ್ಲಿ ಜನವರಿ 1ರಂದು ಸೌಹಾರ್ದ ಸಹಕಾರಿ ದಿನಾಚರಣೆಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು ಸಂಸ್ಥೆಯ ನಿರ್ದೇಶಕರಾದ ಗುರುನಾಥ ಜ್ಯಾಂತಿಕರ್ ಅವರು ಧ್ವಜಾರೋಹಣ ನೆರವೇರಿಸಿದರು.

ನಂತರ ನಡೆದ ಸಭಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸೌಹಾರ್ದ ಸಹಕಾರಿ ಕಾಯ್ದೆಯ ಹುಟ್ಟು, ಬೆಳವಣಿಗೆ, ಧ್ಯೇಯ ಉದ್ದೇಶ ಹಾಗೂ ಆಶಯಗಳ ಕುರಿತು ಸುದೀರ್ಘ ಉಪನ್ಯಾಸ ನೀಡಿ ಸಹಕಾರಿಗಳಲ್ಲಿ ಅರಿವು ಮೂಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ದುರ್ಗಾಮಾತಾ ಸೌಹಾರ್ದ ಸಹಕಾರಿ ನಿ., ಬೀದರ್‌ನ ಅಧ್ಯಕ್ಷರಾದ ಜಗನ್ನಾಥ ಕರಂಜೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಬೀದರ್ ಜಿಲ್ಲಾ ಸೌಹಾರ್ದ ಸಹಕಾರಿ ಒಕ್ಕೂಟದ ನಿರ್ದೇಶಕರಾದ ಸಂಜೀವ್ ಕುಮಾರ್ ಬಿ. ಪಾಟೀಲ್ ಹಾಗೂ ಕ್ರಾಂತಿಕುಮಾರ್ ಕುಲಾಲ್ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಶ್ರೀಕಾಂತಸ್ವಾಮಿ ಸ್ವಾಗತಿಸಿದರು, ಶ್ರೀ ಸಂಜೀವ್ ಕುಮಾರ್ ಸಜ್ಜನ್ ವಂದಿಸಿದರು. ಜಿಲ್ಲಾ ಸೌಹಾರ್ದ ಅಭಿವೃದ್ಧಿ ಅಧಿಕಾರಿಗಳಾದ ಶ್ರೀ ರಾಜೇಶ್ ಕೆ.ಎಂ. ಅವರು ಕಾರ್ಯಕ್ರಮವನ್ನು ನಿರೂಪಿಸಿದರು.

# ಸ್ವಾಮಿ ಕುಟುಂಬ ಕಲೆ ಮತ್ತು ಸಂಗೀತಕ್ಕೆ ಜೀವನ ಮುಡುಪಾಗಿಟ್ಟಿದೆ : ಪಂಪಾಪತಿ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**



ತೊಗಲುಗೊಂಬೆ ಕಲೆಗೆ ತಮ್ಮ ಜೀವನವನ್ನೇ ಮುಡುಪಾಗಿಟ್ಟ ಹೊನ್ನೂರ್ ಸ್ವಾಮಿಯವರ ಕಾರ್ಯ ಶ್ಲಾಘನೀಯ ತಮ್ಮ ಕಲಾತಂಡದ

ಮೂಲಕ ದಶಕಂಠ ರಾವಣ ಪ್ರದರ್ಶನ ಹಮ್ಮಿಕೊಂಡಿರುವುದು ಅತ್ಯಂತ ಸಂತೋಷದ ಸಂಗತಿ ಎಂದು ಲಕ್ಷ್ಮಿಪುರ ಗ್ರಾಮದ ಮುಖಂಡ ಹನುಮಂತ ಸಂತಸವನ್ನು ವ್ಯಕ್ತಪಡಿಸಿದರು.

ಅವರು ನೆರೆಯ ಆಂಧ್ರಪ್ರದೇಶದ ಡಿ.ಹಿರೇಹಾಳ್ ಮಂಡಲದ ಲಕ್ಷ್ಮೀಪುರ ಗ್ರಾಮದಲ್ಲಿ ಶ್ರೀ ಹುಲಿಕುಂಟೆರಾಯ ತೊಗಲುಗೊಂಬೆ ಕಲಾ ತಂಡ (ರಿ) ವತಿಯಿಂದ ಸಂಜೆ ಹುಗ್ಗಿ ಸುಗ್ಗಿ ವೈಭವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಗ್ರಾಮದ ಮುಖಂಡ ಪಂಪಾಪತಿ ಅವರು ಮಾತನಾಡಿ, ಲಕ್ಷ್ಮೀಪುರ ಗ್ರಾಮ ಸಂಗೀತದಲ್ಲಿ ದೇಶಕ್ಕೆ ಹೆಸರು ವಾಸಿಯಾಗಿದೆ. ಅದರಲ್ಲೂ ಹೊನ್ನೂರಸ್ವಾಮಿ ಅವರು ನಮ್ಮ ಗ್ರಾಮದಲ್ಲಿ ತೊಗಲುಗೊಂಬೆ ಪ್ರದರ್ಶನ ನೀಡಿರುವುದು ಅತ್ಯಂತ ಖುಷಿಯ ವಿಚಾರ ಹೀಗೆ ಹೊನ್ನೂರ್ ಸ್ವಾಮಿ ಅವರ ಕುಟುಂಬ ಸಂಗೀತ ಮತ್ತು ಕಲೆಗೆ ತಮ್ಮ ಜೀವನವನ್ನೇ ಮೀಸಲಿಟ್ಟಿದ್ದಾರೆ ಅವರಿಗೆ ದೇವರು ಇನ್ನಷ್ಟು ಯಶಸ್ಸನ್ನು ನೀಡಲಿ ಎಂದು ಶುಭ ಹಾರೈಸಿದರು ಎಂದರು.

ಕಾರ್ಯಕ್ರಮದಲ್ಲಿ ಲಕ್ಷ್ಮಿಪುರ ಗ್ರಾಮದ ಮುಖಂಡರಾದ ಸುಗ್ಲಪ್ಪ, ಸುಗ್ಲಮ್ಮ ಪೂಜಾರಿ ಸುಗ್ಲಪ್ಪ, ಮಾರೆಮ್ಮ ಪೂಜಾರಿ ಹನುಮಂತ, ಅಂಗಡಿ ಸುಗ್ಲಪ್ಪ, ಮಾರೆಣ್ಣ, ಡ್ರೈವರ್ ಹೊನ್ನೂರಸ್ವಾಮಿ, ನಿಂಗಪ್ಪ, ಗಜಂ ಪೆನ್ನಯ್ಯ, ಈಶ್ವರಪ್ಪ, ಸಣ್ಣ ಗಂಗಪ್ಪ, ಪೆನ್ನಯ್ಯ ಸೇರಿದಂತೆ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಹುಲಿಕುಂಟೆರಾಯ ತೊಗಲುಗೊಂಬೆ ಕಲಾ ತಂಡ ಅಧ್ಯಕ್ಷ ಕೆ.ಹೊನ್ನೂರಸ್ವಾಮಿ ಪ್ರಾಸ್ತವಿಕವಾಗಿ ಮಾತನಾಡಿದರು.

ಲಕ್ಷ್ಮೀದೇವಿ ಸ್ವಾಗತಿಸಿದರು, ಕುರುಬರು ಹೊನ್ನೂರಸ್ವಾಮಿ ಕಾರ್ಯಕ್ರಮ ನಿರೂಪಿಸಿದರು, ಬಿ.ರಾಘವೇಂದ್ರ ವಂದಿಸಿದರು.

# ರಸ್ತೆ ಸುರಕ್ಷತಾ ನಿಯಮ ಪಾಲಿಸಿ : ಸಾಧಿಕ್



ಹುಮನಾಬಾದ್: ತಮ್ಮ, ತಮ್ಮ ಸುರಕ್ಷತೆ ಮತ್ತು ಜೀವ ರಕ್ಷಣೆಗೆ ವಾಹನ ಸವಾರರೂ ಕಡ್ಡಾಯವಾಗಿ ರಸ್ತೆ ಸುರಕ್ಷತಾ ನಿಯಮ ಪಾಲಿಸಬೇಕು ಎಂದು ಭಾಲ್ಕಿ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿ ಜಾಫರ್ ಸಾಧಿಕ್ ಕರೆ ನೀಡಿದರು.

ಪಟ್ಟಣದ ಪ್ರವಾಸಿ ಮಂದಿರದ ಆವರಣದಲ್ಲಿ ಭಾಲ್ಕಿ ಸಹಾಯಕ ಪ್ರಾದೇಶಿಕ ಸಾರಿಗೆ ಕಚೇರಿಯಿಂದ ಗುರುವಾರ ನಡೆದ 37ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ, ಜಾಗೃತಿ ಮಾಸಾಚಾರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ರಸ್ತೆ ಅಪಘಾತ ತಡೆಯಲು ಎಲ್ಲರ ಸಹಕಾರ ಅಗತ್ಯ, ಸಾರಿಗೆ ನಿಯಮಗಳನ್ನು ಅರಿತುಕೊಂಡು ಅವುಗಳನ್ನು ಪಾಲನೆ ಮಾಡಬೇಕು, ವಾಹನ ಚಲಾವಣೆ ಮಾಡುವಾಗ ಎಲ್ಲ ದಾಖಲೆಗಳನ್ನು ಸರಿಯಾಗಿ ಇಟ್ಟುಕೊಂಡಿರಬೇಕು. ಮನೆಯಿಂದ ಹೊರ ಬರಬೇಕಾದರೆ ದಾಖಲೆಗಳನ್ನು ಒಂದು ಸಲ ನೋಡಿಕೊಳ್ಳಬೇಕು. ಸಕಾಲಕ್ಕೆ ದಾಖಲೆಗಳನ್ನು ನವೀಕರಣ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದರು.ಅಪಘಾತದಲ್ಲಿ ಮೊದಲು ತಲೆಗೆ ಪೆಟ್ಟಾಗುತ್ತದೆ, ಹೀಗಾಗಿ ಬೈಕ್ ಸವಾರರು ಕಡ್ಡಾಯವಾಗಿ ಉತ್ತಮ ಗುಣಮಟ್ಟದ ಹೆಲ್ಮೆಟ್ ಖರೀದಿ ಮಾಡಿ ಧರಿಸಬೇಕು. ವಾಹನ ಚಲಾಯಿಸುವಾಗ ಹೆಡ್ ಫೋನ್, ಮೊಬೈಲ್ ಬಳಸಬಾರದು. ಕುಡಿದು ವಾಹನ ಓಡಿಸಬಾರದು, ಮುಖಾಮುಖಿ, ಹಿಂಬದಿಯಿಂದ, ಏದುರುಗಡೆಯಿಂದ ಬರುವ ವಾಹನದಿಂದ ರಸ್ತೆ ಅಪಘಾತ ಉಂಟಾಗುತ್ತದೆ, ತಡೆಗಟ್ಟಲು ಕಡ್ಡಾಯವಾಗಿ ರಸ್ತೆ ನಿಯಮಗಳನ್ನು ಪಾಲಿಸಿಬೇಕು. ಎಂದರು, ಪ್ರವೇಶ ನಿಷೇಧ, ಎಡಕ್ಕೆ ತೀರುಗಿ, ಪ್ರದೇಶ ನಿಷೇಧಿಸಲಾಗಿದೆ ಎಂಬ ಫಲಕಗಳನ್ನು ನೋಡಿ ಅರಿತು ಅದರಂತೆ ನಡೆದು ತಲೆಗೆ ಹೆಲ್ಮೆಟ್ ಧರಿಸಿ ವಾಹನ ಚಾಲಾಯಿಸಿದರೆ ರಸ್ತೆಯ ಅಪಘಾತ ಮತ್ತು ಸಾವು ನೋವುಗಳನ್ನು ತಡೆಗಟ್ಟಬಹುದಾಗಿದೆ, ಎಂದು ಹೇಳಿದರು. ಈ ಸಂದರ್ಭದಲ್ಲಿ ವಾಹನ ಚಾಲನಾ ತರಬೇತಿ ಕೇಂದ್ರದ ಪ್ರಮುಖರು, ವಾಹನ ಸಾವಾರರೂ ಇದ್ದರು.

# ಮೇದಾರ ಕೇತಯ್ಯ ಜಯಂತಿ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:**

ಪಟ್ಟಣದ ಹಿರೇಮಠಸಂಸ್ಥಾನದಲ್ಲಿ ವನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರ ದಿವ್ಯ ಸಾನಿಧ್ಯದಲ್ಲಿ ಶನಿವಾರ ಸಾಯಂಕಾಲ 5 ಗಂ–ಟೆಗೆ ಶರಣ ಮೇದಾರ ಕೇತಯ್ಯ ಜಯಂತಿ ಮತ್ತು 494 ನೆಯ ಮಾಸಿಕ ಶಿವಾನುಭವಗೋಷ್ಠಿ ಹಮ್ಮಿಕೊಳ್ಳಲಾಗಿದೆ.

ಸಮಾರಂಭದ ಅಧ್ಯಕ್ಷತೆ ತಾಲೂಕು ಮೇದಾರ ಕೇತಯ್ಯ ಸಮಾಜದ ನಾಗನಾಥ ಮೇಘಾ ವಹಿಸಿಕೊಳ್ಳಲಿದ್ದಾರೆ. ಗುಂಡಪ್ಪ ಸಂಗಮಕರ್ ಅನುಭಾವ ಜರುಗಲಿದೆ. ಮುಖ್ಯ ಅತಿಥಿಗಳಾಗಿ ಬಸವರಾಜ ಚಂದಾನೊರ ಅವರು ಆಗಮಿಸಲಿದ್ದಾರೆ. ಅನೀಲಕುಮಾರ ಚಂದಾನೊರ, ಶಂಕರ ಚಂದಾನೊರ, ವಿಶಾಲ ಪಳಸೆ, ಶ್ರೀಧರ ಚಂದಾನೊರ, ಸಚೀನ್ ಪೂಜಾರಿ, ಅಯ್ಯಣ್ಣ ಶಿವಲಿಂಗ ವಾಗ್ಮಾರೆ, ರಾಹುಲ್ ಸಾವಂತ, ರಾಜಕುಮಾರ ಬಸವರಾಜ ಚಂದಾನೊರ, ಸಿದ್ಧು ವಾಗ್ಮೋರೆ, ಪ್ರಮೋದ ನಾಗನಾಥ ಚಂದಾನೋರ, ರೋಹನ್ ಅನೀಲಕುಮಾರ ಚಂದಾನೊರ ಭಾಗವಹಿಸಲಿದ್ದಾರೆ. ಭಕ್ತಿದಾಸೋಹ ವೀರೇಶ ಚನ್ನಬಸಪ್ಪ ಭೂರಾಳೆ ಭಾತಂಬ್ರಾ ಅವರಿಂದ ನಡೆಯುವುದು. ದೀಪಕ ಠಮಕೆ ನಿರೂಪಣೆ ಮಾಡಲಿದ್ದಾರೆ. ಪ್ರಿಯಾಂಕಾ ರಾಹುಲ ಸಾವಂತ ಅವರಿಂದ ವಚನ ಸಂಗೀತ ನಡೆಯುವುದು. ಗುರುಪ್ರಸಾದ ಶಾಲೆಯ ಮಕ್ಕಳಿಂದ ಶಿವಶರಣ ಮೇದಾರ ಕೇತಯ್ಯ ರೂಪಕ ಪ್ರದರ್ಶನಗೊಳ್ಳಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಲಿಡ್ಕರ್ ವಸ್ತುಗಳು ಮಾರಾಟ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಹೊಸ ವರ್ಷ ಹಾಗೂ ಮಕರ ಸಂಕ್ರಾಂತಿ ಹಬ್ಬದ ಪ್ರಯುಕ್ತ ಜ.01 ರಿಂದ 18 ರವರೆಗೆ ಲಿಡ್ಕರ್ ನ ಎಲ್ಲಾ ಚರ್ಮವಸ್ತುಗಳನ್ನು ಶೇ.20 ರ ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗುವುದು ಎಂದು ಲಿಡ್ಕರ್ ನ ಜಿಲ್ಲಾ ಸಂಯೋಜಕ ಟಿ.ಸಂಜೀವಪ್ಪ ಅವರು ತಿಳಿಸಿದ್ದಾರೆ.

ಗ್ರಾಹಕರು ನಗರದ ಹೆಚ್.ಆರ್.ಗವಿಯಪ್ಪ ವೃತ್ತದ ಬಳಿಯ ಬುಡಾ ಕಾಂಪ್ಲೆಕ್ಸ್ ನ ಶಾಪ್ ನಂ.24 ಲಿಡ್‌ಕರ್ ಲೆದರ್ ಎಂಪೋರಿಯಮ್ ಇಲ್ಲಿಗೆ ಭೇಟಿ ನೀಡಬಹುದು.

ಹೆಚ್ಚಿನ ಮಾಹಿತಿಗಾಗಿ ದೂ.08392271741, ಮೊ.9844667691 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜ.02 ರಂದು ಸಿರಿಧಾನ್ಯ ನಡಿಗೆ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಕೃಷಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಅಂತರಾಷ್ಟ್ರೀಯ ವಾಣಿಜ್ಯ ಮೇಳ–2026 ರ ಅಂಗವಾಗಿ ಸಿರಿಧಾನ್ಯಗಳ ಮಹತ್ವ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಜ.02 ರಂದು ಬೆಳಿಗ್ಗೆ 06.30 ಗಂಟೆಗೆ ನಗರದ ರೈಲ್ವೇ ಸ್ಟೇಷನ್ ರಸ್ತೆಯ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಸಿರಿಧಾನ್ಯ ನಡಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ನಡಿಗೆಯು ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಪ್ರಾರಂಭವಾಗಿ ಹೆಚ್.ಆರ್.ಗವಿಯಪ್ಪ ವೃತ್ತ, ವಾಲ್ಮಿಕಿ ವೃತ್ತ, ದುರ್ಗಮ್ಮ ಗುಡಿ, ಗಡಿಗಿ ಚೆನ್ನಪ್ಪ ವೃತ್ತ ಮಾರ್ಗವಾಗಿ ಮರಳಿ ಜಿಲ್ಲಾಧಿಕಾರಿಗಳ ಕಚೇರಿ ಆವರಣಕ್ಕೆ ತಲುಪಿ ಮುಕ್ತಾಯಗೊಳ್ಳಲಿದೆ.

ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಅವರು ತಿಳಿಸಿದ್ದಾರೆ.

# ತಾಂತ್ರಿಕ ಕಾರ್ಯಗಾರ ಮತ್ತು ವಸ್ತು ಪ್ರದರ್ಶನ ಕಾರ್ಯಕ್ರಮ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಕೃಷಿ ಇಲಾಖೆ ವತಿಯಿಂದ ಅಂತರಾಷ್ಟ್ರೀಯ ವಾಣಿಜ್ಯ ಮೇಳ–2026 ರ ಅಂಗವಾಗಿ 'ಉತ್ಪಾದನೆ ಮೀರಿ ಕೃಷಿ – ರೈತರ ಸಬಲೀಕರಣ' ಧ್ಯೇಯದೊಂದಿಗೆ ರಾಷ್ಟ್ರೀಯ ಆಹಾರ ಭದ್ರತಾ ಮಿಷನ್ ಮತ್ತು ಆತ್ಮ ಯೋಜನೆಯಡಿ ಸಿರಿಧಾನ್ಯಗಳ ಮಹತ್ವ, ಉತ್ಪಾದನೆಯ ನಂತರ ಕೃಷಿ ಸಂಸ್ಕರಣೆ, ಮೌಲ್ಯವರ್ಧನೆ, ಪ್ಯಾಕಿಂಗ್ ಮತ್ತು ಮಾರುಕಟ್ಟೆ ಸಂಪರ್ಕ ಕುರಿತು ರೈತರು, ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಜ.04 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಮುನಿಸಿಪಲ್ ಕಾಲೇಜು ಮೈದಾನದಲ್ಲಿ ಜಿಲ್ಲಾ ಮಟ್ಟದಲ್ಲಿ ತಾಂತ್ರಿಕ ಕಾರ್ಯಗಾರ ಮತ್ತು ವಸ್ತು ಪ್ರದರ್ಶನ ಕಾರ್ಯಕ್ರಮ ಆಯೋಜಿಸಲಾಗಿದೆ.

ಕಾರ್ಯಕ್ರಮಕ್ಕೆ ರೈತರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕ ಸೋಮಸುಂದರ್ ಅವರು ಕೋರಿದ್ದಾರೆ.

# ಹಿಂಗಾರು ಬೆಳೆ ಸಮೀಕ್ಷೆಯ ರೈತರ ಆಪ್ ಬಿಡುಗಡೆ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

2025–26ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ರೈತರಿಂದ ಬೆಳೆದ ಬೆಳೆಗಳ ಬಗ್ಗೆ ನಿಖರವಾಗಿ ಮಾಹಿತಿ ಮೊಬೈಲ್ ಆಪ್‌ನಿಂದ ದಾಖಲಿಸಲು ಆಪ್ ಬಿಡುಗಡೆ ಮಾಡಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಈಗಾಗಲೇ ಇ–ಆಡಳಿತ ವತಿಯಿಂದ ಅಭಿವೃದ್ಧಿಪಡಿಸಿರುವ ಬೆಳೆ ಸಮೀಕ್ಷೆ ಆಪ್ ಬಿಡುಗಡೆಯಾಗಿರುತ್ತದೆ. ರೈತರು ತಮ್ಮ ಮೊಬೈಲ್‌ನಲ್ಲಿ ಗೂಗಲ್ ಪ್ಲೇಸ್ಟೋರ್‌ನಿಂದ ಬೆಳೆ ಸಮೀಕ್ಷೆ ಹಿಂಗಾರು ಹಂಗಾಮಿನ ಫಾರ್ಮರ್ ಆಪ್ ಕ್ರಾಪ್ ಸರ್ವೇ ರಬಿ 2025 ಆಪ್ ನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು ಅಥವಾ ಈ ಕೆಳಗಿನ ಲಿಂಕ್ ಮೂಲಕ ಡೌನ್ಲೋಡ್ ಮಾಡಿಕೊಳ್ಳಬಹುದು.

https://play.google.com/store/apps/details?id=com.csk.farmer23_24.cropsurvey

ಬೆಳೆ ಸಮೀಕ್ಷೆ ದತ್ತಾಂಶ ಮಾಹಿತಿಯನ್ನು ಬೆಳೆ ವಿಸ್ತರಣೆ ಎಣಿಕೆ ಕಾರ್ಯದಲ್ಲಿ, ಬೆಳೆ ಕಟಾವು ಪ್ರಯೋಗದಲ್ಲಿ, ಪ್ರಕೃತಿ ವಿಕೋಪ ಸಂದರ್ಭದಲ್ಲಿ, ಬೆಳೆಹಾನಿ ವರದಿ ಸಿದ್ಧಪಡಿಸಲು, ಬೆಳೆ ವಿಮಾ ಯೋಜನೆ, ಬೆಂಬಲ ಬೆಲೆ ಯೋಜನೆ, ಆರ್.ಟಿ.ಸಿ.ಯಲ್ಲಿ ಬೆಳೆ ವಿವರ ದಾಖಲಿಸಲು, ರಾಷ್ಟ್ರೀಯ ಹಾಗೂ ಗ್ರಾಮೀಣ ಬ್ಯಾಂಕ್‌ಗಳಲ್ಲಿ ಬೆಳೆ ಸಾಲ ಮಂಜೂರು ಮಾಡಲು ಬೆಳೆ ಸಮೀಕ್ಷೆ ಮಾಹಿತಿಯನ್ನು ಉಪಯೋಗಿಸಲಾಗುತ್ತದೆ.

ಜಿಲ್ಲೆಯಲ್ಲಿ 293013 ಬೆಳೆ ತಾಕುಗಳಿದ್ದು, ಮೊಬೈಲ್ ಆಪ್ ನಲ್ಲಿ ಜಿಯೋ ರೆಫೆರೆನ್ಸ್ಡ್ ಅಂಡ್ ಡಿಜಿಟೈಸ್ಡ್ ಬೆಳೆಗ್ರಾಮ ನಕಾಶೆ ಅಳವಡಿಸಲಾಗಿರುವುದರಿಂದ ಆಯಾ ತಾಕಿನ ಗಡಿ ರೇಖೆಯೊಳಗೆ ಹೋಗಿ ಜಿಪಿಎಸ್ ನಿಖರತೆ ಪಡೆದು ಛಾಯಾಚಿತ್ರದೊಂದಿಗೆ ಬೆಳೆಯ ವಿವರಗಳನ್ನು ಕಡ್ಡಾಯವಾಗಿ ರೈತರು ದಾಖಲು ಮಾಡಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಿಯಾಯಿತಿ ದರದಲ್ಲಿ ಮಾರಾಟ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ 2026ರ ಜನವರಿ ತಿಂಗಳು ಪೂರ್ತಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇ.50 ರ ರಿಯಾಯಿತಿ ದರಗಳಲ್ಲಿ ಮಾರಾಟ ಮಾಡಲಾಗುವುದು. ಪುಸ್ತಕ ಪ್ರಿಯರು ಈ ಅವಕಾಶ ಬಳಸಿಕೊಳ್ಳಬೇಕು ಎಂದು ಪ್ರಾಧಿಕಾರದ ಆಡಳಿತಾಧಿಕಾರಿ ಕೆ.ಬಿ.ಕಿರಣ್ ಸಿಂಗ್ ಅವರು ತಿಳಿಸಿದ್ದಾರೆ.

ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯಲ್ಲಿ (ದೂ.080–22107705) ಹಾಗೂ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಈ ರಿಯಾಯಿತಿ ಸೌಲಭ್ಯ ಪಡೆಯಬಹುದಾಗಿದೆ.

ಕನ್ನಡ ಪುಸ್ತಕ ಪ್ರಾಧಿಕಾರವು ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಸಂಬಂಧಿಸಿದಂತೆ, ಎಲ್ಲಾ ಪ್ರಕಾರದ ಸಾಹಿತ್ಯ ಕೃತಿಗಳನ್ನು ಈವರೆಗೆ ಪ್ರಕಟಿಸುತ್ತಾ ಬಂದಿದೆ. ಇವುಗಳಲ್ಲಿ ವ್ಯಕ್ತಿ ಚಿತ್ರಗಳು, ನಾಟಕಗಳು, ಅಲೆಮಾರಿ ಸಮುದಾಯ, ವೈದ್ಯಕೀಯ, ಪ್ರಾಚೀನ ಕನ್ನಡ ಸಾಹಿತ್ಯ, ಜಾನಪದ, ಪರಿಸರ, ಕೃಷಿ ಹೀಗೆ ಹಲವು ಹತ್ತು ಪ್ರಕಾರಗಳಲ್ಲಿ ಸಾಹಿತ್ಯ ಕೃತಿಗಳನ್ನು ಇದುವರೆಗೆ ಸುಮಾರು 700ಕ್ಕೂ ಹೆಚ್ಚಿನ ಶೀರ್ಷಿಕೆಗಳನ್ನು ಮುದ್ರಿಸಿ ಪ್ರಕಟಿಸಿದೆ.

ಅತ್ಯಂತ ಮೌಲಿಕವಾದ, ಪ್ರಾಜ್ಞರಿಂದ ರಚಿತವಾದ ಈ ಕೃತಿಗಳನ್ನು ಜನಸಾಮಾನ್ಯರಿಗೆ ಸುಲಭ ಬೆಲೆಯಲ್ಲಿ ತಲುಪಿಸಬೇಕೆಂಬ ಉದ್ದೇಶ ಕನ್ನಡ ಪುಸ್ತಕ ಪ್ರಾಧಿಕಾರ ಹೊಂದಿದೆ.

ಕನ್ನಡ ಪುಸ್ತಕ ಪ್ರಾಧಿಕಾರದ ಆನ್‌ಲೈನ್ https://kpp.karnataka.gov.in (ಆನ್ ಲೈನ್ ಪುಸ್ತಕ ಖರೀದಿಗೆ ಇಲ್ಲಿ ವೀಕ್ಷಿಸಿ ವಿಭಾಗ) ನಲ್ಲಿ ಕೂಡ ಈ ಶೇ.50 ರಿಯಾಯಿತಿ ಲಭ್ಯವಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಹಾಯಧನ : ಅರ್ಜಿ ಅವಧಿ ವಿಸ್ತರಣೆ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ರಾಜ್ಯಾದ್ಯಂತ ಹಾಗೂ ಹೊರರಾಜ್ಯಗಳಲ್ಲಿ ಕ್ರಿಯಾತ್ಮಕ ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ನಾಡಿನ ಭಾಷಾ ಸಂವರ್ಧನೆ, ಕಲೆ, ಸಾಹಿತ್ಯ, ಸಂಗೀತ, ಜಾನಪದ, ನೃತ್ಯ ಕಲಾಪ್ರಕಾರಗಳನ್ನು ಉಳಿಸಿ ಬೆಳೆಸುವ ಸಲುವಾಗಿ ಕಾರ್ಯನಿರ್ವಹಿಸುತ್ತಿರುವ ನೋಂದಾಯಿತ ಸಂಘ ಸಂಸ್ಥೆಗಳಿಗೆ ಧನಸಹಾಯ ನೀಡಲು ಹಾಗೂ ಕಲಾವಿದರಿಗೆ ವಾದ್ಯ ಪರಿಕರ ಮತ್ತು ವೇಷಭೂಷಣಗಳ ಖರೀದಿಗೆ ಸಹಾಯಧನ ಹಾಗೂ ಚಿತ್ರಕಲೆ, ಶಿಲ್ಪ ಕಲಾಕೃತಿಗಳ ಪ್ರದರ್ಶನಕ್ಕೆ ಸಹಾಯಧನ ನೀಡಲು 2025–26ನೇ ಸಾಲಿನ ಸಾಮಾನ್ಯ, ಪರಿಶಿಷ್ಟ ಜಾತಿ, ಪಂಗಡ ಉಪಯೋಜನೆಯಡಿ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಜನವರಿ 9 ವರೆಗೆ ವಿಸ್ತರಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಳೆ ಸಮೀಕ್ಷೆಗಾಗಿ ಮೊಬೈಲ್ ಆಪ್ ಬಿಡುಗಡೆ

ಬಾಗಲಕೋಟೆ : ಜನವರಿ 01 (ಕರ್ನಾಟಕ ವಾರ್ತೆ) : ಹಿಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಕಾರ್ಯಕ್ರಮದಡಿ ರೈತರಿಂದಲೇ ತಾವು ಬೆಳೆದ ಬೆಳೆಯನ್ನು ದಾಖಲಿಸಲು ಮೊಬೈಲ್ ಆಪ್ ಬಿಡುಗಡೆ ಮಾಡಲಾಗಿದೆ. ರೈತರು ಹಿಂಗಾರು ಬೆಳೆ ಆಪ್ ಡೌನ್‌ಲೋಡ್ ಮಾಡಿಕೊಂಡು ಬೆಳೆ ಸಮೀಕ್ಷೆ ಮಾಹಿತಿಯನ್ನು ದಾಖಲಿಸಬಹುದಾಗಿದೆ.

ತಮ್ಮ ಜಮೀನಿನಲ್ಲಿರುವ ಬೆಳೆಗಳ ವಿವರಗಳನ್ನು ದಾಖಲಿಸಲು ಜನವರಿ 25 ಕೊನೆಯ ದಿನವಾಗಿದೆ. ಬೆಳೆ ಸಮೀಕ್ಷೆ ಮಾಡದೇ ಇದ್ದಲ್ಲಿ ಸರಕಾರದ ಯೋಜನೆಗಳಿಂದ ವಂಚಿತರಾಗುವ ಸಾಧ್ಯತೆ ಇರುತ್ತದೆ. ಒಂದು ವೇಳೆ ಖುದ್ದಾಗಿ ಬೆಳೆ ಸಮೀಕ್ಷೆ ಮಾಡಲು ಸಾಧ್ಯವಾಗದಿದ್ದಲ್ಲಿ ಆಯಾ ಗ್ರಾಮದ ಖಾಸಗಿ ನಿವಾಸಿಗಳ ಮೂಲಕ ಬೆಳೆ ಸಮೀಕ್ಷೆ ಕಾರ್ಯ ಕೈಗೊಂಡು ಇದರ ಸದುಪಯೋಗ ಪಡೆದುಕೊಳ್ಳುವಂತೆ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಗ್ರಾಮದ ಕೃಷಿ ಸಖಿಯರು, ಖಾಸಗಿ ನಿವಾಸಿಗಳು, ಕೃಷಿ ಇಲಾಖೆ, ಕಂದಾಯ ಇಲಾಖೆ, ತೋಟಗಾರಿಕೆ ಇಲಾಖೆ ಮತ್ತು ರೇಷ್ಮೆ ಇಲಾಖೆ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ.

# ಶಿಲ್ಪಕಲೆಯಲ್ಲಿ ಜಕಣಾಚಾರಿಯವರ ಕೊಡುಗೆ ಅಪಾರ : ಗದ್ದಿಗೌಡರ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಭಾರತೀಯ ಶಿಲ್ಪಕಲಾ ಕೌಶಲ್ಯಕ್ಕೆ ಅಪಾರವಾದ ಕೊಡುಗೆಯನ್ನು ನೀಡಿ, ಕಲೆಗಳನ್ನು ಜೀವಂತವಾಗಿರಿಸಿದವರು ಅಮರಶಿಲ್ಪಿ ಜಕಣಾಚಾರಿ ಎಂದು ಸಂಸದ ಪಿ.ಸಿ.ಗದ್ದಿಗೌಡರ ಹೇಳಿದರು.

ನವನಗರದ ಡಾ.ಬಿ.ಆರ್.ಅಂಬೇಡ್ಕರ ಸಭಾಭವನದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಅವರ ಸಂಸ್ಮರಣಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಭಾರತ ಸೇರಿದಂತೆ ವಿಶ್ವದ ವಿವಿಧ ಕಡೆಗಳಲ್ಲಿ ಜಕಣಾಚಾರಿಗಳ ಶಿಲ್ಪಕಲೆಗಳು ಇಂದಿಗೂ ಜೀವಂತವಾಗಿವೆ. ತಮ್ಮ ಜೀವನವನ್ನು ಮುಡುಪಾಗಿಟ್ಟು ಶಿಲ್ಪಕಲೆಗೆ ಅಪಾರವಾದ ಕೊಡುಗೆ ನೀಡಿದ್ದಾರೆ ಎಂದರು.

ಬೇಲೂರು ಹಳೆಬೀಡು, ಸೋಮನಾಥಪುರ ದೇವಾಲಯಗಳಲ್ಲಿನ ಶಿಲ್ಪಕಲೆಗಳು ಇಂದಿಗೂ ಜೀವಂತವಾಗಿವೆ. ಅಂತಹ ಶಿಲ್ಪಕಲೆಯನ್ನು ನೋಡುವ ಭಾಗ್ಯ ದೊರೆತಿದೆ. ಇಂತಹ ವೈವಿದ್ಯಮಯ ಕಲೆಯಿಂದ ಕೂಡಿದ ಶಿಲ್ಪಕಲೆಯನ್ನು ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸುವ ಕೆಲಸವಾಗಬೇಕಿದೆ. ಮಕ್ಕಳಿಗೆ ಶಿಕ್ಷಣ ಕೊಡಿಸುವ ಮೂಲಕ ಸಮುದಾಯವರು ಅಭಿವೃದ್ದಿ ಹೊಂದಬೇಕು ಎಂದರು ತಿಳಿಸಿದರು.

ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾ ಮಾತನಾಡಿ ಸೃಷ್ಠಿಗೆ ಕಾರಣರಾದ ವಿಶ್ವಕರ್ಮರು ತಮ್ಮ ಶಿಲ್ಪಕಲೆಯ ಮೂಲಕ ನಾಡಿಗೆ ಪರಿಚಯಿಸಿದ್ದಾರೆ. ತಮ್ಮ ಕಲೆಯ ಮೂಲಕ ನಾಜೂಕಾದ ಹಲವಾರು ದೇವಾಲಯಗಳನ್ನು ನಿರ್ಮಿಸಿ ದಂತಕಥೆಯಾದ ಶಿಲ್ಪಿ ಇರವರಾಗಿದ್ದಾರೆ. ಚಾಲುಕ್ಯರ ಹಾಗೂ ಯೊಯ್ಸಳರ ಶೈಲಿಯ ದೇವಾಲಯಗಳನ್ನು ಬೇಲೂರು ಹಾಗೂ ಹಳೆಬೀಡಿನಲ್ಲಿ ನಿರ್ಮಿಸಿದ್ದಾರೆ ಎಂದರು.

ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ ಜಕನಾಚಾರಿ ಎಂದರೆ ಕಲ್ಲಿನಲ್ಲಿ ಪ್ರಾಣ ತುಂಬಿದ ಅಮರಶಿಲ್ಪಿ, ಹೊಯ್ಸಳ ಯುಗದ ವೈಭವಶಾಲಿ ವಾಸ್ತುಶಿಲ್ಪದಲ್ಲಿ ಅವರ ಕೈಚಳಕ, ಅವರ ದೃಷ್ಠಿ, ಶಿಸ್ತು ಇಂದು ಕೂಡ ಕಲ್ಲಿನ ಗೋಡೆಗಳ ಮೇಲೆ ಜೀವಂತವಾಗಿ ಮಾತಾಡುತ್ತವೆ. ಇವೆಲ್ಲವೂ ಅಮರಶಿಲ್ಪಿ ಜಕಣಾಚಾರಿಯಂತಹ ಶಿಲ್ಪಿಗಳ ತಪಸ್ಸಿನ ಫಲವಾಗಿದೆ ಎಂದರು.

ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷ ಅನೀಲಕುಮಾರ ದಡ್ಡಿ ಮಾತನಾಡಿ 12–13ನೇ ಶತಮಾನದಲ್ಲಿ ಕಲೆಗಳಿಗೆ ಹೆಚ್ಚಿನ ಪ್ರೋತ್ಸಾಹ ಇತ್ತು. ಇದರಿಂದಲೇ ಶಿಲ್ಪಕಲೆಯಲ್ಲಿ ಅಪಾರವಾದ ಕೊಡುಗೆ ನೀಡಲು ಜಕಣಾಚಾರಿಯವರಿಗೆ ಸಾಧ್ಯಯಿತು. ಅದನ್ನು ಉಳಿಸಿಕೊಂಡು ಹೋಗುವ ಹೊಣೆ ಇಂದಿನ ಯುವಕರ ಮೇಲೆ ಇದೆ. ಬದಲಾದ ಕಾಲಗಟ್ಟದಲ್ಲಿ ತಂತ್ರಜ್ಞಾನದ ಬಳಕೆಯ ಮೂಲಕ ಮತ್ತು ಮೆರಗು ನೀಡಲಾಗುತ್ತಿದೆ. ಇದರ ಜೊತೆಗೆ ಹಳೆಯದನ್ನು ಮರೆಯಬಾರದು ಎಂದು ತಿಳಿಸಿದರು.

ಉಪನ್ಯಾಸಕರಾಗಿ ಆಗಮಿಸಿದ್ದ ಸುತಗುಂಡಾರ ಎಸ್.ಕೆ.ಪ್ರೌಢಶಾಲೆಯ ಮುಖ್ಯಗುರು ಅಪ್ಪಾಸಾಬ ಬಡಿಗೇರ ಮಾತನಾಡಿ ಪ್ರಪಂಚದ ಎಲ್ಲ ವಿದ್ಯೆಗಳ ಮೂಲವಾಗಿರುವ ಜಕಣಾಚಾರಿ ಅವರನ್ನು ಜಗತ್ತಿನ ಮೊದಲ ಅಭಿಯಂತರ ಎನ್ನಬಹುದಾಗಿದೆ. ಜಕಣಾಚಾರಿಯವರ ಶಿಲ್ಪಕಲೆ ಜಗತ್ತಿನ ಎಲ್ಲಡೆ ಪಸರಿಸಿರುವ ಮೂಲಕ ನಾಡನ್ನು ಶ್ರೀಮಂತವನ್ನಾಗಿ ಮಾಡಿದೆ. ಜಕಣಾಚಾರಿ ಅವರ ಹೆಸರಿನಲ್ಲಿ ಸರಕಾರ ಪ್ರಶಸ್ತಿಯನ್ನು ಕೊಡಮಾಡುತ್ತಿದ್ದು, 2 ಪ್ರಶಸ್ತಿಗಳು ಜಿಲ್ಲೆಗೆ ದೊರೆತಿರುವುದು ಹೆಮ್ಮೆಯ ವಿಷಯವಾಗಿದೆ ಎಂದರು.

ಮಳೆಯರಾಜೇಂದ್ರಮಠದ ಜಗನ್ನಾಥ ಶ್ರೀ ಮತ್ತು ನಾಲತ್ವಾಡದ ಸುಧೀಂದ್ರ ಶ್ರೀಗಳು ದಿವ್ಯಸಾನಿಧ್ಯವಹಿಸಿ ಆಶೀರ್ವಚನ ನೀಡಿದರು. ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಸಮುದಾಯ ಮುಖಂಡ ಮೌನೇಶ ಬಡಿಗೇರ ಸೇರಿದಂತೆ ಇತರರು ಉಪಸ್ಥಿತರಿದ್ದರು.



ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ಜಕಣಾಚಾರಿ ಅವರ ಭಾವಚಿತ್ರದ ಮೆರವಣಿಗೆಗೆ ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ ಚಾಲನೆ ನೀಡಿದರು. ಮೆರವಣಿಗೆ ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ನಗರದ ನಾನಾ ಕಡೆ ಸಂಚರಿಸಿ ಡಾ.ಬಿ.ಆರ್.ಅಂಬೇಡ್ಕರ ಭವನಕ್ಕೆ ಮುಕ್ತಾಯಗೊಂಡಿತು. ಮೆರವಣಿಗೆಯಲ್ಲಿ ವಿವಿಧ ಜಾನಪದ ಕಲಾತಂಡಗಳು ಪಾಲ್ಗೊಂಡಿದ್ದವು.

# ಮತದಾನದ ಹಕ್ಕಿನಿಂದ ಪ್ರಜಾಪ್ರಭುತ್ವ ಬಲಿಷ್ಠ: ಡಾ.ಅರುಣಕುಮಾರ ಗಾಳಿ





• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಭಾರತದಂತಹ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರಗಳಲ್ಲಿ ಮತದಾನವು ಅತ್ಯಂತ ಮುಖ್ಯವಾಗಿದ್ದು, ಇದು ಪ್ರಜಾಪ್ರಭುತ್ವವನ್ನು ಬಲಪಡಿಸುತ್ತದೆ ಎಂದು ಪ್ರಾಚಾರ್ಯರಾದ ಡಾ.ಅರುಣಕುಮಾರ ಗಾಳಿ ಹೇಳಿದರು.

ಅವರು ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಬುಧವಾರ ಆಯೋಜಿಸಿದ ಮತದಾನದ ನೋಂದಣಿ ಅಭಿಯಾನಕ್ಕೆ ಪದವಿ ವಿದ್ಯಾರ್ಥಿಗಳಿಗೆ ಭಾರತ ಚುನಾವಣೆ ಆಯೋಗದ ನಮೂನೆ–6 ನೀಡುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಮುಂದುವರಿದು ಮಾತನಾಡಿ ನಮ್ಮ ಭಾರತದ ಚುನಾವಣೆ ಆಯೋಗ ನಡೆಸುವ ಚುನಾವಣೆಗಳಲ್ಲಿ ಪಾಲ್ಗೊಳ್ಳಬೇಕಾದರೆ 18 ವರ್ಷ ಪೂರ್ಣಗೊಂಡಿರುವ ಪ್ರತಿಯೊಬ್ಬ ಭಾರತೀಯ ನಾಗರಿಕರು ನಮೂನೆ–6 ಫಾರ್ಮ ತುಂಬುವ ಮೂಲಕ ಹೊಸ ಮತದಾರರ ಸೇರ್ಪಡೆಗೆ ಅರ್ಜಿ ಸಲ್ಲಿಸಿ, ಮತದಾನದ ಹಕ್ಕು ಪಡೆಯಬೇಕು. ಮತದಾನದ ಪಾವಿತ್ರತೆ ಪ್ರತಿಯೊಬ್ಬರು ತಿಳಿದುಕೊಳ್ಳವುದು ಅವಶ್ಯಕವಾಗಿದ್ದು, ಯುವ ಜನತೆಯು ಮತದಾನದ ಮಹತ್ವವನ್ನು ಅರಿತು ನೋಂದಣಿ ಮಾಡಿಸಿ, ಮತ್ತು ಚುನಾವಣೆಯಲ್ಲಿ ಭಾಗವಹಿಸುವಂತೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಮತದಾರರ ನೋಂದಣಿ ಅಭಿಯಾನ ಮಾಡಲಾಗಿದೆ, ಈ ಅಭಿಯಾನವು ಮತದಾನದ ಪ್ರಮಾಣವನ್ನು ಹೆಚ್ಚಿಸಲು, ನಾಗರಿಕರಲ್ಲಿ ಜಾಗೃತಿ ಮೂಡಿಸಲು ಮತ್ತು ಚುನಾವಣಾ ಪ್ರಕ್ರಿಯೆಯಲ್ಲಿ ಅವರ ಸಕ್ರೀಯವಾಗಿ ಪಾಲ್ಗೊಳ್ಳಲು ಸಹಕಾರಿಯಾಗಿದೆ ಎಂದು ಹೇಳಿದರು.

ಮತದಾನ ನೋಂದಣಿ ಅಭಿಯಾನದಲ್ಲಿ ಬೋಧಕರು, ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಒಂದು ಸಾವಿರಕ್ಕೂ ಅಧಿಕ ಪ್ರಥಮ ವರ್ಷದ ಪದವಿ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ರಸ್ತೆ ಸುರಕ್ಷತಾ ಮಾಸಾಚರಣೆ

ಬಾಗಲಕೋಟೆ: ಜಿಲ್ಲೆಯಾದ್ಯಂತ ಜನವರಿ 1 ರಿಂದ 31 ವರೆಗೆ ರಸ್ತೆ ಸುರಕ್ಷತಾ ಮಾಸಾಚರಣೆ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದೆ ಎಂದು ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ಎನ್.ವಿ.ವಿಜಯ್ ಹೇಳಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಕಚೇರಿಯಲ್ಲಿಂದು ಕರೆಯಲಾಗಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು ರಸ್ತೆ ಸುರಕ್ಷತಾ ಕಾರ್ಯಕ್ರಮದ ಅಂಗವಾಗಿ ಸರ್ವೋಚ್ಚ ನ್ಯಾಯಾಲಯದ ರಸ್ತೆ ಸುರಕ್ಷತಾ ಸಮಿತಿಯ ನಿರ್ದೇಶನದಂತೆ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಪ್ರಾದೇಶಿಕ ಸಾರಿಗೆ ಇಲಾಖೆ, ಲೋಕೋಪಯೋಗಿ, ಪೊಲೀಸ್ ಹಾಗೂ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ಜಿಲ್ಲಾ, ತಾಲೂಕಾ ಹಾಗೂ ಗ್ರಾಮ ಮಟ್ಟದಲ್ಲಿ ರಸ್ತೆ ಸುರಕ್ಷತಾ ಮಾಸಾಚರಣೆ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ರಸ್ತೆ ಅಪಘಾತದಲ್ಲಿ ರಾಜ್ಯದ ಅಂಕಿ ಸಂಖ್ಯೆಯನ್ನು ಅವಲೋಕನ ಮಾಡಿದಾಗ ರಾಜ್ಯದಲ್ಲಿ ಪ್ರಸಕ್ತ ವರ್ಷ ಮೊದಲ 6 ತಿಂಗಳಲ್ಲಿ 21937 ರಸ್ತೆ ಅಪಘಾತಗಳು ಸಂಭವಿಸಿದ್ದು, ಅದರಲ್ಲಿ 5975 ಸಾವುಗಳು ಸಂಭವಿಸಿವೆ. 27,456 ಹೆಚ್ಚಿನ ಪ್ರಮಾಣದಲ್ಲಿ ಗಾಯಗಳಾಗಿವೆ. ಇಂತಹ ಅಪಘಾತಗಳನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಅರಿವು ಮೂಡಿಸುವ ನಿಟ್ಟಿನಲ್ಲಿ ಒಂದು ತಿಂಗಳುಗಳ ಕಾಲ ಅಭಿಯಾನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಅಪಘಾತಗಳು ಮುಖ್ಯವಾಗಿ ವೇಗವಾಗಿ ಹೋಗುವುದು, ಕುಡಿದು ವಾಹನ ಚಲಾಯಿಸುವುದು, ರಸ್ತೆ ನಿಯಮ ಪಾಲನೆ, ಹೆಲ್ಮೆಟ್ ಧರಿಸದೇ ಇರುವುದು ಸೇರಿದಂತೆ ಇತರೆ ಕಾರಣಗಳಿಂದ ಹೆಚ್ಚಿನ ಪ್ರಮಾಣದಲ್ಲಿ ಅಪಘಾತಗಳು ಸಂಭವಿಸುತ್ತಿವೆ. ಅಪಘಾತಗಳನ್ನು ತಡೆಯುವ ನಿಟ್ಟಿನಲ್ಲಿ ಜನರಲ್ಲಿ ಅರಿವು ಮೂಡಿಸಲು ಅಭಿಯಾನದ ರೂಪದಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಈ ಅಭಿಯಾನದಲ್ಲಿ ರಸ್ತೆ ಸುರಕ್ಷತೆಗೆ ಸಂಬಂಧಿಸಿದಂತೆ ವಾಹನ ಅಪಘಾತವಾದ ಸಂದರ್ಭಗಳಲ್ಲಿ ನಗದು ರಹಿತ ಚಿಕಿತ್ಸೆ, ವಿಮಾ ಮೊತ್ತ ಪಾವತಿಗೆ ಸಂಬಂಧಿಸಿದಂತೆ ನಮೂನೆಗಳ ಭರ್ತಿ ಇನ್ನಿತರ ಅಂಶಗಳ ಕುರಿತು ತರಬೇತಿ, ಕಾರ್ಯಾಗಾರ, ಸೆಮಿನಾರ್, ಪ್ಯಾನಲ್ ಡಿಸ್‌ಕಷನ್, ರಹ್‌ವೀರ್, ಗುಡ್‌ಸಮರಿಟನ್ ಅವಾರ್ಡ, ಗೋಲ್ಡನ್ ಅವರ್ ಬಗ್ಗೆ ಅರಿವು ಮತ್ತು ಮಾಸ್ಟರ ಟ್ರೈನರ್‌ಗಳಿಗೆ ಉನ್ನತ ಮಟ್ಟದ ತರಬೇತಿ ಕಾರ್ಯಕ್ರಮಗಳನ್ನು ಪಾಲಿದಾರ ಇಲಾಖೆಗಳಾದ ಸಾರಿಗೆ, ಪೊಲೀಸ್, ಆರೋಗ್ಯ (ರೋಡ ಓನಿಂಗ್ ಏಜೆನ್ಸಿ)ಯ ಅಧಿಕಾರಿ ಮತ್ತು ಸಿಬ್ಬಂದಿಯವರಿಗೆ ನೀಡಲಾಗುತ್ತದೆ ಎಂದರು.

ಮಾಸಾಚರಣೆ ಅವಧಿಯಲ್ಲಿ ಪರಿಣಾಮಕಾರಿ

ಪ್ರವರ್ತನ ಚಟುವಟಿಕೆಗಳನ್ನು ಕೈಗೊಳ್ಳಲಾಗುತ್ತದೆ. ರಸ್ತೆ ಸುರಕ್ಷತೆ ಬಗ್ಗೆ ಅರಿವು ಮೂಡಿಸಲು ಕಾರ್ಯಾಗಾರ ಮತ್ತು ಉಚಿತ ಆರೋಗ್ಯ ತಪಾಸಣಾ ಶಿಬಿರ, ರಕ್ತದಾನ ಶಿಬಿರ, ಸೇಫ್ಟಿ ಹಾರ್ನೆಸ್ ಬಗ್ಗೆ ಅರಿವು ಮೂಡಿಸಲಾಗುತ್ತದೆ. ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ರಸಪ್ರಶ್ನೆ, ಪ್ರಬಂಧ ರಚನೆ, ಕಿರು ನಾಟಕ, ಚಿತ್ರಕಲಾ ಸ್ಪದ–ೆ, ಸಾಮಾಜಿಕ ಜಾಲತಾಣದಲ್ಲಿ ರಸ್ತೆ ಸುರಕ್ಷತೆಯ ಸ್ಲೋಗನ್‌ಗಳ ಪ್ರದರ್ಶನ ಮೂಲಕ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಇದ್ದರು.



# ಹಿರಿಯರೊಂದಿಗೆ ಹೊಸ ವರ್ಷ ಆಚರಿಸಿದ ಧ್ರುವ ಆಸರೆ ಫೌಂಡೇಶನ್ ಎಂ.ಜಿ ಕನಕ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಧ್ರುವ ಆಸರೆ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ಹಾಗೂ ಸಮಾಜಸೇವಕ ಎಂ.ಜಿ ಕನಕ 2026ನೇ ಹೊಸವರ್ಷದ ಪ್ರಯುಕ್ತ ಧ್ರುವ ಆಸರೆ ಫೌಂಡೇಶನ್ ನಿಂದ

ಸಂಗನಕಲ್ಲು ಗ್ರಾಮದ ಆದರ್ಶ ಹಿರಿಯರ ವೃದ್ಧಾಶ್ರಮದಲ್ಲಿ ಅನ್ನದಾನ ಸೇವ ಕಾರ್ಯಕ್ರಮವನ್ನು ನೆರವೇರಿಸಿ ಆದರ್ಶ ವೃದ್ಧಾಶ್ರಮದಲ್ಲಿ ಹಿರಿಯ ನಾಗರೀಕರೊಂದಿಗೆ ಹೊಸ ವರ್ಷ ಆಚರಿಸಿ ಸಂಭ್ರಮಿಸಿದರು.

ನಂತರ ಮಾತನಾಡಿ ಎಂ.ಜಿ ಕನಕ ಪ್ರತಿಯೊಬ್ಬರೂ ತಮ್ಮ ತಂದೆ ತಾಯಿಯನ್ನು ವೃದ್ಧಾಶ್ರಮಕ್ಕೆ ಕಳುಹಿಸಬೇಡಿ ಏಕೆಂದರೆ ನಿಮ್ಮ ಪ್ರತಿಯೊಂದು ಚಲನವಲನಗಳನ್ನು ನಿಮ್ಮ ಮಕ್ಕಳು ನೋಡುತ್ತಾ ಬೆಳೆಯುತ್ತಾರೆ, ಇಂದು ನಿಮ್ಮ ತಂದೆ ತಾಯಿಗೆ ಬಂದ ಪರಿಸ್ಥಿತಿ, ನಾಳೆ ನಿಮಗೂ ಬರಬಹುದು ನಿಮ್ಮ ಮಕ್ಕಳು ನಿಮ್ಮನ್ನು ಮುಂದಿನ ದಿನಗಳಲ್ಲಿ ವೃದ್ಧಾಶ್ರಮಕ್ಕೆ ಕಳುಹಿಸಬಹುದು. ಹಾಗಾಗಿ ನಿಮ್ಮ ತಂದೆ ತಾಯಿಯನ್ನು ದೂರ ಮಾಡಿಕೊಳ್ಳದೆ ಚೆನ್ನಾಗಿ ನೋಡಿಕೊಂಡಲ್ಲಿ ಸಮಾಜದಲ್ಲಿ

ವೃದ್ಧಾಶ್ರಮದ ಅವಶ್ಯಕತೆ ಇರುವುದಿಲ್ಲ ಎಂದ ಕನಕ, ಸಾಮಾನ್ಯವಾಗಿ ನಮ್ಮ ತಂದೆ ತಾಯಿಗಳನ್ನು ಕೃಷಿ ಕಾರ್ಮಿಕರು ಕೂಲಿ ಕಾರ್ಮಿಕರು ಆಟೋ ಡ್ರೈವರ್ ಗಳು ಸೇರಿದಂತೆ ಬಡ ಕುಟುಂಬಗಳಲ್ಲಿ ತಂದೆ ತಾಯಿಯನ್ನು ಜೊತೆಗೆ ಇಟ್ಟುಕೊಂಡು ಅವಿಭಕ್ತ ಕುಟುಂಬವಾಗಿ ವಾಸಿಸುತ್ತಾರೆ ಇದಕ್ಕೆ ತದ್ವಿರುದ್ಧವಾಗಿ ಐಟಿಬಿಟಿ ಕೆಲಸ ಮಾಡುವ ನೌಕರರು ಕಂಪನಿಯ ಕೆಲಸದ ಬಿಜಿ ಶೆಡ್ಯೂಲ್ ನಿಂದಾಗಿ ಅಥವಾ ಕೆಲಸಕ್ಕಾಗಿ ವಿದೇಶಕ್ಕೆ ಹೋಗುವುದರಿಂದ ತಂದೆ ತಾಯಿಗಳನ್ನು ನೋಡಿಕೊಳ್ಳಲು ಸಾಧ್ಯವಾಗುವುದಿಲ್ಲ ಇದರಿಂದ ಅವರು ತಮ್ಮ ತಂದೆ ತಾಯಿಗಳನ್ನು ವೃದ್ಧಾಶ್ರಮದಲ್ಲಿ ಬಿಟ್ಟು ಹೋಗುತ್ತಾರೆ ಇದು ಅತ್ಯಂತ ಅಮಾನವೀಯ ವಿಷಯ ಎಂದು ಬೇಸರ ಪಟ್ಟು–ಕೊಂಡರು.

ಶಿವಮಹಾಪುರಾಣದ 11ನೇ ಅಧ್ಯಾಯದಲ್ಲಿ ಅನ್ನದಾನದ ಮಹತ್ವವನ್ನು ವಿವರಿಸಿದ್ದಾರೆ. ಮೊದಲಿಗೆ ಗೊದಾನ, ಭೂದಾನ, ಸುವರ್ಣದಾನ ಹೀಗೆ ಅನೇಕ ದಾನಗಳನ್ನು ತಿಳಿಸಿ ಕೊನೆಯಲ್ಲಿ 'ಸರ್ವೇಷಾಮೆವದಾನಾನಾಮನ್ನದಾನಂ ಪರಂಸ್ಮೃಂ'(ಎಲ್ಲಾ ದಾನಗಳಲ್ಲೂ ಅನ್ನದಾನವೇ ಶ್ರೇಷ್ಠ) ಎಂದು ಹೇಳಿಲಾಗಿದೆ ಎಂದು ತಿಳಿಸಿದರು. ಉಳಿದೆಲ್ಲದಾನಗಳಲ್ಲೂ ಮನುಷ್ಯನನ್ನು ತೃಪ್ತಿಪಡಿಸುವುದು ತುಂಬಾ ಕಷ್ಟ. ಇನ್ನೂ ಸ್ವಲ್ಪ ಕೊಡಬಹುದಿತ್ತು ಎಂಬ ಭಾವನೆ ಬರಬಹುದು. ಅಥವಾ ಇನ್ನೂ ಸ್ವಲ್ಪ ಕೊಟ್ಟರೆ ಬೇಡ ಎನ್ನುವುದಿಲ್ಲ, ಆದರೆ ಅನ್ನದಾನದಲ್ಲಿ ಮಾತ್ರ ಒಂದು ಹಂತಕ್ಕೆ ತೃಪ್ತಿ ಎಂಬುದಿದೆ ಸಾಕು ಎಂಬ ಶಬ್ದ ಆತ್ಮಸಾಕ್ಷಿಯಾಗಿ ಹೊರಬರುತ್ತದೆ. ಗರ್ಭಸ್ಥ ಶಿಶುಗಳು, ಬಾಲರು, ವೃದ್ಧರು ಎಲ್ಲರೂ ಅನ್ನವನ್ನು ಬಯಸುತ್ತಾರೆ. ಹಾಗಾಗಿ ಎಲ್ಲರೂ ನಿಮ್ಮ ಕೈಲಾದಷ್ಟು ಅನ್ನದಾನ ಮಾಡಿ ಎಂದು ಎಂ.ಜಿ ಕನಕ ಅವರು ಹೇಳಿದರು.

# ಸುಪರ್ ಸ್ಪೆಷಾಲಿಟಿ ಆಸ್ಪತ್ರೆ ಜನೆವರಿಯಲ್ಲಿ ಪ್ರಾರಂಭ

• **ಮಲ್ಲಮ್ಮ ನುಡಿ ವಾರ್ತೆಬಾಗಲಕೋಟೆ:**

ನಗರದ ಬಿ.ವಿ.ವಿ ಸಂಘದ ಎಚ್.ಎಸ್.ಕೆ ಸುಪರ್ ಸ್ಪೆಷಾಲಿಟಿ ಆಸ್ಪತ್ರೆ ನವನಗರದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಆವರಣದಲ್ಲಿ ಜನೆವರಿ ತಿಂಗಳಲ್ಲಿ ಪ್ರಾರಂಭವಾಗಲಿದೆ.

400 ಹಾಸಿಗೆಗಳ ಈ ಆಸ್ಪತ್ರೆಯಲ್ಲಿ ಅತ್ಯಾಧುನಿಕ ಉಪಕರಣಗಳನ್ನೊಳಗೊಂಡ ಸುಸಜ್ಜಿತ ವಿಭಾಗಗಳಲ್ಲಿ ನುರಿತ ತಜ್ಞ ವೈದ್ಯರುಗಳಿದ್ದು, ಅತೀ ಕಡಿಮೆ ವೆಚ್ಚದಲ್ಲಿ ಗುಣಮಟ್ಟದ ಚಿಕಿತ್ಸೆ ನೀಡಲಿದ್ದಾರೆ.

ನಗರದ ಸಾರ್ವಜನಿಕರು ಮತ್ತು ಗ್ರಾಮೀಣ ಪ್ರದೇಶದ ಜನತೆ ಈ ಸೇವಾ ಸೌಲಭ್ಯಗಳನ್ನು ಪಡೆದುಕೊಳ್ಳಬೇಕೆಂದು ಬಿ.ವಿ.ವಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಾಥಮಿಕ ಶಾಲೆಯಲ್ಲಿ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣ ದಿನಾಚರಣೆ



• **ಮಲ್ಮನ ನುಡಿ ವಾರ್ತೆ ಮಸ್ಕಿ:**

ತಾಲೂಕಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹಸಮಕಲ್ ಗ್ರಾಮದಲ್ಲಿ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣೆ ನಡೆಯಿತು. ಜಕಣಾಚಾರಿ ಅವರ ಭಾವಚಿತ್ರಕ್ಕೆ ಎಸ್ ಡಿ ಎಮ್ ಸಿ ಅಧ್ಯಕ್ಷ ದುರುಗಪ್ಪ ಪುಷ್ಪಾರ್ಚನೆ ಮಾಡಿ ಗೌರವ ಸಲ್ಲಿಸಿದರು.

ನಂತರ ಮಾತನಾಡಿ, ಅಮರಶಿಲ್ಪಿ ಜಕಣಾಚಾರ್ಯ ಅವರು ಬೇಲೂರು ಹಳೇಬೀಡು ಮುಂತಾದ ದೇವಾಲಯಗಳ ನಿರ್ಮಾಣ ಹಾಗೂ ಅನೇಕ ಸುಂದರ ಶಿಲ್ಪಗಳನ್ನು ನಿರ್ಮಾಣ ಮಾಡಿ ಕರ್ನಾಟಕದ ವಾಸ್ತುಶಿಲ್ಪಕ್ಕೆ ಅಮೋಘವಾದ ಕೊಡುಗೆಯನ್ನು ನೀಡಿದ್ದಾರೆ. ಅವರು ಕರ್ನಾಟಕ ವಾಸ್ತುಶಿಲ್ಪಕಲಾ ಸಾಂಸ್ಕೃತಿಕ ರಾಯಭಾರಿ' ಎಂದು ಅಭಿಪ್ರಾಯಪಟ್ಟರು.

ಪ್ರಭಾರಿ ಮುಖ್ಯಗುರುಗಳು ಅಮರೇಶ ಗುಡದೂರ ಮಾತನಾಡಿ, ವಿಶ್ವಕರ್ಮ ಸಮುದಾಯದ ಶ್ರೇಷ್ಠ ಶಿಲ್ಪಿಗಳಲ್ಲಿ ಒಬ್ಬರಾಗಿದ್ದ ಜಕಣಾಚಾರಿ ನಾಡಿನ ಶಿಲ್ಪಿಗಳಿಗೆ ಮಾರ್ಗದರ್ಶಕರಾಗಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಿಕ್ಷಕಿಯರಾದ ಸುಮಂಗಲಾ ಕುಂಬಳಾವತಿ, ಕು. ಯಲ್ಲಮ್ಮ, ಸತ್ಯಮಣಿ, ಪವಿತ್ರ, ಹಾಗೂ ಶಾಲಾ ಮಕ್ಕಳು ಇದ್ದರು.

# ವಿಠಲ ದೇವಾಲಯ ಹತ್ತಿರ ಅಕ್ಕ ಕ್ಯಾಂಟಿನ್



• **ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ):**

ರಾಜ್ಯದಲ್ಲಿ ಮೊಟ್ಟ ಮೊದಲ ಬಾರಿಗೆ ಸಂಚಾರಿ ಅಕ್ಕ ಕ್ಯಾಂಟಿನ್ ನ್ನು ವಿಶ್ವವಿಖ್ಯಾತ ಹಂಪಿಯ ವಿಜಯ ವಿಠಲ ದೇವಸ್ಥಾನದ ಮುಂಭಾಗದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೆ.ತಿಮ್ಮಪ್ಪ ಅವರು ಬುಧವಾರ ಚಾಲನೆ ನೀಡಿದರು.

ಜಿಲ್ಲಾ ಪಂಚಾಯತ್ ವಿಜಯನಗರ ಹಾಗೂ ತಾಲೂಕು ಪಂಚಾಯತ್ ಹೊಸಪೇಟೆ, ಸಂಜೀವಿನಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಹಾಗೂ ಶ್ರೀಜಗನ್ ಜ್ಯೋತಿ ಸಂಜೀವಿನಿ ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟ ಹಂಪಿ ವತಿಯಿಂದ ಹಮ್ಮಿಕೊಳ್ಳಲಾಗಿತ್ತು. ವಿಶ್ವ ವಿಖ್ಯಾತ ಹಂಪಿ ಹಾಗೂ ವಿಜಯ ವಿಠಲ ದೇವಸ್ಥಾನ ವೀಕ್ಷಣೆಗೆ ಬರುವ ವಿವಿಧ ರಾಜ್ಯ ಸೇರಿದಂತೆ ವಿದೇಶಿ ಪ್ರವಾಸಿಗರು ಹೆಚ್ಚಿನ ಪ್ರಮಾಣದಲ್ಲಿ ಆಗಮಿಸುತ್ತಿರುವ ಹಿನ್ನಲೆಯಲ್ಲಿ ದೇವಸ್ಥಾನ ವೀಕ್ಷಣೆ ಹಾಗೂ ದೇವರ ದರ್ಶನ ಪಡೆಯಲು ಬರುವ ಗ್ರಾಮೀಣ ಪ್ರದೇಶದ ಸಾರ್ವಜನಿಕರಿಗೆ ಗುಣಮಟ್ಟದ ಊಟ ಸಿಗುವುದು ಕಷ್ಟ ಸಾಧ್ಯ, ಈ ನಿಟ್ಟಿನಲ್ಲಿ ಹಂಪಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ವಿಜಯ ವಿಠಲ ದೇವಸ್ಥಾನ ಮುಂಭಾಗದಲ್ಲಿ ಮೊಬೈಲ್ ಕ್ಯಾಂಟಿನ್ ವ್ಯವಸ್ಥೆ ಕಲ್ಪಿಸಲಾಗಿದೆ. ಜಗನ್ ಜ್ಯೋತಿ ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟ ಹಂಪಿಯ ಶ್ರೀವೈಷ್ಣವಿ ಮಹಿಳಾ ಸ್ವ ಸಹಾಯ ಗುಂಪಿನ ಮಹಿಳೆಯರು ತಯಾರಿಸಿರುವ ರುಚಿ ಶುಚಿಯಾದ ತಿಂಡಿ ತಿನಿಸುಗಳು, ಇಡ್ಲಿ, ವಡೆ, ಚಿತ್ರಾನ್ನ, ಖಾರಾ ಬಾತ್, ಪುಳಿಯೋಗರೆ ಹಾಗೂ ಟೀ, ಕಾಫಿ, ಗುಣಮಟ್ಟದ ಊಟ ಹಾಗೂ ಸಂಜೆ ತಿನಿಸುಗಳು ಉಪಹಾರ ತಯಾರಿಸಿ ನೀಡಲಾಗುವುದು.

ಇದರ ಸದುಪಯೋಗವನ್ನು ಸಾರ್ವಜನಿಕರು ಹಾಗೂ ಅಧಿಕಾರಿಗಳು ಹಾಗೂ ಈ ಭಾಗದ ಜನರಿಗೆ ಹೆಚ್ಚಿನ ಪ್ರಮಾಣದಲ್ಲಿ ಪಡೆದುಕೊಳ್ಳಬೇಕು. ಇದರಿಂದಾಗಿ ಮೊಬೈಲ್ ಕ್ಯಾಂಟಿನ್ ನಲ್ಲಿ ತೊಡಗಿರುವ ಗ್ರಾಮೀಣ ಭಾಗದ ಸ್ವಸಹಾಯ ಗುಂಪಿನ ಮಹಿಳೆಯರ ಕುಟುಂಬಗಳಿಗೆ ಹೆಚ್ಚಿನ ಆದಾಯ ವೃದ್ಧಿಯಾಗಿ ಆರ್ಥಿಕವಾಗಿ ಸದೃಢವಾಗಲು ಸಹಕಾರಿಯಾಗುತ್ತದೆ ಎಂದರು.

ಉಪ ಕಾರ್ಯದರ್ಶಿಗಳು ಊಟಕ್ಕೆ ಬಳಸುವ ಎಲ್ಲಾ ಪರಿಕರಗಳು ಹಾಗೂ ಸಾಮಾಗ್ರಿಗಳನ್ನು ಪರಿಶೀಲಿಸಿದರು ಹಾಗೂ ಸ್ವಚ್ಛತೆ ಕಾಪಾಡುವಲ್ಲಿ ಅಗತ್ಯ ಕ್ರಮಗಳನ್ನು ಅನುಸರಿಸಿ, ಉತ್ತಮ ಗುಣಮಟ್ಟದ ಸಾಮಗ್ರಿಗಳು ಹೊಂದಿದ್ದಲ್ಲಿ ಉತ್ತಮ ಗುಣಮಟ್ಟದ ಶುಚಿರುಚಿಯಾದ ಉಪಹಾರ ನೀಡುವಂತೆ ಮೊಬೈಲ್ ಕ್ಯಾಂಟಿನ್ ಅಡುಗೆ ಸಿಬ್ಬಂದಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಸಹಾಯಕ ಯೋಜನಾ ಅಧಿಕಾರಿ ಉಮೇಶ್, ತಾಲೂಕು ಪಂಚಾಯತ್ ಹೊಸಪೇಟೆಯ ಕಾರ್ಯ ನಿರ್ವಾಹಕ ಅಧಿಕಾರಿ ಅಲಂ ಭಾಷಾ, ಜಿಪಂ ಅಧೀಕ್ಷಕ ನಾಗರಾಜ್, ಜಿಲ್ಲಾ ಯೋಜನಾ ವ್ಯವಸ್ಥಾಪಕ ಪ್ರಸನ್ನ, ಜಿಲ್ಲಾ ವ್ಯವಸ್ಥಾಪಕಿ ಕಲಾವತಿ ಸೇರಿದಂತೆ ಮಹಿಳಾ ಒಕ್ಕೂಟದ ಸದಸ್ಯರು ಭಾಗವಹಿಸಿದ್ದರು.



208 ನೇ ಭೀಮಾ ಕೋರೆಗಾಂವ್ ವಿಜಯೋತ್ಸದ ಅಂಗವಾಗಿ ಅಹಿಂದ ಹಕ್ಕುಗಳ ಹೋರಾಟ ವೇದಿಕೆ ರಾಜ್ಯಾಧ್ಯಕ್ಷ ಜಿ ಅಂಜನಪ್ಪ ನೇತೃತ್ವದಲ್ಲಿ ಪೀಣ್ಯ ಎರಡನೇ ಹಂತದಲ್ಲಿರುವ ಡಾ. ಬಿ ಅರ್ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ವಿಜಯೋತ್ಸವ ಆಚರಿಸಲಾಯಿತು. ಈ ಸಂಧರ್ಭದಲ್ಲಿ ಕೆಪಿಸಿಸಿ ಕಾರ್ಮಿಕ ವಿಭಾಗದ ರಾಜ್ಯ ಜಂಟಿ ಕಾರ್ಯದರ್ಶಿ ಎಂಕೆ ನಿಸಾರ್ ಖಾನ್, ಬೆ ನಗರ ಅಧ್ಯಕ್ಷ ಕೆಂಪರಾಜು , ಸುನೀಲ್ , ನಿಂಬೆಹಣ್ಣು ರಾಜಣ್ಣ ಮೈಕ್ ಸೆಟ್ ಬಾಬಣ್ಣ, ಸೈಕಲ್ ಶಾಪ್ ವಿಜಯ್ ಕುಮಾರ್, ಮಹದೇವ್, ಗಂಗನರಸಯ್ಯ, ರಾಮಕೃಷ್ಣ, ಮತ್ತಿತರರು ಇದ್ದರು.

## ಅಮರಶಿಲ್ಪಿ ಜಕಣಾಚಾರಿ ಜಯಂತಿ



**ಮುದಗಲ್:** ಪುರಸಭೆ ಕಾರ್ಯಾಲಯ, ನಾಡ ಕಾರ್ಯಾಲಯ, ರೈತ ಸಂಪರ್ಕ ಕೇಂದ್ರ, ಹೈಟೆಕ್ ಗ್ರಂಥಾಲಯ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸಮುದಾಯ ಆರೋಗ್ಯ ಕೇಂದ್ರ, ಎಪಿಎಂಸಿ ಸೇರಿದಂತೆ ವಿವಿಧ ಶಾಲಾ ಕಾಲೇಜುಗಳಲ್ಲಿ ವಿಶ್ವಕರ್ಮ ಸಮುದಾಯದ ಅಮರಶಿಲ್ಪಿ ಜಕಣಾಚಾರಿ ಜಯಂತಿ ಗುರುವಾರ ಆಚರಿಸಿದರು.

ಪುರಸಭೆ ಕಾರ್ಯಾಲಯದಲ್ಲಿ ವಿಶ್ವಕರ್ಮ ಸಮುದಾಯದ ಮುಖಂಡ ಕಾಳಪ್ಪ ಬಡಿಗೇರ್, ನಾಡ ಕಾರ್ಯಾಲಯದಲ್ಲಿ ಉಪ ತಹಸಿಲ್ದಾರ್ ತುಳಜರಾಮ್ ಸಿಂಗ್, ರೈತ ಸಂಪರ್ಕ ಕೇಂದ್ರದಲ್ಲಿ ಶ್ರೀಶೈಲಬೋವಿ, ಎಪಿಎಂಸಿಯಲ್ಲಿ ಮೌನೇಶ್, ಹೈಟೆಕ್ ಗ್ರಂಥಾಲಯದಲ್ಲಿ ಗ್ಯಾನಪ್ಪ ದಫೆದಾರ್, ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಡಾ. ಸಿದ್ದರಾಮಯ್ಯ ಪಾಟೀಲ್, ಸಮುದಾಯ ಆರೋಗ್ಯ ಕೇಂದ್ರದಲ್ಲಿ ಡಾ. ವಿನೋದ್ ಕುಮಾರ ಅವರು ಅಮರಶಿಲ್ಪಿ ಜಕಣಾಚಾರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಿದರು.

ಪುರಸಭೆ ವ್ಯವಸ್ಥಾಪಕ ಸುರೇಶ ಹೊನ್ನಳ್ಳಿ, ಸಮಾಜದ ಮುಖಂಡರು ನಾರಾಯಣಪ್ಪ ಎಸ್ ಪತ್ತಾರ, ನೀಲಪ್ಪ ಕಂಬಾರ, ಉದಯಕುಮಾರ ಕಮ್ಮಾರ, ಕಾಳಪ್ಪ ಬಡಿಗೇರ, ಮೌನೇಶ್ ಕಮ್ಮಾರ್, ಮಾನಪ್ಪ ಪತ್ತಾರ, ಕೃಷ್ಣಾ ಪತ್ತಾರ, ಗುರುರಾಜ ಪತ್ತಾರ, ನಾರಾಯಣ ವೈ ಪತ್ತಾರ, ಸುರೇಶ ಕೆ ವಿಶ್ವಕರ್ಮ, ಕಾಶೀಪತಿ ಪತ್ತಾರ, ಪ್ರಾಣೇಶ ಪತ್ತಾರ, ಅಮರೇಶ, ಪಂಪಾಪತಿ, ಚಿನ್ನಪ್ಪ ಪತ್ತಾರ, ಶ್ರೀಶೈಲಪ್ಪ, ವೆಂಕಣ್ಣ ದೇಶಪಾಂಡೆ, ಪುರಸಭೆ ಸಿಬ್ಬಂದಿಗಳು ಸೇರಿದಂತೆ ಇತರರಿದ್ದರು.

## 'ಕಗ್ಗಲ್ಲ್ ಕ್ರಾಸ್' ಕಥಾ ಸಂಕಲನಕ್ಕೆ ನುಡಿ ಸಡಗರ ಪ್ರಶಸ್ತಿ

**ಬಾಗಲಕೋಟೆ:** ನಗರದ ಸಾಹಿತಿ, ಸಕ್ರಿ ಪದವಿಪೂರ್ವ ಕಾಲೇಜಿನ ಕನ್ನಡ ಉಪನ್ಯಾಸಕ ಡಾ.ಉಮೇಶ ತಿಮ್ಮಾಪುರ ಅವರ 'ಕಗ್ಗಲ್ಲ್ ಕ್ರಾಸ್' ಕಥಾ ಸಂಕಲನಕ್ಕೆ ಚೇತನ ಪೌಂಡೆಷನ್ ಧಾರವಾಡ ಅವರು ನೀಡುವ 2025ನೇ ಸಾಲಿನ ನುಡಿ ಸಡಗರ ಪ್ರಶಸ್ತಿ ಲಭಿಸಿದೆ.



ಕಳೆದ ರವಿವಾರ ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಕನಕ ಅಧ್ಯಯನ ಪೀಠದಲ್ಲಿ ಜರುಗಿದ ಧಾರವಾಡ ನುಡಿಸಡಗರ ಸಮಾರೋಪ ಸಮಾರಂಭದಲ್ಲಿ ಆಕಾಶವಾಣಿ ಧಾರವಾಡ ಕೇಂದ್ರದ ನಿವೃತ್ತ ಅಧಿಕಾರಿ ಡಾ.ಶಶಿಧರ ನರೇಂದ್ರ ಪ್ರಶಸ್ತಿ ಪ್ರದಾನ ಮಾಡಿದರು. ಸಾಹಿತಿಗಳಾದ ಡಾ.ಪ್ರಕಾಶ ಖಾಡೆ, ಸಾಹಿತ್ಯ ಅಕಾಡೆಮಿ ಸದಸ್ಯ ಮಹಾದೇವ ಬಸರಕೋಡ ಸಾಹಿತಿ ಶಂಕರ ಬೈಚಬಾಳ ಹಾಗೂ ನುಡಿ ಸಡಗರ ಸಂಯೋಜಕರಾದ ಚಂದ್ರಶೇಖರ ಮಾಡಲಗೇರಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಡಾ.ಉಮೇಶ ತಿಮ್ಮಾಪುರ ಅವರ ಎರಡು ಕಥಾ ಸಂಕಲನಗಳು ಈಗಾಗಲೇ ಪ್ರಕಟವಾಗಿದ್ದು ನಾಡಿನ ಪತ್ರಿಕೆಗಳಲ್ಲಿ ಇವರ ಕಥೆಗಳು ಬೆಳಕು ಕಂಡಿವೆ. ಗ್ರಾಮ್ಯ ಬದುಕಿನ ಚಿತ್ರಣಗಳನ್ನು ತುಂಬಾ ದಟ್ಟವಾಗಿ ಕಟ್ಟಿಕೊಡುವ ಅವರ ಕಥೆಗಳು ಗಮನಾರ್ಹವಾಗಿವೆ.

## ತಾಲೂಕಿನಾದ್ಯಂತ ಅಮರಶಿಲ್ಪಿ ಜಕಣಾಚಾರಿ ಜಯಂತಿ ಆಚರಣೆ



**ಮಸ್ಕಿ:** ತಾಲೂಕಿನಾದ್ಯಂತ ಅಮರಶಿಲ್ಪಿ ಜಕಣಾಚಾರಿ ಯವರ ಜಯಂತಿಯನ್ನು ಆಚರಿಸಲಾಯಿತು. ಜಕಣಾಚಾರಿಯವರು ಶಿಲ್ಪಕಲೆಗೆ ಅಪಾರ ಕೊಡುಗೆ ನೀಡಿದ್ದು, ಸೂರ್ಯ ಚಂದ್ರ ಇರುವರೆಗೂ ಇವರ ಹೆಸರು ಅಮರವಾಗಿ ಇರುತ್ತದೆ ಎಂದು ಮಸ್ಕಿ ವಿಶ್ವಕರ್ಮ ಸಮಾಜದ ಮುಖಂಡ ವಿಜಯ್ ಬಡಿಗೇರ್ ಹೇಳಿದರು. ತಾಲೂಕು ದಂಡಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಅಮರಶಿಲ್ಪಿ ಜಕಣಾಚಾರಿ ಅವರು ಸಂಸ್ಮರಣಾ ದಿನಾರಣೆಯಲ್ಲಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು. ಕನ್ನಡ ನಾಡಿನ ಇತಿಹಾಸದಲ್ಲಿ ಹೊಯ್ಸಳರು ತಮ್ಮದೇ ಆದ ಕೊಡುಗೆಯನ್ನು ಶಿಲ್ಪ ಕಲೆಗೆ ನೀಡಿದ್ದಾರೆ. ಇವರಲ್ಲಿ ವಿಷ್ಣುವರ್ಧನ ಅರಸನ ಕಾಲದಲ್ಲಿ ಕಲೆಯು ಉತ್ತುಂಗ ಶಿಖರದಲ್ಲಿತ್ತು. ವಿಷ್ಣುವರ್ಧನನ ಹೆಂಡತಿ ಶಾಂತಲೆ ನಾಟ್ಯ ರಾಣಿ ಎಂದೇ ಪ್ರಸಿದ್ಧಿಯಾಗಿದ್ದಳು. ಈ ಕಾಲದಲ್ಲಿದ್ದ ಅಮರಶಿಲ್ಪಿ ಜಕಣಾಚಾರಿ ಬೇಲೂರು ಹಳೆಬೀಡಿನ ಚನ್ನಕೇಶವ ದೇವಾಲಯದಲ್ಲಿ ಶಿಲ್ಪಗಳನ್ನು ಕೆತ್ತನೆ ಮಾಡಿ ಹೆಸರಾಗಿದ್ದಾರೆ ಎಂದರು. ಈ ಸಂದರ್ಭದಲ್ಲಿ ವಿಶ್ವಕರ್ಮ ಸಮಾಜದವರು, ಕಂದಾಯ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಕರ್ನಾಟಕ ಮಾಹಿತಿ ಹಕ್ಕು ಆಯೋಗಕ್ಕೆ ಭೇಟಿ ನೀಡಿದ್ದ ಶ್ರೀಲಂಕಾ ಪತ್ರಕರ್ತರ ನಿಯೋಗ



• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕಾರ್ಯದರ್ಶಿ ಮತ್ತು ನಿಶ್ಚಿನಾಂತು ಆಲ್ವೀಸ್ ಹಾಗೂ ಹಿರಿಯ ಪತ್ರಕರ್ತ ಪಾತುಮ್ ಪಾಸ್ಕೂಲ್ ಅವರು ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು, ಪತ್ರಕರ್ತರ ಸಂಘದ ಹೋರಾಟ ಕಾರಣದಿಂದ ಪತ್ರಕರ್ತರಿಗೆ ಬಸ್ ಪಾಸ್, ಮಾಸಾಶನ ಸೇರಿದಂತೆ ಹಲವು ಸೌಲಭ್ಯ ಕಲ್ಪಿಸಿದೆ ಎನ್ನುವ ಮಾಹಿತಿಯನ್ನು ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಶ್ರೀಲಂಕಾ ನಿಯೋಗ, ಶ್ರೀಲಂಕಾದಲ್ಲಿ ಪತ್ರಕರ್ತರಿಗೆ ಯಾವುದೇ ಸೌಲಭ್ಯಗಳು ಇನ್ನೂ ಲಭ್ಯವಿಲ್ಲ ಎನ್ನುವ ಮಾಹಿತಿಯನ್ನು ಅವರು ನೀಡಿದರು. ಆದರೆ, ಶ್ರೀಲಂಕಾದಲ್ಲಿ ಮಾಧ್ಯಮ ಮೇಲೆ ಸರ್ಕಾರ ಯಾವುದೇ ನಿಯಂತ್ರಣವನ್ನು ಹೊಂದಿಲ್ಲ. ಸ್ವತಂತ್ರವಾಗಿ ಮಾಧ್ಯಮ ಕಾರ್ಯ ನಿರ್ವಹಣೆ ಮಾಡುತ್ತಿವೆ ಎಂದು ಹೇಳಿದರು.

ಹಿರಿಯ ಪತ್ರಕರ್ತರಾದ ಸಂಜೀವ ಥಿಸೆರಾ, ಹೇಮಂತ ಕುಮಾರಸಿಂಘೆ, ತುಷಾರ ಹೆಟ್ಟಿಯಾರಾಚ್ಚಿ, ಸಿ.ಎ.ದಮ್ಸಿರಿ ಅಜಿತ್ ಅವರು ಶ್ರೀಲಂಕಾ ನಿಯೋಗದಲ್ಲಿದ್ದರು.

## ಭೀಮಾ ಕೋರೆಗಾಂವ ಸ್ವಾಭಿಮಾನಕ್ಕಾಗಿ ನಡೆದ ಯುದ್ಧ: ಡಾ. ಅಶೋಕ ದೊಡ್ಮನಿ

**ಯಡ್ರಾಮಿ:** ದೇಶದ ಇತಿಹಾಸದಲ್ಲಿ ಹೆಣ್ಣು, ಹೊನ್ನು, ಮಣ್ಣು ಮತ್ತು ಸಾಮ್ರಾಜ್ಯಕ್ಕಾಗಿ ಯುದ್ಧ ನಡೆದರೆ, ಭೀಮಾ ಕೋರೆಗಾಂವ ಸ್ವಾಭಿಮಾನಕ್ಕಾಗಿ ನಡೆದ ಯುದ್ಧವಾಗಿದೆ ಎಂದು ಉಪನ್ಯಾಸಕ ಡಾ. ಅಶೋಕ ದೊಡ್ಮನಿ ಹೇಳಿದರು.

ಇಜೇರಿ ಗ್ರಾಮದಲ್ಲಿ ಏರ್ಪಡಿಸಿದ್ದ 208ನೇ ಭೀಮಾ ಕೋರೆಗಾಂವ ವಿಜಯೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. 2ನೇ ಬಾಜಿರಾಯ ತಮ್ಮ ಸೈನ್ಯದಲ್ಲಿ ಸೇರಿಸಿಕೊಳ್ಳದೆ ಅವಮಾನಿಸಿದ ಹಿನ್ನೆಲೆಯಲ್ಲಿ ಸ್ವಾಭಿಮಾನಕ್ಕಾಗಿ ಬ್ರಿಟಿಷರ ಜೊತೆ ಸೇರಿದ ಮಹಾರ್ ರೆಜಿಮೆಂಟ್ ಸೈನ್ಯ ಪೇಶ್ವೇ ಸೈನ್ಯವನ್ನು ಸೋಲಿಸಿತು. 1818 ಜನವರಿ 1 ರಂದು ನಡೆದ ಯುದ್ಧದಲ್ಲಿ ಪೇಶ್ವೇಯ 28 ಸಾವಿರ ಸೈನಿಕರನ್ನು ಕೇವಲ 5 ನೂರು ಜನ ಮಹಾರ್ ಸೈನಿಕರು ಸೋಲಿಸಿದ್ದು ಇತಿಹಾಸದಲ್ಲಿ ದಾಖಲಾಗಿದೆ. ಇಂತಹ ಇತಿಹಾಸವನ್ನು ಡಾ. ಬಾಬಾ ಸಾಹೇಬರು ಹುಡುಕಿ ನಮ್ಮ್ಗೆ ತಿಳಿಸಿದ್ದಾರೆ. ಅಲ್ಲದೆ ಪ್ರತಿ ವರ್ಷ ಜನವರಿ 1ರಂದು ಭೀಮಾ ಕೋರೆಗಾಂವ ಸ್ಥಳಕ್ಕೆ ಡಾ. ಬಾಬಾ ಸಾಹೇಬರು ತಪ್ಪದೆ ಭೇಟಿ ನೀಡುತ್ತಿದ್ದರು ಎಂದರು. ಕಾರ್ಯಕ್ರಮದಲ್ಲಿ ರುಕುಮ್ ಪಟೇಲ್ ಇಜೇರಿ, ಲಾಲಯ್ಯ ಗುತ್ತೇದಾರ, ಈರಣ್ಣ ಅವರಾದಿ, ಅಣ್ಣರಾಯ ಯಂಕಂಚಿ, ಅಮೀರ್ ಹಮಿಜ್ ಲಖನಾಪುರ, ಅಲ್ಲಪಟೇಲ್, ಸದಾಶಿವ ಹಳ್ಳಿಗಡ ಸೇರಿದಂತೆ ಇತರರು ಇದ್ದರು.



## ಟೇಬಲ್ ಟೆನಿಸ್ ಹಾಲ್ ನವೀಕರಣಕ್ಕೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಬೀದರ್ ಜಿಲ್ಲಾ ಟೇಬಲ್ ಟೆನಿಸ್ ಅಸೋಸಿಯೇಷನ್ (BDTTA) ವತಿಯಿಂದ ಜಿಲ್ಲೆಯ ಟೇಬಲ್ ಟೆನಿಸ್ ಹಾಲ್‌ನ ಮೂಲಸೌಕರ್ಯಗಳನ್ನು ನವೀಕರಿಸುವಂತೆ ಟೇಬಲ್ ಟೆನಿಸ್ ಅಸೋಸಿಯೇಷನ್ ಜಿಲ್ಲಾಧ್ಯಕ್ಷರಾದ ರಾಜಶೇಖರ ಜವಳೆ ಕಾರ್ಯದರ್ಶಿ ವಿರೇಶ ಎಸ್ ವಡ್ಡಿ ಅವರ ನೇತೃತ್ವದಲ್ಲಿ ಜಿಲ್ಲಾ ಯುವ ಸೇವೆಗಳ ಅಧಿಕಾರಿ (DYSO) ಅವರಿಗೆ ಮನವಿ ಸಲ್ಲಿಸಲಾಗಿದೆ.

ಟೇಬಲ್ ಟೆನಿಸ್ ಕ್ರೀಡೆಯಲ್ಲಿ ಮಕ್ಕಳು ಹಾಗೂ ಯುವಕರ ಭಾಗವಹಿಸುವಿಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ತರಬೇತಿ ಮತ್ತು ಪಂದ್ಯಾವಳಿಗಳನ್ನು ಸುರಕ್ಷಿತ ಹಾಗೂ ವೃತ್ತಿಪರ ರೀತಿಯಲ್ಲಿ ನಡೆಸಲು ಅಗತ್ಯವಾದ ಸೌಲಭ್ಯಗಳ ಅವಶ್ಯಕತೆಯನ್ನು ಅಸೋಸಿಯೇಷನ್ ತಿಳಿಸಿದೆ. ಹಾಲ್‌ನಲ್ಲಿ ಗಾಯಗಳನ್ನು ತಡೆಯಲು ಹಾಗೂ ಆಟದ ಗುಣಮಟ್ಟ ಹೆಚ್ಚಿಸಲು ರಬ್ಬರ್



ಅಥವಾ ಮರದ ಕ್ರೀಡಾ ನೆಲಹಾಸು ಅಳವಡಿಕೆ, ಹಳೆಯದಾಗಿ ನಾಶಗೊಂಡಿರುವ ಟೇಬಲ್ ಟೆನಿಸ್ ಮೇಜುಗಳನ್ನು ಬದಲಾಯಿಸಿ ಹೊಸ ಮೇಜುಗಳನ್ನು ಒದಗಿಸುವುದು ಮತ್ತು ಆಟಗಾರರ ಸುರಕ್ಷತೆ ಹಾಗೂ ಪ್ರದರ್ಶನಕ್ಕೆ ಅಗತ್ಯವಾದ ಮಿಂಚಿಲ್ಲದ ಸಮರ್ಪಕ ಬೆಳಕಿನ ವ್ಯವಸ್ಥೆ ಕಲ್ಪಿಸುವಂತೆ ಮನವಿಯಲ್ಲಿ ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ಅಸೋಸಿಯೇಷನ್ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

## ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ತಾಲ್ಲೂಕು ಛಾಯಾಗ್ರಾಹಕರ ಸಂಘದ ನೂತನ ವರ್ಷದ ಕ್ಯಾಲಂಡರನ್ನು ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್‌ರವರು ಬಿಡುಗಡೆ ಮಾಡಿದರು.

ನಗರದ ಮಾಪ್ಲಾಜಾದಲ್ಲಿ ನಡೆದ ಸಮಾರಂಭದಲ್ಲಿ ಕ್ಯಾಲೆಂಡರ್ ಬಿಡುಗಡೆ ಮಾಡಿ ಮಾತನಾಡಿದ ಅವರು ಛಾಯಾಗ್ರಹಣ ಒಂದು ಅದ್ಬುತ ಕ್ಷೇತ್ರ. ಕಳೆದು ಹೋದ ಒಂದು ಘಟನೆಗಳನ್ನು ನೆನಪಿಸುವ ಶಕ್ತಿ ಛಾಯಾಚಿತ್ರಕ್ಕೆ ಇದೆ. ಹಳೆಯ ನೆನಪುಗಳನ್ನು ಮೆಲಕು ಹಾಕುವ ಸುಂಧರ ಕ್ಷಣಗಳನ್ನು ಛಾಯಾಚಿತ್ರ ನೀಡುತ್ತದೆ. ಛಾಯಾಗ್ರಾಹಕರೊಂದಿಗೆ ಮಾತನಾಡಿದರೆ ಅದ್ಬುತ ವಿಷಯಗಳು ಸಿಗುತ್ತದೆ.

ಛಾಯಾಗ್ರಹಣದಲ್ಲಿ ಹೊಸ ತಂತ್ರಜ್ಞಾವನ್ನು ಬಳಸಿ ಛಾಯಾಗ್ರಹಣದಲ್ಲಿ ಮುಂದೆ ಬರಬೇಕು. ನೀವು ಹೊಸತನವನ್ನು ತರಲು ಪ್ರಯತ್ನಿಸುತ್ತಿರಬೇಕು. ಛಾಯಾಗ್ರಾಹಕರು ಒಂದು ಸ್ತಬ್ದ ಚಿತ್ರವಾಗದೆ, ಎಂದು ಚಾಲನೆಯಲ್ಲಿರಬೇಕು. ನಿಮ್ಮ ಕ್ಯಾಲೆಂಡರ್



ಗಳಲ್ಲಿ ಛಾಯಾಗ್ರಾಹಕರೆ ತೆಗೆದ ಉತ್ತಮ 12 ಚಿತ್ರಗಳನ್ನು ಒಳಗೊಂಡಂತಹ, ಗ್ರಾಹಕರು ಹಣ ಪಾವತಿಸಿ ಖರೀದಿಸುವಂತಹ ಕ್ಯಾಲೆಂಡರನ್ನು, ನಿವು ವಿನ್ಯಾಸಗೊಳಿಸಬೇಕು. ಅದಕ್ಕೆ ಅದರದೆ ಆದ ತಂಹ ಶಕ್ತಿ ಇದೆ. ಹೊಸ ಹೊಸ ತಂತ್ರಜ್ಞಾವನ್ನು ಬಳಸಿಕೊಂಡು ಮುಂದೆ ಬನ್ನಿ ಎಂದು ಕರೆನೀಡಿದರು.

ತಾಲ್ಲೂಕಿನ ಛಾಯಾಗ್ರಾಹಕರಿಗೆ ಛಾಯಾಚಿತ್ರ ಸ್ಪರ್ಧೆ ಏರ್ಪಡಿಸಿ ಉತ್ತಮ ಮೂರು ಛಾಯಾಚಿತ್ರಗಳಿಗೆ ಪ್ರಥಮ 25000, ದ್ವಿತೀಯ 15000, ತೃತೀಯ 10000 ಸಾವಿರ ರೂ. ನಗದು ಬಹುಮಾನ ನೀಡುವುದಾಗಿ ತಿಳಿಸಿದರು.

## ಅಸಮಾನತೆ ವಿರುದ್ಧ ನಡೆದ ಹೋರಾಟವೇ ಭೀಮಾ ಕೋರೆಗಾಂವ ಯುದ್ಧ

• ಮಲ್ಲಮ್ಮ ನುಡಿ ವಾರ್ತೆ ಬೀದರ್

208ನೇ ಭೀಮಾ ಕೋರೆಗಾಂವ ವಿಜಯೋತ್ಸವವನ್ನು ಮನೆ ಮನೆಗೆ ಅಂಬೇಡ್ಕರ್ ಅನುಷ್ಠಾನ ಸಮಿತಿ ಹಾಗೂ ವಿವಿಧ ದಲಿತ ಮತ್ತು ಪ್ರಗತಿಪರ ಸಂಘಟನೆಗಳ ವತಿಯಿಂದ ಜನವರಿ 1ರಂದು ಮಧ್ಯಾಹ್ನ 12.30ಕ್ಕೆ ಬೀದರ್‌ನ ಅಂಬೇಡ್ಕರ್ ವೃತ್ತದಲ್ಲಿ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಮಾಜಿ ಜಿಲ್ಲಾ ಪಂಚಾಯತ್ ಉಪಾಧ್ಯಕ್ಷೆ ಉಷಾಬಾಯಿ ಬನಸೂಡೆ ಹಾಗೂ ಜ್ಞಾನೋದಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ದಶರಥ ಗುರು ಅವರು ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿದರು.

ಮನೆ ಮನೆಗೆ ಅಂಬೇಡ್ಕರ್ ಅಭಿಯಾನದ ಸಂಚಾಲಕ ಮಹೇಶ್ ಗೋರನಾಳಕರ್ ಮಾತನಾಡಿ, "1818ರ ಜನವರಿ 1ರಂದು ಮಹಾರಾಷ್ಟ್ರದಲ್ಲಿ ನಡೆದ ಭೀಮಾ ಕೋರೆಗಾಂವ ಯುದ್ಧವು ಅಸಮಾನತೆ ಮತ್ತು ಅನ್ಯಾಯದ ವಿರುದ್ಧ ನಡೆದ ಸ್ವಾಭಿಮಾನದ ಹೋರಾಟವಾಗಿದೆ. ಕೇವಲ 500



ದಲಿತ ಯೋಧರು 28 ಸಾವಿರ ಮೇಲ್ಜಾತಿ ಪೇಶ್ವೆ ಪಡೆಗಳನ್ನು ಸೋಲಿಸಿದ್ದು ಇತಿಹಾಸದ ಅಪರೂಪದ ಘಟನೆ. ಈ ಮಹತ್ವದ ಇತಿಹಾಸವನ್ನು ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ದೇಶಕ್ಕೂ ವಿಶ್ವಕ್ಕೂ ಪರಿಚಯಿಸಿದ್ದಾರೆ" ಎಂದು ಹೇಳಿದರು.

ಈ ಸಂದರ್ಭದಲ್ಲಿ ನಂದಮ್ಮ ಕುಂದೆ, ಸೊನ್ನಮ್ಮ ಕಸ್ತೂರೆ, ಶಶಿಕಲಾ ಕಾಂಬಳೆ, ಇಂದುಮತಿ ಸಾಗರ, ನಿವೃತ್ತ ಪೊಲೀಸ್ ಅಧಿಕಾರಿ ಬಸವರಾಜ ಮೆತ್ರೆ, ಸಿದ್ರಾಮಪ್ಪ, ಗಣರಾಜ್ಯೋತ್ಸವ ದಿನಾಚರಣೆ ಸಮಿತಿಯ ಗೌರವಾಧ್ಯಕ್ಷ ಅಂಬಾದಾಸ್ ಗಾಯಕವಾಡ, ಅಧ್ಯಕ್ಷ ಮುಖೇಶ್ ರಾಯ್ ಸೇರಿದಂತೆ ಚಂದ್ರಕಾಂತ ನಿರಾಟೆ, ಅರುಣ ಪಟೇಲ್, ಜಗನ್ನಾಥ ಗಾಯಕವಾಡ, ಗೋಪಾಲ ದೊಡ್ಡಿ, ಖುಷಿತ್ ದಾಂಡೇಕರ್, ಜೈ ಭೀಮ್ ಮಿಠಾರೆ, ಸುಬ್ಬಣ್ಣ ಕರಕ್ಕನಳ್ಳಿ, ಶರಣು ಫುಲೆ, ನವನಾಥ ವಂಟೆ, ಪ್ರಶಾಂತ ಭಾವಿಕಟ್ಟಿ, ರಾಜಶೇಖರ ಹಲಮಡಗೆ, ಶಿವರಾಜ ಅಮಲಾಪೂರ, ನಾಗೇಶ್ ಸಾಗಾರ, ಧನರಾಜ ಕೊಳ್ಳಾರ, ಸತೀಶ್ ದಿನೆ, ಎಂ.ಡಿ. ಅನ್ವರ್ ಶಾ, ಮೊಹಮ್ಮದ್ ಖಾಲಿದ್ ಹಾಗೂ ಇತರರು ಉಪಸ್ಥಿತರಿದ್ದರು.

## ಬಡತನದ ಬೆಂಕಿಯಲ್ಲಿ ಅರಳಿದ ಬೆಳದಿಂಗಳು

### ಬಡತನದಿಂದ ಬೆಳಕು ಕಂಡ ನಾಯಕತ್ವದ ಪ್ರೇರಣಾದಾಯಕ ಕಥೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಅತ್ಯಂತ ಹಿಂದುಳಿದ ಕುಟುಂಬದಲ್ಲಿ ಜನಿಸಿ, ಬಡತನದ ಕಠಿಣ ಪರಿಸ್ಥಿತಿಗಳಲ್ಲೇ ಬೆಳೆದ ಯಲ್ಲಪ್ಪ ಭೀಮಶೇನ್ ಪೂಜಾರಿ ಮೌರ್ಯ ಅವರು ಇಂದು ರಾಷ್ಟ್ರಮಟ್ಟದ ಸಂಘಟನೆಯಾದ *ಕಾರ್ಯನಿರತ ಪತ್ರಕರ್ತರ ಹಾಗೂ ಸಂಪಾದಕರ ಸಂಸ್ಥೆ, ನವದೆಹಲಿ* ಇದರ ರಾಜ್ಯಾಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಅವರ ಜೀವನ ಪಯಣವು ಹೋರಾಟ, ಆತ್ಮಸ್ಥೈರ್ಯ ಮತ್ತು ಸಮಾಜಪರ ಚಿಂತನೆಯ ಜೀವಂತ ಉದಾಹರಣೆಯಾಗಿದೆ.

ಬಾಲ್ಯದಿಂದಲೇ ಸಾಮಾಜಿಕ ಅಸಮಾನತೆ, ಅನ್ಯಾಯ ಮತ್ತು ಶೋಷಣೆಯನ್ನು ಹತ್ತಿರದಿಂದ ಕಂಡ ಅವರು, ಮೌನವಾಗಿರುವ ಬದಲು ಪ್ರಶ್ನಿಸುವ ಮನೋಭಾವವನ್ನು ಬೆಳೆಸಿಕೊಂಡರು. ಈ ಚಿಂತನೆ ಅವರನ್ನೆ ಪತ್ರಿಕೋದ್ಯಮದತ್ತ ಕರೆದೊಯ್ದಿತು. ಪತ್ರಿಕೋದ್ಯಮವನ್ನು ಕೇವಲ ವೃತ್ತಿಯಾಗಿ ಅಲ್ಲ, ಸಮಾಜ ಪರಿವರ್ತನೆಯ ಸಾಧನವಾಗಿ ಅವರು ಅರ್ಥ ಮಾಡಿಕೊಂಡರು.

ಪತ್ರಿಕೋದ್ಯಮ ಕ್ಷೇತ್ರದಲ್ಲಿ ಯಲ್ಲಪ್ಪ ಮೌರ್ಯ ಅವರು ತಮ್ಮದೇ ಆದ ಗುರುತನ್ನು ನಿರ್ಮಿಸಿಕೊಂಡಿದ್ದಾರೆ. ಪ್ರಸ್ತುತ ಅವರು "ಭೀಮ ಸಂಸ್ಕೃತಿ" ಪತ್ರಿಕೆಯ ಮೂಲಕ ದಮನಿತ, ಹಿಂದುಳಿದ ಮತ್ತು ಶ್ರಮಿಕ ವರ್ಗಗಳ ಧ್ವನಿಯನ್ನು ಸಮಾಜದ ಮುಂಚೂಣಿಗೆ ತರುತ್ತಿದ್ದಾರೆ. ಅವರ ಬರವಣಿಗೆ ಸತ್ಯನಿಷ್ಠೆ, ಧೈರ್ಯ ಮತ್ತು ಜನಪರ ನಿಲುವಿನಿಂದ ಕೂಡಿದೆ.

ಈ ಹಿಂದೆ ಅವರು ಟೈಮ್ ನ್ಯೂಸ್ (Time News), ಸುವರ್ಣ ನ್ಯೂಸ್ (Suvarna News), ಸೂರ್ಯೋದಯ ಟಿವಿ (Suryodaya TV) ಹಾಗೂ ಈ ಸಂಜೆ ಪತ್ರಿಕೆ (Ee Sanje Patrike) ಸೇರಿದಂತೆ ಇನ್ನೂ ಹತ್ತುಕ್ಕೂ ಹೆಚ್ಚು ವಿವಿಧ ಪತ್ರಿಕೆಗಳು ಹಾಗೂ ಸುದ್ದಿವಾಹಿನಿಗಳಲ್ಲಿ ವರದಿಗಾರನಾಗಿ ಮತ್ತು *ಮುಖ್ಯ ವರದಿಗಾರನಾಗಿ* ಕಾರ್ಯನಿರ್ವಹಿಸಿದ್ದಾರೆ. ಈ ಅನುಭವವು ಅವರಿಗೆ ಮಾಧ್ಯಮ ಕ್ಷೇತ್ರದಲ್ಲಿ ವಿಶಾಲ ಜ್ಞಾನ ಮತ್ತು ಗಟ್ಟಿ ನೆಲೆ ನೀಡಿದೆ.

ಯುವಕರಿಗೆ ಪ್ರೇರಣೆಯಾಗಿ ನಿಲ್ಲುವ ನಾಯಕನಾಗಿ ಯಲ್ಲಪ್ಪ ಭೀಮಶೇನ್ ಪೂಜಾರಿ ಮೌರ್ಯ ಅವರು ಸಮಾಜದಲ್ಲಿ ವಿಶಿಷ್ಟ ಸ್ಥಾನ ಪಡೆದಿದ್ದಾರೆ. "ಹಿನ್ನೆಲೆ ಎಷ್ಟೇ ಹಿಂದುಳಿದದ್ದಾಗಿದ್ದರೂ, ಗುರಿ ಸ್ಪಷ್ಟವಾಗಿದ್ದರೆ ಸಾಧನೆ ಸಾಧ್ಯ" ಎಂಬ ಸಂದೇಶವನ್ನು ಅವರು ತಮ್ಮ ಜೀವನದ ಮೂಲಕವೇ ಸಾರುತ್ತಿದ್ದಾರೆ.

ಇಂದು ಅವರು ಕೇವಲ ಪತ್ರಕರ್ತ ಅಥವಾ ಸಂಘಟನಾ ನಾಯಕ ಮಾತ್ರವಲ್ಲ; ಜನಮಾನಸದಲ್ಲಿ ಸದಾ ಜಗಮಗಿಸುವ, ಶೋಷಿತ ವರ್ಗಗಳ ಪರ ಧ್ವನಿಯಾಗಿರುವ ಯುವ ನಾಯಕನಾಗಿದ್ದಾರೆ. ಅವರ ಬದುಕು ಒಂದು ಸತ್ಯವನ್ನು ನಮಗೆ ನೆನಪಿಸುತ್ತದೆ.




Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)